## ಕರ್ನಾಟಕವನ್ನು ಲೂಟಿ ಮಾಡಲು ಕಾಂಗ್ರೆಸ್ ಸರ್ಕಾರ ಮುಂದಾಗಿದೆ: ಬಿಜೆಪಿ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಯಮಿತ ಸಂಸ್ಥೆಯಲ್ಲಿ ಭ್ರಷ್ಟಾಚಾರ ನಡೆದಿದೆ ಎಂಬ ಆರೋಪಗಳ ಹಿನ್ನೆಲೆಯಲ್ಲಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ನಾಯಕರು ವಾಗ್ದಾಳಿ ನಡೆಸಿದ್ದಾರೆ. ಕಾಂಗ್ರೆಸ್ ಶಾಸಕ ಕೆ. ಅಶೋಕ್ ಕುಮಾರ್ ರೈ ಅವರು ಬರೆದಿರುವ ಪತ್ರವು ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಭ್ರಷ್ಟಾಚಾರ ಹೊಸ ರೂಪ ಪಡೆದುಕೊಳ್ಳುತ್ತಿರುವುದನ್ನು ತೋರಿಸುತ್ತದೆ ಎಂದು ಅವರು ಆರೋಪಿಸಿದ್ದಾರೆ.

ಬಿಜೆಪಿ ಶಾಸಕ ಹಾಗೂ ಪ್ರಧಾನ ಕಾರ್ಯದರ್ಶಿ ವಿ. ಸುನಿಲ್ ಕುಮಾರ್ ಮಾತನಾಡಿ, ಕಾಂಗ್ರೆಸ್ ಸರ್ಕಾರ ಜಾರಿಗೊಳಿಸುತ್ತಿರುವ ಎಲ್ಲಾ ಯೋಜನೆಗಳಲ್ಲಿನ ಇತರೆ ವೆಚ್ಚಗಳು ದಿನದಿಂದ ದಿನಕ್ಕೆ ಹೆಚ್ಚುತ್ತಿವೆ ಎಂದು ಆರೋಪಿಸಿದರು. ಇದೀಗ ಹೆಚ್ಚುವರಿ ವೆಚ್ಚವಾಗಿ ಶೇ.7ರಷ್ಟು ಮಂತ್ರಿಗಳ


ಉದಯವಾಹಿನಿ ಚಿತ್ರ

ಚಾರ್ಜ್ ಕೂಡ ಸೇರ್ಪಡೆಯಾಗಿದೆ ಎಂದು ಅವರು ದೂರಿದರು. ಕೆಆರ್‌ಐಡಿಎಲ್‌ನಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳನ್ನು ಬಹಿರಂಗಪಡಿಸಿರುವ ಶಾಸಕ ರೈ ಅವರ ಪತ್ರವು ಕಾಂಗ್ರೆಸ್ ಸರ್ಕಾರ ರಾಜ್ಯವನ್ನು ಲೂಟಿ ಮಾಡಲು ಹೊರಟಿದೆ ಎಂಬುದಕ್ಕೆ ಸಾಕ್ಷಿಯಾಗಿದೆ ಎಂದು ಸುನಿಲ್ ಕುಮಾರ್ ಹೇಳಿದರು.

ಪೇಮೆಂಟ್ ಕೋಟಾ ಮೂಲಕ ಸಚಿವರಾದವರು ನಡೆಸುತ್ತಿರುವ ದರೋಡೆ ಆರಂಭವಾಗಿದೆ ಎಂದು ಅವರು ಆರೋಪಿಸಿದರು.

ಕೆಆರ್‌ಐಡಿಎಲ್‌ನಲ್ಲಿ ಕಮಿಷನ್ ದಂಧೆಯಲ್ಲಿ ಭಾಗಿಯಾಗಿದ್ದಾರೆ ಎನ್ನಲಾದ ಅಧಿಕಾರಿಗಳನ್ನು ಕೂಡಲೇ ಅಮಾನತುಗೊಳಿಸಬೇಕು ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಒತ್ತಾಯಿಸಿದರು.

## ಸಾವಿನ ದವಡೆಯಿಂದ ಜಸ್ಟ್ ಮಿಸ್; ಸುರಕ್ಷಿತವಾಗಿ ಬೆಂಗಳೂರಿಗೆ ಮರಳಿದ 17 ಮಂದಿ ಕನ್ನಡಿಗರು!

• ಉದಯವಾಹಿನಿ, ಬೆಂಗಳೂರು

ನೇಪಾಳ ಮತ್ತು ಟಿಬೆಟ್ ಗಡಿ ಭಾಗದಲ್ಲಿ ಉಂಟಾದ ಭೀಕರ ಪ್ರವಾಹ ಹಾಗೂ ಭೂಕುಸಿತದ ನಡುವೆ ಸಿಲುಕಿದ್ದ ಕರ್ನಾಟಕದ 17 ಚಾರಣಿಗರು ಸುರಕ್ಷಿತವಾಗಿ ಬೆಂಗಳೂರಿಗೆ ಮರಳಿದ್ದಾರೆ.

ಕಠ್ಮಂಡುವಿನಿಂದ ನಿಯಮಿತ ವಿಮಾನದ ಮೂಲಕ ಬೆಂಗಳೂರಿನ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿದ ಚಾರಣಿಗರನ್ನು ಕುಟುಂಬಸ್ಥರು ಮತ್ತು ಅಧಿಕಾರಿಗಳು ಬರಮಾಡಿಕೊಂಡರು. ತಾಯ್ನಾಡಿಗೆ ಮರಳಿದ ಚಾರಣಿಗರು ತಾವು ಅನುಭವಿಸಿದ ಆ ಭೀಕರ ಕ್ಷಣಗಳನ್ನು ನೆನೆದು ನಿಟ್ಟುಸಿರು ಬಿಟ್ಟರು.23 ಮಂದಿಯಿದ್ದ ಚಾರಣಿಗರ ತಂಡದ ಇನ್ನೂ ಇಬ್ಬರು ಸದಸ್ಯರು ಬುಧವಾರ ನಗರಕ್ಕೆ ಆಗಮಿಸುವ ನಿರೀಕ್ಷೆಯಿದೆ. ಪ್ರಸ್ತುತ ಬೆಂಗಳೂರಿಗೆ ಮರಳಿರುವ 17 ಮಂದಿ ಕನ್ನಡಿಗರು ನೇಪಾಳ ಏರ್‌ಲೈನ್ಸ್‌ನ ಖಂ 225 ವಿಮಾನದ ಮೂಲಕ ನಗರಕ್ಕೆ ಆಗಮಿಸಿದರು. ನೇಪಾಳಕ್ಕೆ ತೆರಳಿದ್ದ ಇವರ ತಂಡದಲ್ಲಿ ಬಹುತೇಕ ಮಂದಿಗೆ ಚಾರಣದ ಅನುಭವ ಇರಲಿಲ್ಲ. ನೇಪಾಳದ 'ಮೂನ್ ಹಿಮಾಲಯ ಅಡ್ವೆಂಚರ್' ಎಂಬ ಚಾರಣ ಸಂಸ್ಥೆಯ ಸೇವೆಯನ್ನು ಅವರು ಪಡೆದುಕೊಂಡಿದ್ದರು.

ಬೆಂಗಳೂರಿನ ನಿವಾಸಿ ಹಾಗೂ ತಂಡದ ಸದಸ್ಯ ಶ್ರೀನಿವಾಸುಲು ಯಾದತಿ ಮಾತನಾಡಿ, ''ಪ್ರವಾಹ ಸಂಭವಿಸುವ ಒಂದು ದಿನದ ಹಿಂದೆಯೇ ನಾವು ಅಲ್ಲಿಂದ ಹೊರಟಿದ್ದೆವು. ನೇಪಾಳದ ರಾಜಧಾನಿ ಕಠ್ಮಂಡುವಿನಿಂದ ಸುಮಾರು 150 ಕಿ.ಮೀ. ದೂರದಲ್ಲಿರುವ ಟಿಬೆಟ್ ಗಡಿಯ ಪಟ್ಟಣ ನ್ಯಾಲಮ್‌ನಲ್ಲಿದ್ದ ನಮ್ಮ ಹೋಟೆಲ್‌ನಿಂದ ಒಂದು ದಿನ ಮುಂಚಿತವಾಗಿ ಹೊರಟಿದ್ದೆವು. ಮರುದಿನ ಪ್ರವಾಹದ ಬಗ್ಗೆ ತಿಳಿದುಕೊಂಡಾಗ ಇಡೀ ಹೋಟೆಲ್ ಕಟ್ಟಡವೇ ಪ್ರವಾಹದ ನೀರಿನಲ್ಲಿ ಕೊಚ್ಚಿಹೋಗಿರುವುದು ತಿಳಿದುಬಂದಿತು ಎಂದು ಹೇಳಿದರು.


ಉದಯವಾಹಿನಿ ಚಿತ್ರ

## ಕೆಆರ್‌ಐಡಿಎಲ್ ಇಂಜಿನಿಯರ್‌ಗಳ ವಿರುದ್ಧದ ಭ್ರಷ್ಟಾಚಾರ ಆರೋಪಗಳ ತನಿಖೆಗೆ ಸಚಿವ ಖಂಡ್ರೆ ಆದೇಶ

• ಉದಯವಾಹಿನಿ, ಬೆಂಗಳೂರು

ಮಂಗಳೂರಿನಲ್ಲಿ ಕೆಆರ್‌ಐಡಿಎಲ್ ಅಧಿಕಾರಿಗಳ ವಿರುದ್ಧದ ಭ್ರಷ್ಟಾಚಾರ ಮತ್ತು ಬೆದರಿಕೆ ಆರೋಪಗಳ ಬಗ್ಗೆ ನಿಷ್ಪಕ್ಷಪಾತ ತನಿಖೆಗೆ ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಖಂಡ್ರೆ ಆದೇಶಿಸಿದ್ದಾರೆ. ಮಂಗಳೂರು ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ಲಿಮಿಟೆಡ್ (ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಮತ್ತು ಜೂನಿಯರ್ ಇಂಜಿನಿಯರ್‌ಗಳು ನಡೆಸಿರುವ ಭ್ರಷ್ಟಾಚಾರದ ಬಗ್ಗೆ ನಿಷ್ಪಕ್ಷಪಾತ


ಉದಯವಾಹಿನಿ ಚಿತ್ರ

ತನಿಖೆ ನಡೆಸಬೇಕೆಂದು ಪುತ್ತೂರು ಕಾಂಗ್ರೆಸ್ ಶಾಸಕ ಕೆ ಎ ಅಶೋಕ್ ಕುಮಾರ್ ರೈ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರಿಗೆ ದೂರು ನೀಡಿದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ. ಗ್ರಾ.ಮತ್ತು ಪಂ. ರಾ.ಜ್ ಇಲಾಖೆಯ ಕಾರ್ಯದರ್ಶಿಗೆ ಬರೆದ ಪತ್ರದಲ್ಲಿ ಸಚಿವರು, ಸಚಿವರ ಹೆಸರಿನಲ್ಲಿ 7 ಪ್ರತಿಶತ ಕಮಿಷನ್ ಸಂಗ್ರಹಿಸಲಾಗುತ್ತಿದೆ ಎಂದು ಆರೋಪಿಸಿರುವ ಮಾಧ್ಯಮ ವರದಿಗಳಿವೆ ಮತ್ತು ಸರ್ಕಾರ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಲಾಗಿದೆ ಎಂದು ಹೇಳಿದರು. ಜಿಲ್ಲಾ ಉಸ್ತುವಾರಿ ಸಚಿವರು ಇಲಾಖೆಯ ಸಚಿವರ ಹೆಸರಿನಲ್ಲಿ ಹಣ ವಸೂಲಿ ಮಾಡುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಯಾವುದೇ ಅಧಿಕಾರಿ, ಉದ್ಯೋಗಿ ಅಥವಾ ಇಂಜಿನಿಯರ್ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಅವರು ನಿರ್ದೇಶನ ನೀಡಿದರು. ಮಂಗಳೂರು ಕೆಆರ್‌ಐಡಿಎಲ್ ವಿಭಾಗದ ಕಾರ್ಯನಿರ್ವಾಹಕ ಎಂಜಿನಿಯರ್ ಮತ್ತು ಜೂನಿಯರ್ ಇಂಜಿನಿಯರ್‌ಗಳು ಭ್ರಷ್ಟಾಚಾರದಲ್ಲಿ ಭಾಗಿಯಾಗಿದ್ದಾರೆಯೇ ಮತ್ತು ಶಾಸಕರ ಆರೋಪಗಳು ನಿಜವೇ ಎಂದು ಖಚಿತಪಡಿಸಿಕೊಳ್ಳಲು ಸೂಪರಿಂಟೆಂಡೆಂಟ್ ಇಂಜಿನಿಯರ್ ದರ್ಜೆಯ ಅಧಿಕಾರಿಯ ನೇತೃತ್ವದ ಮೂವರು ಸದಸ್ಯರ ಸಮಿತಿಯಿಂದ ತನಿಖೆ ನಡೆಸುವಂತೆ ಖಂಡ್ರೆ ಆದೇಶಿಸಿದ್ದಾರೆ.

## ಕರ್ನಾಟಕದಲ್ಲಿ ಮೋಡ ಬಿತ್ತನೆಗೆ ಪರಿಸ್ಥಿತಿ ಪೂರಕವಾಗಿಲ್ಲ: ಹವಾಮಾನ ತಜ್ಞರು

### ಸೂಕ್ತವಾದ ಮೋಡಗಳು ಕಂಡುಬಂದಾಗ ಮಾತ್ರ ಮೋಡ ಬಿತ್ತನೆ ನಡೆಸಲು ಸಾಧ್ಯ ಎಂದು ತಿಳಿಸಿದ್ದಾರೆ.

• ಉದಯವಾಹಿನಿ, ಬೆಂಗಳೂರು

1 ಏಕೆ ಪರಿಸ್ಥಿತಿ ಅನುಕೂಲವಾಗಿಲ್ಲ

2 ಬಿತ್ತನೆಯ ಅಗತ್ಯವೇ ಇರುವುದಿಲ್ಲ

3 ತೇಲಾಡುವಂತಹ ಮೋಡಗಳೇ ಇಲ್ಲ

ರಾಜ್ಯದ ಕೆಲವು ಭಾಗಗಳಲ್ಲಿ ಬರ ಪರಿಸ್ಥಿತಿ ಉಂಟಾಗಿರುವ ಹಿನ್ನೆಲೆಯಲ್ಲಿ ಮೋಡ ಬಿತ್ತನೆ ನಡೆಸಲು ಸರ್ಕಾರ ಎರಡು ಸಮಿತಿಗಳನ್ನು ರಚಿಸಿರುವ ನಡುವೆಯೇ, ಸದ್ಯದ ಹವಾಮಾನ ಪರಿಸ್ಥಿತಿಗಳು ಅನುಕೂಲಕರವಾಗಿಲ್ಲದ ಕಾರಣ ಈ ಪ್ರಯತ್ನ ವ್ಯರ್ಥವಾಗಬಹುದು ಎಂದು ಹವಾಮಾನ ತಜ್ಞರು ಹೇಳಿದ್ದಾರೆ.

ಸಭೆ ಸೇರಿದಂತೆ ಕಳೆದ ಕೆಲವು ಸಭೆಗಳಲ್ಲಿ ಹವಾಮಾನ ತಜ್ಞರು ರಾಜ್ಯ ಸರ್ಕಾರಕ್ಕೆ ಮೋಡ ಬಿತ್ತನೆಗೆ ಸದ್ಯದ ಪರಿಸ್ಥಿತಿಗಳು ಅನುಕೂಲಕರವಾಗಿಲ್ಲ ಎಂದು ಎಚ್ಚರಿಸಿದ್ದಾರೆ. ಸೆಪ್ಟೆಂಬರ್ 20ರಿಂದ ಮೋಡ ಬಿತ್ತನೆ ನಡೆಸುವ ಯೋಜನೆಯನ್ನು ಅಕ್ಟೋಬರ್ ವರೆಗೆ ಮುಂದೂಡುವಂತೆ ಅವರು ಸಲಹೆ ನೀಡಿದ್ದಾರೆ. ಆಗ ಪರಿಸ್ಥಿತಿಗಳು ಅನುಕೂಲಕರವಾಗುವ ಸಾಧ್ಯತೆಯಿದೆ. ನೈಋತ್ಯ ಮುಂಗಾರು ಅಕ್ಟೋಬರ್ 10ರವರೆಗೆ ಮುಂದುವರಿಯಲಿರುವುದರಿಂದ ಮೋಡ ಬಿತ್ತನೆಗೆ ಹೆಚ್ಚಿನ ಕಾಲಾವಕಾಶವಿದೆ. ಹೀಗಾಗಿ ಸರ್ಕಾರ ತರಾತುರಿಯಲ್ಲಿ ಈ ಪ್ರಯೋಗ ನಡೆಸಬಾರದು ಎಂದು ಅವರು ಹೇಳಿದ್ದಾರೆ. ಸಭೆಯಲ್ಲಿ ಭಾಗವಹಿಸಿದ್ದ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಮೇಲ್ವಿಚಾರಣಾ ಕೇಂದ್ರದ ಹಿರಿಯ ಅಧಿಕಾರಿಯೊಬ್ಬರು, ಸೂಕ್ತವಾದ ಮೋಡಗಳು ಕಂಡುಬಂದಾಗ ಮಾತ್ರ ಮೋಡ ಬಿತ್ತನೆ ನಡೆಸಲು ಸಾಧ್ಯ ಎಂದು ತಿಳಿಸಿದ್ದಾರೆ. ಕರ್ನಾಟಕ ನೀರಾವರಿ ನಿಗಮ ನಿಯಮಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಭಾರತೀಯ ಹವಾಮಾನ ಇಲಾಖೆ, ಭಾರತೀಯ ವಿಜ್ಞಾನ ಸಂಸ್ಥೆ ಭಾರತೀಯ ಉಷ್ಣವಲಯ ಹವಾಮಾನಶಾಸ್ತ್ರ ಸಂಸ್ಥೆ ಜಲಸಂಪನ್ಮೂಲ ಇಲಾಖೆ, ನಿವೃತ್ತ ತಜ್ಞರು ಹಾಗೂ ಹವಾಮಾನ ಪರಿಣಿತರು ಸೋಮವಾರದ ಸಭೆಯಲ್ಲಿ ಭಾಗವಹಿಸಿದ್ದರು. ಸಭೆಯಲ್ಲಿ ಮುಂಗಾರು ಮಳೆಯ ಸ್ವರೂಪ ಮತ್ತು ಬರ ಪರಿಸ್ಥಿತಿ


ಉದಯವಾಹಿನಿ ಚಿತ್ರ

ಕುರಿತು ಚರ್ಚಿಸಲಾಯಿತು.

ಮೋಡ ಬಿತ್ತನೆಗೆ ಸೂಕ್ತ ಸಾಂದ್ರತೆಯ ಕ್ಯುಮುಲೋನಿಂಬಸ್ ಮತ್ತು ಕ್ಯುಮುಲಸ್ ಮೋಡಗಳು ಇರಬೇಕು. ಆದರೆ ಸದ್ಯ ಇವುಗಳ ಕೊರತೆಯಿದೆ ಎಂದು ಐಎಂಡಿಯ ಹಿರಿಯ ಅಧಿಕಾರಿಯೊಬ್ಬರು ವಿವರಿಸಿದ್ದಾರೆ. ಇದರ ಜೊತೆಗೆ ಸಮುದ್ರದ ಮೇಲಿನ ಕಡಿಮೆ ಒತ್ತಡದ ತಗ್ಗು ಪ್ರದೇಶ (ಆಫ್‌ಶೋರ್ ಟ್ರಫ್) ಮತ್ತು ಅನುಕೂಲಕರ ಗಾಳಿಯ ಚಲನೆ ಇರಬೇಕು. ನೆಲದ ಮೇಲ್ಮೈಯಿಂದ ಮೋಡಗಳವರೆಗೆ ವಾತಾವರಣದಲ್ಲಿ ಕನಿಷ್ಠ 55=60 ಮಿ.ಮೀ. ತೇವಾಂಶವೂ ಇರಬೇಕು. ಆಗ ಮಾತ್ರ ಮೋಡ ಬಿತ್ತನೆ ನಡೆಸಲು ಸಾಧ್ಯ ಎಂದು ಅವರು ತಿಳಿಸಿದ್ದಾರೆ. ಈ ವರ್ಷ ಬಂಗಾಳ ಕೊಲ್ಲಿಗೆ ಹೋಲಿಸಿದರೆ ಅರಬ್ಬಿ ಸಮುದ್ರದ ಮೇಲಿನ ಹವಾಮಾನ ವ್ಯವಸ್ಥೆಗಳು ದುರ್ಬಲವಾಗಿವೆ. ಇದರಿಂದಾಗಿ ಉತ್ತರ ಭಾರತದ ಕೆಲವು ಭಾಗಗಳಲ್ಲಿ ಉತ್ತಮ ಮಳೆಯಾಗುತ್ತಿದೆ. ಪಶ್ಚಿಮ ಘಟ್ಟಗಳ ಪ್ರದೇಶದಲ್ಲಿನ ಮುಂಗಾರು ತಗ್ಗು ಪ್ರದೇಶವು ಕರಾವಳಿ ಮತ್ತು ಉತ್ತರ ಕರ್ನಾಟಕದಲ್ಲಿ ಮಳೆಯಾಗಲು ನೆರವಾಗುತ್ತಿದೆ. ಆದರೆ ಕರ್ನಾಟಕದ ಒಳನಾಡು ಮತ್ತು ದಕ್ಷಿಣ ಒಳನಾಡು ಕರ್ನಾಟಕದಲ್ಲಿ ಮಳೆ ಕೊರತೆಯಾಗಿದೆ'' ಎಂದು ಐಎಂಡಿ ಅಧಿಕಾರಿ ತಿಳಿಸಿದ್ದಾರೆ.

**ಮೋಡ ಬಿತ್ತನೆಗೆ ಸೂಕ್ತ**

**ಸದ್ಯ ಗುಡುಗು ಸಹಿತ ಮೋಡಗಳು ಅಥವಾ ಕ್ಯುಮುಲೋನಿಂಬಸ್ ಮೋಡಗಳಿಲ್ಲ. ಇವು ಸಾಮಾನ್ಯವಾಗಿ ಈಶಾನ್ಯ ಮುಂಗಾರು ಅವಧಿಯಲ್ಲಿ ಕಂಡುಬರುತ್ತವೆ ಮತ್ತು ಮೋಡ ಬಿತ್ತನೆಗೆ ಸೂಕ್ತವಾಗಿರುತ್ತವೆ. ಆದರೆ ಸಾಕಷ್ಟು ದಟ್ಟವಾದ ಮೋಡಗಳಿದ್ದರೆ ಮೋಡ ಬಿತ್ತನೆಯ ಅಗತ್ಯವೇ ಇರುವುದಿಲ್ಲ.**

ಆದರೆ ಸದ್ಯ ಆಕಾಶದಲ್ಲಿ ತೇಲಾಡುವಂತಹ ಮೋಡಗಳೇ ಇಲ್ಲ. ಮುಂದಿನ ಕೆಲವು ವಾರಗಳಲ್ಲೂ ಅನುಕೂಲಕರ ಹವಾಮಾನ ಮುನ್ಸೂಚನೆ ಇಲ್ಲ. ಮೋಡಗಳ ರಚನೆಗೆ ನೆರವಾಗುವಂತಹ ಯಾವುದೇ ವ್ಯವಸ್ಥೆಗಳು ಸಾಗರದಲ್ಲಿ ರೂಪುಗೊಳ್ಳದಿರುವುದರಿಂದ ಮೋಡಗಳನ್ನು ಪತ್ತೆಹಚ್ಚುವ ಕಾರ್ಯವೂ ವ್ಯರ್ಥವಾಗಬಹುದು ಎಂದು ಅವರು ಹೇಳಿದ್ದಾರೆ. –ಹವಾಮಾನ ತಜ್ಞರು



## ಸಿವಿಲ್ ವಿವಾದಗಳನ್ನು ಕ್ರಿಮಿನಲ್ ಕೇಸ್ ಆಗಿ ಸೇಡು ತೀರಿಸಿಕೊಳ್ಳಲು ಅವಕಾಶವಿಲ್ಲ ಎಂದ ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ಕೆಲವು ಕಾನೂನುಗಳನ್ನು ದುರುಪಯೋಗ ಪಡಿಸಿಕೊಳ್ಳುವವರ ಸಂಖ್ಯೆ ಹೆಚ್ಚಾಗುತ್ತಿದೆ. ಅದರಲ್ಲೂ, ಕೆಲವರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ತಡೆ) ಕಾಯ್ದೆಯ ಅಡಿಯಲ್ಲಿ ಬೇರೆ ಬೇರೆ ಪ್ರಕರಣಗಳಿಗೂ ದೂರು ದಾಖಲಿಸುತ್ತಿದ್ದರು.

ಆದರೆ, ಇದಕ್ಕೆ ಲಗಾಮು ಹಾಕಿರುವ ಕರ್ನಾಟಕ ಹೈಕೋರ್ಟ್, ನಾಗರಿಕ (ಸಿವಿಲ್) ವ್ಯಾಜ್ಯಗಳನ್ನು ಕ್ರಿಮಿನಲ್ ಪ್ರಕರಣಗಳಾಗಿ ಪರಿವರ್ತಿಸಿ ಸೇಡು ತೀರಿಸಿಕೊಳ್ಳಲು ಬಳಸಬಾರದು ಎಂದು ಸ್ಪಷ್ಟಪಡಿಸಿದೆ. ಆನೇಕಲ್ ತಾಲ್ಲೂಕಿನ ಜಿಗಣಿ ಹೋಬಳಿಯ ಮಹಾಲಿಂಗಪುರದಲ್ಲಿರುವ 6.20 ಎಕರೆ ಜಮೀನಿಗೆ ಸಂಬಂಧಿಸಿದಂತೆ ದೂರುದಾರರು ಮತ್ತು ಆರೋಪಿಗಳ ನಡುವೆ ಈಗಾಗಲೇ 2016ರಿಂದ ಸಿವಿಲ್ ನ್ಯಾಯಾಲಯದಲ್ಲಿ ಕಾನೂನು ಹೋರಾಟ ನಡೆಯುತ್ತಿದೆ.

**ಇದರೊಂದಿಗೆ, ಸ್ಥಿರಾಸ್ತಿಯ ಹಕ್ಕು ಯಾರಿಗೆ ಸೇರಿದ್ದು ಎಂಬುದು ನ್ಯಾಯಾಲಯದಲ್ಲಿ ಇನ್ನೂ ನಿರ್ಧಾರವಾಗದಿರುವಾಗ, ಸಿವಿಲ್ ವ್ಯಾಜ್ಯವನ್ನು ಆಧಾರವಾಗಿಟ್ಟುಕೊಂಡು ಎಸ್‌ಸಿ/ಎಸ್‌ಟಿ ಕಾಯ್ದೆಯಡಿ ಕ್ರಿಮಿನಲ್ ಪ್ರಕರಣ ದಾಖಲಿಸಲು ಕಾನೂನಿನಲ್ಲಿ ಅವಕಾಶವಿಲ್ಲ ಎಂದು ನ್ಯಾಯಪೀಠ ಹೇಳಿದೆ**

ಇದರ ನಡುವೆಯೇ, ದೂರುದಾರೆ ಉಮಾ ಎಂಬುವವರು ಮಂಜುನಾಥ್ ಸೇರಿದಂತೆ ಏಳು ಜನರ ವಿರುದ್ಧ ಗಂಭೀರ ಆರೋಪ ಮಾಡಿ, ಜಿಗಣಿಯ ಜಾಗದಲ್ಲಿದ್ದ ತಮ್ಮ ದಿವಂಗತ ತಂದೆಯ ಸಮಾಧಿ ಕಲ್ಲನ್ನು ಕಿತ್ತುಹಾಕಲಾಗಿದೆ ಮತ್ತು ತಮ್ಮ ಕುಟುಂಬಕ್ಕೆ ಜಾತಿ ನಿಂದನೆ ಮಾಡಲಾಗಿದೆ ಎಂದು ದೂರು ದಾಖಲಿಸಿದ್ದರು. ಇದರ ಅನ್ವಯ ಆರೋಪಿಗಳ ಮೇಲೆ ಎಸ್‌ಸಿ-ಎಸ್‌ಟಿ ದೌರ್ಜನ್ಯ ತಡೆ ಕಾಯ್ದೆಯ ಹಲವು ಕಲಂಗಳು ಹಾಗೂ ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ 329, 351 ಮತ್ತು 45 ರ ಅಡಿಯಲ್ಲಿ ಪ್ರಕರಣ ದಾಖಲಾಗಿತ್ತು. ಮುಂದುವರೆದು, ಅಧೀನ ನ್ಯಾಯಾಲಯವು ತನಿಖೆ ನಡೆಸಿ ವರದಿ



ಉದಯವಾಹಿನಿ ಚಿತ್ರ

ನೀಡುವಂತೆ ಪೊಲೀಸರಿಗೆ ಸೂಚಿಸಿದಾಗ, ಆರೋಪಿಗಳು ಎಫ್‌ಐಆರ್ ರದ್ದು ಕೋರಿ ಹೈಕೋರ್ಟ್‌ಗೆ ಕ್ರಿಮಿನಲ್ ಅರ್ಜಿ ಸಲ್ಲಿಸಿದ್ದರು. ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠವು ಅರ್ಜಿಯ ವಿಚಾರಣೆ ನಡೆಸಿ, ಈ ವಿವಾದವು ಸಂಪೂರ್ಣವಾಗಿ ಸಿವಿಲ್ ಸ್ವರೂಪದ್ದು ಎಂದು ಸ್ಪಷ್ಟಪಡಿಸಿದೆ.

## ಹರಿಕಥಾ ವಿದ್ವಾನ್ ಸೋಸಲೆ ನಾರಾಯಣದಾಸ್ ಪ್ರಶಸ್ತಿ ಸ್ವೀಕರಿಸಿದ ಜಿ.ವಿ. ಶ್ರೀನಿವಾಸಮೂರ್ತಿ

• ಉದಯವಾಹಿನಿ, ಬೆಂಗಳೂರು

ಸೋಸಲೆ ಪ್ರಕಾಶ್ ಮತ್ತು ಕುಟುಂಬದವರು ತಮ್ಮ ತೀರ್ಥರೂಪರಾದ ಹರಿಕಥಾ ವಿದ್ವಾನ್ ಕೀರ್ತಿಶೇಷ ಸೋಸಲೆ ನಾರಾಯಣ ದಾಸ್ ಅವರ ಹೆಸರಿನಲ್ಲಿ ಒಂದು ಟ್ರಸ್ಟ್ ಪ್ರಾರಂಭಿಸಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಸಲ್ಲಿಸಿದ/ಮಹನೀಯರಿಗೆ ಪ್ರಶಸ್ತಿ ಪ್ರದಾನ ಮಾಡುತ್ತಾ ಬಂದಿದ್ದಾರೆ.

ನಾಡಿನ ಹೆಸರಾಂತ ಗಾಯಕರಿಗೆ, ಕಲಾವಿದರಿಗೆ, ರಾಜಕೀಯ ಧುರೀಣರಿಗೆ ಈ ಪ್ರಶಸ್ತಿಯನ್ನು ಹಲವಾರು ವರ್ಷಗಳಿಂದ ನೀಡಲಾಗುತ್ತಿದ್ದು, ಈ ವರ್ಷದ (2026) ಪ್ರಶಸ್ತಿಯನ್ನು ಹರಿದಾಸ ಸಾಹಿತ್ಯ ಕ್ಷೇತ್ರದಲ್ಲಿ ಸುಮಾರು 35 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಶ್ರೀ ಜಿ.ವಿ. ಶ್ರೀನಿವಾಸ ಮೂರ್ತಿಯವರಿಗೆ ನೀಡಲಾಗಿದೆ. ಈ ಪ್ರಶಸ್ತಿಯನ್ನು ಶ್ರೀ ರಾಘವೇಂದ್ರ ಗುರುಸಾರ್ವಭೌಮರ ಆರಾಧನೆಯಂದು ನೀಡಿದ್ದು ಮತ್ತೊಂದು ವಿಶೇಷ.


ಉದಯವಾಹಿನಿ ಚಿತ್ರ

**ಪ್ರಶಸ್ತಿ ಪುರಸ್ಕೃತರ ಕಿರುಪರಿಚಯ :** ಖ್ಯಾತ ಗಾಯಕರಾದ ಶ್ರೀ ಪುತ್ತೂರು ನರಸಿಂಹ ನಾಯಕ್ ಅವರು ಹಾಡಿರುವ ಮಧ್ವನಾಮ ಧ್ವನಿ ಸುರುಳಿ ಇಂದ ಮಧ್ವನಾಮ ಮೂರ್ತಿ ಎಂದೇ ಪ್ರಸಿದ್ಧರಾದ ಶ್ರೀಯುತರು ದೇವರು ಕೊಟ್ಟಾನು, ಗಜೇಂದ್ರ ಮೋಕ್ಷ, ಮುಂತಾದ 75ಕ್ಕೂ ಹೆಚ್ಚು ಧ್ವನಿಸುರುಳಿಗಳನ್ನು ಹೊರತಂದಿದ್ದು ಇಂದಿಗೂ ಜನಪ್ರಿಯವಾಗಿ ಉಳಿದಿವೆ. ಕರ್ನಾಟಕದ ಹರಿದಾಸರು ಎಂಬ ಸುಮಾರು 45 ಹರಿದಾಸರ ಜೀವನ ಚರಿತ್ರೆಯನ್ನು ತಿಳಿಸುವ ಪ್ರವಚನಗಳನ್ನು ಹರಿದಾಸರ ಬಗ್ಗೆ ಪಿ.ಎಚ್.ಡಿ. ಮಾಡಿರುವ ಹಾಗೂ ನಾಡಿನ ಹಿರಿಯ ವಿದ್ವಾಂಸರಿಂದ ಮಾಡಿಸಿರುವುದು ವಿಶೇಷ.

2001ರಲ್ಲಿ ಹರಿದಾಸ ಸಂಪದ ಟ್ರಸ್ಟ್ ಎಂಬ ಸಂಸ್ಥೆಯನ್ನು ಗೆಳೆಯರೊಂದಿಗೆ ಸೇರಿ ಹರಿದಾಸ ಹಬ್ಬ ಎಂಬ ಶೀರ್ಷಿಕೆಯಲ್ಲಿ ಏಳು ದಿನಗಳ ಕಾಲ ಹರಿದಾಸರ ಪದಗಳನ್ನು ಹಾಗೂ ಪ್ರವಚನಗಳನ್ನು ನಗರದ ಪ್ರತಿಷ್ಠಿತ ವೇದಿಕೆಯಾದ ಗಾಯನ ಸಮಾಜದಲ್ಲಿ ನಾಡಿನ ಎಲ್ಲಾ ಪ್ರಸಿದ್ಧ ಗಾಯಕ-ಗಾಯಕಿಯರಲ್ಲದೆ ಯುವ ಪ್ರತಿಭೆಗಳು ಸಹ ಅಲ್ಲಿ ಹಾಡುವಂತೆ ಮಾಡಿರುವುದು ಇಂದಿಗೂ ಜನಪ್ರಿಯವಾಗಿದೆ. ಹರಿದಾಸರ ಸಂದೇಶಗಳನ್ನು ಸಾರುವ T-shirt'ಗಳನ್ನು ಮಾಡಿ ಜನಪ್ರಿಯವಾಗಿರುವುದು ಎಲ್ಲಾ ಹರಿದಾಸರ ಭಾವಚಿತ್ರಗಳಿರುವ ಕ್ಯಾಲೆಂಡರುಗಳನ್ನು ಮಾಡಿಸಿ ದೇಶ-ವಿದೇಶಗಳಲ್ಲಿ ಎಲ್ಲಾ ಹರಿದಾಸರ ಬಂಧುಗಳ ಮನೆ-ಮಠದಲ್ಲಿ ರಾರಾಜಿಸುತ್ತಿವೆ. ಹರಿದಾಸ ಸಂಪದ ಟ್ರಸ್ಟ್, ಹರಿದಾಸ ಸೇವಾ ಸಂಘ, ದಾಸವಾಣಿ ಕರ್ನಾಟಕ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವುದಲ್ಲದೇ ಕಳೆದ 35 ವರ್ಷಗಳಿಂದ ಹರಿದಾಸ ಸಾಹಿತ್ಯಕ್ಕೆ ತಮ್ಮದೇ ಆದ ವಿಶೇಷ-ವಿಶಿಷ್ಟ ರೀತಿಯಲ್ಲಿ ಸೇವೆಯನ್ನು ಸಲ್ಲಿಸುತ್ತಿರುವ ಶ್ರೀ ಜಿ.ವಿ. ಶ್ರೀನಿವಾಸ ಮೂರ್ತಿಯವರಿಗೆ ಹರಿದಾಸ ಸಾಹಿತ್ಯ ಸೇವಾ ಧುರಂಧರ ಎಂಬ ಪ್ರಶಸ್ತಿಯನ್ನು ಪ್ರದಾನ ಮಾಡಿ ಸನ್ಮಾನಿಸಲಾಯಿತು.

## ಪಶುವೈದ್ಯಾಧಿಕಾರಿ ನೇಮಕಾತಿ ಹಗರಣ: ಪ್ರತಿ ಅಭ್ಯರ್ಥಿಗಳಿಂದ 40 ಲಕ್ಷ ರೂ. ಸಂಗ್ರಹ!

• ಉದಯವಾಹಿನಿ, ಬೆಂಗಳೂರು

ಸುಮಾರು 400 ಪಶುವೈದ್ಯಾಧಿಕಾರಿಗಳ ನೇಮಕಾತಿಯಲ್ಲಿ ನಡೆದಿದೆ ಎನ್ನಲಾದ ಹಗರಣದ ಕುರಿತು ಸಿಐಡಿ ನಡೆಸುತ್ತಿರುವ ತನಿಖೆಯಲ್ಲಿ, ಪ್ರತಿ ಹುದ್ದೆಗೆ 40 ಲಕ್ಷ ರೂಪಾಯಿಗಳವರೆಗೆ ಹಣ ಸಂಗ್ರಹಿಸುತ್ತಿದ್ದ ದೊಡ್ಡ ಜಾಲವೊಂದು ಪತ್ತೆಯಾಗಿದೆ. ಆರು ಅಭ್ಯರ್ಥಿಗಳು ಹಣ ಪಾವತಿಸಿ, ಈ ಜಾಲದ ಮೂಲಕ ನೇಮಕಾತಿ ಪರೀಕ್ಷೆಗೆ ಹಾಜರಾಗಿದ್ದಾಗಿ ಒಪ್ಪಿಕೊಂಡಿದ್ದಾರೆ ಎನ್ನಲಾಗಿದೆ. ಈ ಅಭ್ಯರ್ಥಿಗಳ ಮನೆಗಳ ಮೇಲೆ ನಡೆಸಿದ ಶೋಧ ಮತ್ತು ಅವರ ವಿಚಾರಣೆಯಿಂದ ಹಗರಣಕ್ಕೆ ಸಂಬಂಧಿಸಿದ ಮಹತ್ವದ ಮಾಹಿತಿ ಲಭ್ಯವಾಗಿದೆ. ಆದರೆ, ಆರು ಅಭ್ಯರ್ಥಿಗಳು ನೀಡಿರುವ ಹೇಳಿಕೆ ಅಥವಾ ಒಪ್ಪಿಕೊಂಡಿರುವ ಅಂಶಗಳ ಕುರಿತು ಸಿಐಡಿ ಅಧಿಕಾರಿಗಳು ಯಾವುದೇ ವಿವರಗಳನ್ನು ಬಹಿರಂಗಪಡಿಸಿಲ್ಲ.ಇಂತಹ ಅಭ್ಯರ್ಥಿಗಳಿಗೆ ಪರೀಕ್ಷೆ ನಡೆಸಲಾಗುತ್ತಿತ್ತು ಎನ್ನಲಾದ ಕೆಲವು ರಹಸ್ಯ ಕೇಂದ್ರಗಳನ್ನು ಸಿಐಡಿ ಅಧಿಕಾರಿಗಳು ಪತ್ತೆಹಚ್ಚಿದ್ದಾರೆ. ಅವರನ್ನು ಬೆಂಗಳೂರಿನ ರೆಸಾರ್ಟ್‌ಗಳು, ತುಮಕೂರಿನ ದೇವರಾಯನದುರ್ಗ ಹಾಗೂ ಆಂಧ್ರಪ್ರದೇಶದ ಕೆಲವು ಸ್ಥಳಗಳಲ್ಲಿ ಇರಿಸಿ ತರಬೇತಿ ನೀಡಲಾಗುತ್ತಿತ್ತು ಎಂದು ಆರೋಪಿಸಲಾಗಿದೆ.

## ಕಾನೂನು ತಂಡದ ಜೊತೆ ಸಚಿವ ಚಲುವರಾಯಸ್ವಾಮಿ ಮಹತ್ವದ ಸಭೆ..!

• ಉದಯವಾಹಿನಿ, ಬೆಂಗಳೂರು

ಕರ್ನಾಟಕದ ನೀರಿನ ಹಕ್ಕುಗಳ ರಕ್ಷಣೆ ಹಾಗೂ ರಾಜ್ಯದ ನೀರಾವರಿ ಯೋಜನೆಗಳಿಗೆ ಅಗತ್ಯವಿರುವ ಕಾನೂನುಬದ್ಧ ಅನುಮೋದನೆಗಳನ್ನು ತ್ವರಿತಗೊಳಿಸುವ ಕುರಿತು ಸಚಿವ ಎನ್. ಚಲುವರಾಯಸ್ವಾಮಿ ಅವರು ಮಂಗಳವಾರ ನವದೆಹಲಿಯಲ್ಲಿ ರಾಜ್ಯದ ಕಾನೂನು ಮತ್ತು ತಾಂತ್ರಿಕ ತಜ್ಞರೊಂದಿಗೆ ಉನ್ನತ ಮಟ್ಟದ ಸಮಾಲೋಚನಾ ಸಭೆ ನಡೆಸಿದರು. ಕಾವೇರಿ, ಕೃಷ್ಣಾ, ಮಹದಾಯಿ ಮತ್ತು ಪೆನ್ನೈಯಾರ್ ಜಲ ವಿವಾದಗಳಿಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್‌ನಲ್ಲಿ ನಡೆಯುತ್ತಿರುವ ವಿಚಾರಣೆಗಳ ಕುರಿತು ಸಭೆಯಲ್ಲಿ ಪರಿಶೀಲನೆ ನಡೆಸಲಾಯಿತು. ಅಲ್ಲದೆ, ತಮಿಳುನಾಡಿನ ಕಾವೇರಿ-ವೈಗೈ-ಗುಂಡಾರ್ ನದಿ ಜೋಡಣೆ ಯೋಜನೆಗೆ ಸಂಬಂಧಿಸಿದ ವಿಷಯಗಳ ಬಗ್ಗೆಯೂ ಚರ್ಚೆ ನಡೆಯಿತು. ಸಭೆಯಲ್ಲಿ ಜಲಸಂಪನ್ಮೂಲ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ, ಸುಪ್ರೀಂ ಕೋರ್ಟ್‌ನ ಹಿರಿಯ ವಕೀಲರಾದ ಕುಶ್ವಿಂದರ್ ಮೊಹ್ರಾ ಹಾಗೂ ಮಯಾಂಕ್ ಜೈನ್, ಸುಪ್ರೀಂ ಕೋರ್ಟ್ ಅಡ್ವೊಕೇಟ್-ಆನ್-ರೆಕಾರ್ಡ್ ನಿಶಾಂತ್ ಪಾಟೀಲ್, ಐಎಸ್‌ಡಬ್ಲ್ಯು ಮುಖ್ಯ ಇಂಜಿನಿಯರ್ ನಂದೀಶ್, ಉಪ ತಾಂತ್ರಿಕ ಸಲಹೆಗಾರ ಅನಂತ್ ಹಾಗೂ ದೆಹಲಿ ಐಎಸ್‌ಡಬ್ಲ್ಯು ಕಾರ್ಯನಿರ್ವಾಹಕ ಇಂಜಿನಿಯರ್ ಸ್ವೀಟಿ ಭಾಗವಹಿಸಿದ್ದರು. ಸಭೆಯಲ್ಲಿ ಕರ್ನಾಟಕದ ನೀರಿನ ಹಿತಾಸಕ್ತಿಗಳನ್ನು ರಕ್ಷಿಸಲು ಅಗತ್ಯವಿರುವ ಎಲ್ಲಾ ಕಾನೂನು ಕ್ರಮಗಳನ್ನು ಕೈಗೊಳ್ಳುವಂತೆ ಸಚಿವ ಚಲುವರಾಯಸ್ವಾಮಿ ಅವರು ಕಾನೂನು ತಂಡಕ್ಕೆ ಸೂಚಿಸಿದರು. ವಿಶೇಷವಾಗಿ ಮೇಕೆದಾಟು ಸಮತೋಲನ ಜಲಾಶಯ ಯೋಜನೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರವು ವಿವರವಾದ ಯೋಜನಾ ವರದಿ ಹಾಗೂ ಅರಣ್ಯ ಅನುಮತಿ ಪ್ರಕ್ರಿಯೆಗಳನ್ನು ವಿವಿಧ ಹಂತಗಳಲ್ಲಿ ಮುಂದುವರಿಸಿದ್ದು, ಬಾಕಿ ಇರುವ ಅನುಮೋದನೆಗಳನ್ನು ತ್ವರಿತಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

## ಕೆ.ಆರ್. ಮಾರುಕಟ್ಟೆಯಲ್ಲಿ ಸರಕು ವಾಹನಗಳಿಗೆ ಸ್ಮಾರ್ಟ್ ಗೇಟ್ ಶುಲ್ಕ, ಎಷ್ಟು?

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಹೃದಯ ಭಾಗ ಕೆ.ಆರ್. ಮಾರುಕಟ್ಟೆ ಆವರಣಕ್ಕೆ ಪ್ರವೇಶಿಸುವ ಸರಕು ಸಾಗಣೆ ವಾಹನಗಳಿಗೆ 350 ರೂಪಾಯಿಗಳವರೆಗೆ ಪ್ರವೇಶ ಶುಲ್ಕ ವಿಧಿಸಲು ಉದ್ದೇಶಿಸಲಾಗಿದೆ. ಬೆಂಗಳೂರು ಸೆಂಟ್ರಲ್ ಸಿಟಿ ಕಾರ್ಪೊರೇಷನ್ ಪ್ರಸ್ತಾಪಿಸಿರುವ 10 ವರ್ಷಗಳ ಸ್ಮಾರ್ಟ್ ಗೇಟ್ ಗುತ್ತಿಗೆ ಒಪ್ಪಂದದಡಿ ಈ ಶುಲ್ಕ ಜಾರಿಯಾಗಲಿದೆ.

ಶುಲ್ಕದ ಪಟ್ಟಿಯ ಪ್ರಕಾರ, ಟ್ರಕ್‌ಗಳು ಹಾಗೂ ಆರು ಚಕ್ರ ಅಥವಾ ಅದಕ್ಕಿಂತ ಹೆಚ್ಚಿನ ಚಕ್ರಗಳ ವಾಹನಗಳಿಗೆ ಒಂದು ಬಾರಿ ಪ್ರವೇಶ ಮತ್ತು ನಿರ್ಗಮನಕ್ಕೆ 350 ರೂಪಾಯಿ ಶುಲ್ಕ ವಿಧಿಸಲಾಗುತ್ತದೆ. ಲಘು ಮೋಟಾರು ವಾಹನಗಳ ವ್ಯಾಪ್ತಿಗೆ ಬರುವ ನಾಲ್ಕು ಚಕ್ರಗಳ ಸರಕು ವಾಹನಗಳಿಗೆ 100 ರೂಪಾಯಿ, ಮೂರು ಚಕ್ರಗಳ ಸರಕು ವಾಹನಗಳಿಗೆ ಪ್ರವೇಶ ಮತ್ತು ನಿರ್ಗಮನಕ್ಕೆ 75 ರೂಪಾಯಿ ಶುಲ್ಕ ನಿಗದಿಪಡಿಸಲಾಗಿದೆ.

ಪ್ರವೇಶದ ವೇಳೆ ವಾಹನದ ವರ್ಗವನ್ನು ಆಧರಿಸಿ ಅನ್ವಯವಾಗುವ ಶುಲ್ಕವನ್ನು ಸೇವಾ ಪೂರೈಕೆದಾರರು ನಿರ್ಧರಿಸಲಿದ್ದಾರೆ. ವಾಹನ ಪ್ರವೇಶ ಶುಲ್ಕದ ಜೊತೆಗೆ ಮಾರುಕಟ್ಟೆಗೆ ತರಲಾಗುವ ಸರಕುಗಳಿಗೂ ಪ್ರತ್ಯೇಕ ಶುಲ್ಕ ವಿಧಿಸಲಾಗುತ್ತದೆ.

ಹಣ್ಣು, ಹೂವು, ತರಕಾರಿ, ಸೊಪ್ಪು ಸೇರಿದಂತೆ ಹಲವು ನಿರ್ದಿಷ್ಟ ಸರಕುಗಳಿಗೆ ಪ್ರತಿ ಚೀಲಕ್ಕೆ 5 ರೂ ಶುಲ್ಕ ವಿಧಿಸಲಾಗುತ್ತದೆ. ಶೇಂಗಾ, ಹತ್ತಿ, ಸಿಹಿ ಜೋಳ, ಶುಂಠಿ, ಅರಿಶಿಣ, ಬಾಳೆದಿಂಡು, ಬಿದಿರು, ಕಬ್ಬು, ಈರುಳ್ಳಿ, ಆಲೂಗಡ್ಡೆ, ತೆಂಗಿನಕಾಯಿ ಮತ್ತು ಬೆಳ್ಳುಳ್ಳಿಗೂ ನಿರ್ದಿಷ್ಟ ಘಟಕದ ಆಧಾರದ ಮೇಲೆ 5 ರೂಪಾಯಿ ಶುಲ್ಕ ವಿಧಿಸಲಾಗುತ್ತದೆ.

### 10 ರೂ ಶುಲ್ಕ ನಿಗದಿ

**10 ಟ್ರೇಗಳವರೆಗೆ ಇರುವ ಪ್ರತಿ ಮೊಟ್ಟೆ ಬಾಕ್ಸ್‌ಗೆ 10 ರೂ, ಮೀನು ಹಾಗೂ ಇತರ ಸಮುದ್ರ ಉತ್ಪನ್ನಗಳ ಪ್ರತಿ ಬಾಕ್ಸ್‌ಗೆ 10 ರೂ ಶುಲ್ಕ ವಿಧಿಸಲಾಗುತ್ತದೆ. ಕೋಳಿ ಹಾಗೂ ಇತರ ಮಾಂಸ ಉತ್ಪನ್ನಗಳಿಗೆ ಪ್ರತಿ ಟ್ರೇಗೆ 10 ರೂ ಶುಲ್ಕ ನಿಗದಿಪಡಿಸಲಾಗಿದೆ.**


ಉದಯವಾಹಿನಿ ಚಿತ್ರ

## ಕಾರ್ಯಪಾಲಕ ಇಂಜಿನಿಯರ್ ಅಮಾನತುಗೊಳಿಸಿದ ಸಚಿವ ಕೃಷ್ಣ ಭೈರೇಗೌಡ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ನಗರದ ಪ್ರಮುಖ ರಸ್ತೆಯೊಂದರಲ್ಲಿ ಬೀದಿ ದೀಪಗಳ ನಿರ್ವಹಣೆಯಲ್ಲಿ ಕರ್ತವ್ಯ ಲೋಪ ಎಸಗಿದ ಆರೋಪದ ಹಿನ್ನೆಲೆಯಲ್ಲಿ ಬೆಂಗಳೂರು ಸೆಂಟ್ರಲ್ ಸಿಟಿ ಕಾರ್ಪೊರೇಷನ್‌ನ ಕಾರ್ಯಪಾಲಕ ಇಂಜಿನಿಯರ್ (ಎಲೆಕ್ಟ್ರಿಕಲ್) ಎಚ್.ವಿ. ರಮೇಶ್ ಅವರನ್ನು ಗ್ರೇಟರ್ ಬೆಂಗಳೂರು ಪ್ರಾಧಿಕಾರ ಅಮಾನತುಗೊಳಿಸಿದೆ. ಆಗಸ್ಟ್ 28ರಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರು ನಡೆಸಿದ ಪರಿಶೀಲನೆಯ ವೇಳೆ, ಹಡ್ಸನ್ ಸರ್ಕಲ್‌ನಿಂದ ಚಾಲುಕ್ಯ ಸರ್ಕಲ್‌ವರೆಗೆ ಇರುವ 222 ಬೀದಿ ದೀಪಗಳ ಪೈಕಿ 140 ದೀಪಗಳು ಕಾರ್ಯನಿರ್ವಹಿಸುತ್ತಿಲ್ಲ ಎಂಬುದು ಪತ್ತೆಯಾಗಿತ್ತು. ಇದರ ಬೆನ್ನಲ್ಲೇ ಈ ಕ್ರಮ ಕೈಗೊಳ್ಳಲಾಗಿದೆ. ಜಿಬಿಎ ವ್ಯಾಪ್ತಿಯಲ್ಲಿ ಬೀದಿ ದೀಪಗಳ ನಿರ್ವಹಣೆ ಕುರಿತು ಸಚಿವರು ಈ ಹಿಂದೆ ಎರಡು ಸಭೆಗಳನ್ನು ನಡೆಸಿ, ದೋಷಗಳನ್ನು ತ್ವರಿತವಾಗಿ ಸರಿಪಡಿಸುವಂತೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದರು. ಆಗಸ್ಟ್ 4ರಂದು ನಡೆದ ಸಭೆಯಲ್ಲೂ ಸಮಸ್ಯೆಗಳನ್ನು ಪರಿಹರಿಸುವಂತೆ ಅಧಿಕಾರಿಗಳು ಮತ್ತು ಗುತ್ತಿಗೆದಾರರಿಗೆ ಮತ್ತೊಮ್ಮೆ ಸೂಚಿಸಲಾಗಿತ್ತು. ಆಗಸ್ಟ್ 31ರಂದು ರಮೇಶ್ ಅವರಿಗೆ ಕಾರಣ ಕೇಳಿ ನೋಟಿಸ್ ನೀಡಲಾಗಿತ್ತು. ಅದೇ ದಿನ ಅವರು ತಮ್ಮ ವಿವರಣೆಯನ್ನು ಸಲ್ಲಿಸಿದ್ದರು. ಆದರೆ, ಅವರ ಉತ್ತರದಲ್ಲಿ ತಪ್ಪು ಮಾಹಿತಿ ನೀಡಲಾಗಿದೆ ಎಂದು ಅಮಾನತು ಆದೇಶದಲ್ಲಿ ತಿಳಿಸಲಾಗಿದೆ.

## ನಾಲ್ಕು ತಿಂಗಳ ಅವಳಿ ಹೆಣ್ಣು ಮಕ್ಕಳನ್ನು ನೀರಿನಲ್ಲಿ ಮುಳುಗಿಸಿ ಕೊಲೆ; ತಾಯಿ ವಿರುದ್ಧ FIR

• ಉದಯವಾಹಿನಿ, ಬೆಂಗಳೂರು

ವಾಜರಹಳ್ಳಿಯ ಬಿಸಿಸಿಎಚ್‌ಎಸ್ ಲೇಔಟ್‌ನ ಮನೆಯಲ್ಲಿ ನಾಲ್ಕು ತಿಂಗಳ ಅವಳಿ ಹೆಣ್ಣು ಮಕ್ಕಳನ್ನು ನೀರು ತುಂಬಿದ ಬಕೆಟ್‌ನಲ್ಲಿ ಮುಳುಗಿಸಿ ಕೊಲೆ ಮಾಡಿರುವ ತಾಯಿ, ಬಳಿಕ ತಾನೂ ನೇಣು ಹಾಕಿಕೊಂಡು ಆತ್ಮಹತ್ಯೆಗೆ ಯತ್ನಿಸಿರುವುದು ನಡೆದಿದೆ. ಕೃತ್ಯ ಎಸಗಿದ ಉಮಾದೇವಿ (44) ಅವರ ಪತಿ ರಾಮಲಿಂಗಪ್ಪ ಅವರು ನೀಡಿದ ದೂರು ಆಧರಿಸಿ ತಲಘಟ್ಟಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ರಾಮಲಿಂಗಪ್ಪ ಉಮಾದೇವಿ 2002ರಲ್ಲಿ ಮದುವೆ ಆಗಿದ್ದರು. ರಾಮಲಿಂಗಪ್ಪ ಅವರು ರಿಯಲ್ ಎಸ್ಟೇಟ್ ವ್ಯವಹಾರ ನಡೆಸುತ್ತಿದ್ದರು. ಕೃತಕ ಗರ್ಭಧಾರಣೆ (ಐವಿಎಫ್) ಚಿಕಿತ್ಸೆ ಮೂಲಕ, 2026ರ ಮೇ 5ರಂದು ಉಮಾದೇವಿಗೆ ಅವಳಿ ಹೆಣ್ಣು ಮಕ್ಕಳು ಜನಿಸಿದ್ದವು. ಒಂದೂವರೆ ತಿಂಗಳಿನಿಂದ ಉಮಾದೇವಿ ಮಕ್ಕಳ ಬಗ್ಗೆ ನಿರಾಸಕ್ತಿ ತೋರಿಸುತ್ತಿದ್ದರು. ಆಶ್ರಮಕ್ಕೆ ಸೇರಿಸುವಂತೆಯೂ ಹೇಳುತ್ತಿದ್ದರು. ಅಸಹಜವಾಗಿ ವರ್ತಿಸುತ್ತಿದ್ದರು. ನಿಮ್ಹಾನ್ಸ್ ಆಸ್ಪತ್ರೆಯಲ್ಲಿ ಮನೋವೈದ್ಯಕೀಯ ಚಿಕಿತ್ಸೆ ಕೊಡಿಸಲಾಗಿತ್ತು.

ಹೆರಿಗೆಯ ನಂತರದ ಹಾರ್ಮೋನ್ ಅಸಮತೋಲನದಿಂದ ಈ ರೀತಿಯ ವರ್ತನೆ ಉಂಟಾಗಿದೆ ಎಂದು ವೈದ್ಯರು ತಿಳಿಸಿದ್ದರು. ಮಂಗಳವಾರ ಮನೆಗೆ ಹೋಗಿ ನೋಡಿದಾಗ ಮಕ್ಕಳು ಮೃತಪಟ್ಟಿದ್ದವು. ನೇಣು ಹಾಕಿಕೊಳ್ಳಲು ಪ್ರಯತ್ನಿಸಿದ ಉಮಾದೇವಿ ಅವರನ್ನು ರಕ್ಷಿಸಿ ಆಸ್ಪತ್ರೆಗೆ ದಾಖಲು ಮಾಡಲಾಗಿದೆ ಎಂದು ರಾಮಲಿಂಗಪ್ಪ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

## 'ನಮಗೆ ಮೊಮ್ಮಗಳು ಹುಟ್ಟಿದಾಗ ನನ್ನ ಪತ್ನಿಗೆ ಬೇಸರವಾಯಿತು ನನಗೆ ಬಹಳ ಹೆಮ್ಮೆ

### ನಮ್ಮಲ್ಲಿ ಮತ್ತು ಇಡೀ ವಿಶ್ವದಲ್ಲಿ ಅನೇಕ ಮಹಿಳಾ ನಾಯಕರು ಇದ್ದಾರೆ, ರಾಮಾಯಣದಲ್ಲಿ ರಾಮನಿಗಿಂತಲೂ ಸೀತೆ ತ್ಯಾಗ ಮಿಗಿಲು

• ಉದಯವಾಹಿನಿ, ಬೆಂಗಳೂರು

1 ನನಗೂ ಇಬ್ಬರು ಹೆಣ್ಣುಮಕ್ಕಳು


2 ನನಗೂ ಮೊಮ್ಮಗಳು ಹುಟ್ಟಿದಳು

3 ನನಗೆ ಬಹಳ ಹೆಮ್ಮೆಯಾಗುತ್ತಿದೆ

ಮಹಿಳೆಯರನ್ನು ನಾನೊಂದು ಪ್ರಶ್ನೆ ಕೇಳಬಯಸುತ್ತೇನೆ. ಸಮಾನತೆ, ಸ್ವಾವಲಂಬನೆ ಅಂತೆಲ್ಲ ಮಾತಾಡ್ತೀರಿ. ಆದರೆ ಮಗು ಹುಟ್ಟುವಾಗ ಮೊದಲು ಗಂಡು ಮಗು ಆಗಬೇಕೆಂದು ಬಯಸುತ್ತೀರಿ, ಏಕೆ ಹೀಗೆ ಈ ಮನೋಧರ್ಮ ಏಕೆ ಎಂದು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಕೇಳಿದರು.

ಇಂದು ಬೆಂಗಳೂರಿನಲ್ಲಿ ಒಟ್ಟಿಗೆ ಬೆಳೆಯೋಣ' ಎಂಬ ಮಹಿಳಾ ಉದ್ಯಮಿಗಳ ಸಮ್ಮೇಳನದಲ್ಲಿ ಮಹಿಳೆಯರು ಆಯೋಜಿಸಿದ್ದ ಟುಗೆದರ್ ವಿ ಗ್ರೋ, ನಾವೆಲ್ಲರೂ ಒಟ್ಟಾಗಿ ಬೆಳೆಯೋಣ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ಅದರಲ್ಲಿ ಮಾತನಾಡುತ್ತಾ ಡಿ ಕೆ ಶಿವಕುಮಾರ್, ನನಗೂ ಇಬ್ಬರು ಹೆಣ್ಣುಮಕ್ಕಳು ಮತ್ತು ಒಬ್ಬ ಮಗನಿದ್ದಾರೆ, ಆದರೆ ನಾನೊಂದು ಪ್ರಶ್ನೆ ನಿಮ್ಮಲ್ಲಿ ಕೇಳಲು ಬಯಸುತ್ತೇನೆ. ಭಾರತದ ಪ್ರತಿ ಮೂಲೆಯಲ್ಲಿರುವ ಮಹಿಳೆಯರು ಮೊದಲು ಹುಟ್ಟುವ ಮಗು ಗಂಡು ಆಗಬೇಕು ಎಂದು ಏಕೆ ಬಯಸುತ್ತಾರೆ ಎಂದು ನನಗೆ ಅರ್ಥವಾಗುತ್ತಿಲ್ಲ, ನೀವು ನನಗೆ ಉತ್ತರ ಕೊಡಬೇಕು ಎಂದರು.

ಇತ್ತೀಚೆಗೆ ಅಂದರೆ ಮೇ 1ರಂದು ನನಗೂ ಮೊಮ್ಮಗಳು ಹುಟ್ಟಿದಳು, ನನಗೆ ಬಹಳ ಖುಷಿ ಆಯ್ತು. ಆದರೆ ನನ್ನ ಪತ್ನಿಗೆ ಮೊದಲ ಮಗು ಗಂಡು ಮಗುವಾಗಬೇಕಿತ್ತು ಎಂದು ಬೇಸರವಾಯಿತು, ಆಗ ನಾನೆಂದೆ, ಏಕೆ ಆ ರೀತಿ



ಉದಯವಾಹಿನಿ ಚಿತ್ರ

ಯೋಚನೆ ಮಾಡುವುದು? ನನ್ನ ಮಗಳು ಐಶ್ವರ್ಯ ಬೆಳೆದಿರುವ ರೀತಿ ಇಂದು ಆಕೆ ಮಾಡುತ್ತಿರುವ ಕೆಲಸ ನೋಡಿ ನನಗೆ ಬಹಳ ಹೆಮ್ಮೆಯಾಗುತ್ತಿದೆ, ಅವಳು ಜೀವನವನ್ನು ನಿಭಾಯಿಸುತ್ತಿರುವ ರೀತಿ, ಮಾಡುತ್ತಿರುವ ಕೆಲಸ- ಸಾಧನೆ ನೋಡಿ ನನಗೆ ನಿಜಕ್ಕೂ ಖುಷಿಯಾಗುತ್ತಿದೆ. ಹೆಣ್ಣು ಮಕ್ಕಳ ಬಗೆಗಿನ ನನ್ನ ಪ್ರೀತಿಯನ್ನು ನೂರ್ಮಡಿ ಮಾಡಿದೆ, ನಾನು ನಿಮ್ಮನ್ನು ನಿರುತ್ಸಾಹಗೊಳಿಸುತ್ತಿಲ್ಲ, ಆದರೆ ಕುತೂಹಲದಿಂದ ಕೇಳುತ್ತಿದ್ದೇನೆ ಎಂದು ನಗುತ್ತಾ ಮುಖ್ಯಮಂತ್ರಿಗಳು ನೆರೆದಿದ್ದ ಮಹಿಳಾ ವೃಂದವನ್ನು ಪ್ರಶ್ನಿಸಿದರು.

ಭಾರತೀಯರಲ್ಲಿ ಇಂದಿಗೂ ಆ ಮನೋಧರ್ಮ ಏಕಿದೆ ಎಂದು ಗೊತ್ತಾಗುತ್ತಿಲ್ಲ, ನಮ್ಮಲ್ಲಿ ಮತ್ತು ಇಡೀ ವಿಶ್ವದಲ್ಲಿ ಅನೇಕ ಮಹಿಳಾ ನಾಯಕರು ಇದ್ದಾರೆ, ರಾಮಾಯಣದಲ್ಲಿ ರಾಮನಿಗಿಂತಲೂ ಸೀತೆ ತ್ಯಾಗ ಮಿಗಿಲು. ಮಹಾಭಾರತದಲ್ಲಿ ಕುಂತಿ ಪಾತ್ರ ದೊಡ್ಡದು. ಹೀಗಾಗಿ ನಿಮ್ಮ ನುಡಿ ನಡೆಯಲ್ಲೂ ಇರಲಿ, ಪೋಷಕರು ಹೆಣ್ಣುಮಕ್ಕಳಿಗೆ ಇನ್ನಷ್ಟು ಧೈರ್ಯ, ಮಾನಸಿಕ ಸ್ಥೈರ್ಯ, ಶಿಸ್ತು ಕಲಿಸಬೇಕು ಎಂದರು. ಮಹಿಳೆಯರು ಸದಾ ಸೃಜನಶೀಲರು, ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವವರು ಹಾಗೂ ನಿರ್ಧಾರ ಕೈಗೊಳ್ಳುವವರಾಗಿದ್ದಾರೆ. ಕುಟುಂಬ ಮತ್ತು ಸಂಪನ್ಮೂಲಗಳನ್ನು ನಿರ್ವಹಿಸುವುದರಿಂದ ಹಿಡಿದು ಉದ್ಯಮಗಳನ್ನು ಕಟ್ಟುವವರೆಗೆ, ಇತರರಿಗೆ ಅವಕಾಶಗಳನ್ನು ಸೃಷ್ಟಿಸುವವರೆಗೆ, ಸವಾಲುಗಳನ್ನು ಸಾಧ್ಯತೆಗಳಾಗಿ ಪರಿವರ್ತಿಸುವ ಸಾಮರ್ಥ್ಯ ಮಹಿಳೆಯರಲ್ಲಿದೆ. ಎಲ್ಲಾ ಮಹಿಳಾ ಉದ್ಯಮಿಗಳಿಗೂ ತಮ್ಮ ಉದ್ಯಮಶೀಲತಾ ಪಯಣದಲ್ಲಿ ನಿರಂತರ ಯಶಸ್ಸು ಮತ್ತು ಬೆಳವಣಿಗೆ ದೊರೆಯಲಿ ಎಂದು ಹಾರೈಸುತ್ತೇನೆ ಎಂದರು.

**ಸೃಜನಶೀಲತೆ, ಸಾಮರ್ಥ್ಯ ಮತ್ತು ದೃಢಸಂಕಲ್ಪಕ್ಕೆ ಬಂಡವಾಳ, ತಂತ್ರಜ್ಞಾನ ಹಾಗೂ ಮಾರುಕಟ್ಟೆಯ ಪ್ರವೇಶದ ಬೆಂಬಲ ದೊರೆತಾಗ, ಅವರು ಏನನ್ನು ನಿರ್ಮಿಸಬಲ್ಲರು ಎಂಬುದಕ್ಕೆ ಯಾವುದೇ ಮಿತಿಯಿರುವುದಿಲ್ಲ ಎಂದರು. –ಸಿಎಂ ಡಿ ಕೆ ಶಿವಕುಮಾರ್**

### ಉನ್ನತಿಗೆ ನಮ್ಮ ಸರ್ಕಾರವು ಅತ್ಯಂತ ಬದ್ಧ

**ಈ ಸಾಮರ್ಥ್ಯವು ಅರಳಲು ಅಗತ್ಯವಾದ ಸೂಕ್ತ ಪರಿಸರ ವ್ಯವಸ್ಥೆಯನ್ನು ಸೃಷ್ಟಿಸುವುದು ನಮ್ಮ ಜವಾಬ್ದಾರಿಯಾಗಿದೆ. ಕರ್ನಾಟಕದ ಗ್ಯಾರಂಟಿ ಯೋಜನೆಗಳು ಮಹಿಳೆಯರ ಆರ್ಥಿಕ ಮತ್ತು ಸಾಮಾಜಿಕ ಅವಕಾಶಗಳನ್ನು ವಿಸ್ತರಿಸಲು ನೆರವಾಗುತ್ತಿವೆ. ಮಹಿಳೆಯರ ಸಬಲೀಕರಣ ಮತ್ತು ಉನ್ನತಿಗೆ ನಮ್ಮ ಸರ್ಕಾರವು ಅತ್ಯಂತ ಬದ್ಧವಾಗಿದೆ.**

# ಸಾಮಾಜಿಕ ಭದ್ರತಾ ಪಿಂಚಣಿ ಸ್ಥಗಿತ ಖಂಡಿಸಿ ಕೊಪ್ಪಳದಲ್ಲಿ ಪ್ರತಿಭಟನೆ.

• **ಉದಯವಾಹಿನಿ, ಕೊಪ್ಪಳ:**

ಸೋಷಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯುನಿಸ್ಟ್) ಪಕ್ಷದ ನೇತೃತ್ವದಲ್ಲಿ ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಸಾಮಾಜಿಕ ಭದ್ರತಾ ಪಿಂಚಣಿ ಸ್ಥಗಿತಗೊಳಿಸಿರುವುದನ್ನು ಖಂಡಿಸಿ ಪ್ರತಿಭಟನೆ ಮಾಡಲಾಯಿತು.ಈ ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಎಸ್‌ಯುಸಿಐ(ಕಮ್ಯುನಿಸ್ಟ್) ಪಕ್ಷದ ಜಿಲ್ಲಾ ಮುಖಂಡ ಶರಣು ಗಡ್ಡಿ, ''ವೃದ್ಧರು, ವಿಧವೆಯರು, ವಿಕಲಚೇತನರು ಸೇರಿದಂತೆ ದುರ್ಬಲ ವರ್ಗದ ಜನರಿಗೆ ಪಿಂಚಣಿಯೇ ಬದುಕಿನ ಪ್ರಮುಖ ಆಸರೆಯಾಗಿದೆ. ಇಂತಹ ಫಲಾನುಭವಿಗಳ ಪಿಂಚಣಿಯನ್ನು ಹಲವು ತಿಂಗಳುಗಳಿಂದ ಸ್ಥಗಿತಗೊಳಿಸಿರುವುದು ಖಂಡನೀಯ. ಪರಿಶೀಲನೆ ಮತ್ತು ದಾಖಲೆಗಳ ನೆಪದಲ್ಲಿ ಅರ್ಹ ಫಲಾನುಭವಿಗಳನ್ನು ಕಚೇರಿಗಳಿಗೆ ಅಲೆದಾಡಿಸುವ ಬದಲು, ಅವರ ಸಮಸ್ಯೆಗಳನ್ನು ತಕ್ಷಣ ಪರಿಹರಿಸಿ ಪಿಂಚಣಿಯನ್ನು ಮರುಜಾರಿಗೊಳಿಸಬೇಕು'' ಎಂದು ಆಗ್ರಹಿಸಿದರು.

ಸರ್ಕಾರವು ಪಿಂಚಣಿ ಫಲಾನುಭವಿಗಳ ಪರಿಶೀಲನೆ ನಡೆಸುವ ಸಂದರ್ಭದಲ್ಲಿ ಅರ್ಹರ ಪಿಂಚಣಿಯನ್ನೂ ಸ್ಥಗಿತಗೊಳಿಸಿರುವುದರಿಂದ ಸಾವಿರಾರು ಬಡವರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಪಿಂಚಣಿಯನ್ನೇ ಅವಲಂಬಿಸಿ ಜೀವನ ನಡೆಸುತ್ತಿರುವ ವೃದ್ಧರು, ವಿಧವೆಯರು ಮತ್ತು ವಿಕಲಚೇತನರಿಗೆ ಕೂಡಲೇ ಬಾಕಿ ಪಿಂಚಣಿ ಸೇರಿದಂತೆ ಹಣ ಬಿಡುಗಡೆ ಮಾಡಬೇಕು ಎಂದು ಅವರು ಒತ್ತಾಯಿಸಿದರು.ಕರ್ನಾಟಕ ಸರ್ಕಾರವು ಪಿಂಚಣಿ ಯೋಜನೆಗಳ ಫಲಾನುಭವಿಗಳ ವಾರ್ಷಿಕ ಆದಾಯ ಮಿತಿಯನ್ನು ರೂ.32,000ರಿಂದ ರೂ.1,20,000ಕ್ಕೆ ಹೆಚ್ಚಿಸಿರುವ ಹಿನ್ನೆಲೆಯಲ್ಲಿ ಅರ್ಹ ಫಲಾನುಭವಿಗಳಿಗೆ ಯಾವುದೇ ಅನ್ಯಾಯವಾಗದಂತೆ ಕ್ರಮ ಕೈಗೊಳ್ಳಬೇಕು. ಪಿಂಚಣಿ ಪರಿಶೀಲನಾ ಪ್ರಕ್ರಿಯೆಯನ್ನು ಸರಳಗೊಳಿಸಿ, ಫಲಾನುಭವಿಗಳಿಗೆ ಅನಗತ್ಯ ತೊಂದರೆ ನೀಡಬಾರದು ಎಂದು ಶರಣು ಗಡ್ಡಿ ಆಗ್ರಹಿಸಿದರು. ಜಿಲ್ಲೆಯ ವಿವಿಧ ಏರಿಯಾ ಹಾಗೂ ಹಳ್ಳಿಗಳಿಂದ ಆಗಮಿಸಿದ ವಯಸ್ಸಾದ ವೃದ್ಧರು, ವಿಧವಾ ಮಹಿಳೆಯರು, ವಿಕಲಚೇತನರು ಸೇರಿದಂತೆ ಹಲವಾರು ಫಲಾನುಭವಿಗಳು ಪ್ರತಿಭಟನೆಯಲ್ಲಿ ಭಾಗವಹಿಸಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.


ಉದಯವಾಹಿನಿ ಚಿತ್ರ

ಈ ಪ್ರತಿಭಟನೆಯಲ್ಲಿ ಮಂಗಳೇಶ ರಾಠೋಡ್, ಹನುಮಂತ ಕಟಗಿ, ಪ್ರದೀಪ್, ದ್ಯಾಮಣ್ಣ ಡೊಳ್ಳಿನ, ಮದುಕಪ್ಪ, ಶ್ರೀಕಾಂತ್, ನಾಗಪ್ಪ, ಸತ್ಯಮ್ಮ, ಕರಿಯಪ್ಪ, ಸಂಜೀವಪ್ಪ, ವೆಂಕಟೇಶ, ಪಾತವ್ವ, ಕೆಂಚಮ್ಮ, ಗಂಗವ್ವ ಸೇರಿದಂತೆ ವಿವಿಧ ಏರಿಯಾ ಹಾಗೂ ಗ್ರಾಮಗಳ ಮುಖಂಡರು ಮತ್ತು ಫಲಾನುಭವಿಗಳು ಭಾಗವಹಿಸಿದ್ದರು.ಮಾನ್ಯ ಜಿಲ್ಲಾಧಿಕಾರಿಗಳ ಮೂಲಕ ಮಾನ್ಯ ಉಪಮುಖ್ಯಮಂತ್ರಿಗಳಾದ ಜಿ. ಪರಮೇಶ್ವರ್ ಅವರಿಗೆ ಮನವಿ ಸಲ್ಲಿಸಲಾಯಿತು.

**ಬೇಡಿಕೆಗಳು:**

★ ಸ್ಥಗಿತಗೊಂಡಿರುವ ಎಲ್ಲಾ ಅರ್ಹ ಫಲಾನುಭವಿಗಳ ಪಿಂಚಣಿಯನ್ನು ಕೂಡಲೇ ಮರುಜಾರಿಗೊಳಿಸುವುದು,
★ ಬಾಕಿ ಉಳಿದಿರುವ ಪಿಂಚಣಿ ಹಣವನ್ನು ಸಂಪೂರ್ಣವಾಗಿ ಬಿಡುಗಡೆ ಮಾಡುವುದು,
★ ಪರಿಶೀಲನೆಯ ಹೆಸರಿನಲ್ಲಿ ಫಲಾನುಭವಿಗಳಿಗೆ ಅನಗತ್ಯ ತೊಂದರೆ ನೀಡದಿರುವುದು ಹಾಗೂ ಯಾವುದೇ ಅರ್ಹ ಫಲಾನುಭವಿಯನ್ನು ಪಿಂಚಣಿ ಯೋಜನೆಯಿಂದ ರಿಜೆಕ್ಟ್ ಮಾಡಬಾರದು.
★ ಇಂದಿನ ಬೆಲೆ ಏರಿಕೆ ದಿನಗಳಿಗೆ ತಕ್ಕಂತೆ ಎಲ್ಲಾ ಸಾಮಾಜಿಕ ಭದ್ರತಾ ಪಿಂಚಣಿಗಳನ್ನು ಹೆಚ್ಚಿಸಬೇಕು.

# ರೆಡ್ಡಿ ತಂಡದಿಂದ ನಾಗೇಂದ್ರ, ತುಕಾರಾಂ, ಭರತ್ ರೆಡ್ಡಿ ವಿರುದ್ಧ ವಾಗ್ದಾಳಿ


## ವಾಲ್ಮೀಕಿ ಸಮುದಾಯದ ಹಣದ ದುರ್ಬಳಕೆಯ ಆರೋಪಗಳ ಕುರಿತು ನಾಗೇಂದ್ರ ಅವರು ಸ್ಪಷ್ಟನೆ ನೀಡಬೇಕು

• **ಉದಯವಾಹಿನಿ, ಬಳ್ಳಾರಿ:**

ಮಾಜಿ ಸಚಿವ ಬಿ. ನಾಗೇಂದ್ರ, ಸಂಸದ ಇ.ತುಕಾರಾಂ ಹಾಗೂ ಶಾಸಕ ಭರತ್ ರೆಡ್ಡಿ ಅವರ ವಿರುದ್ಧ ಮಾಜಿ ಸಂಸದ ಸಣ್ಣ ಫಕೀರಪ್ಪ, ಮಾಜಿ ಶಾಸಕ ಸೋಮಶೇಖರ್ ರೆಡ್ಡಿ ಹಾಗೂ ಮಾಜಿ ಶಾಸಕ ಸುರೇಶ್ ಬಾಬು ಬುಧವಾರ ತೀವ್ರ ವಾಗ್ದಾಳಿ ನಡೆಸಿದರು. ನಗರದಲ್ಲಿ ಜನಾರ್ದನ ರೆಡ್ಡಿ ಅವರ ಬೆಂಬಲಿಗರ ತಂಡ ಹಮ್ಮಿಕೊಂಡಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಣ್ಣ ಫಕೀರಪ್ಪ, ನಾಗೇಂದ್ರ ಅವರು

**1 : ನೀರಿನ ಸಮಸ್ಯೆ ಎದುರಾಗಿದ್ದು**
**2 : ಬದಲು ರಾಜಕೀಯ ಆರೋಪ**
**3 : ಕಾರ್ಯಗಳ ಶ್ರೇಯ ಪಡೆಯಲು**

ಸಚಿವ ಸ್ಥಾನ ಕಳೆದುಕೊಂಡ ಹತಾಶೆಯಲ್ಲಿ ಬಿಜೆಪಿ ನಾಯಕರ ವಿರುದ್ಧ ಮನಬಂದಂತೆ ಮಾತನಾಡುತ್ತಿದ್ದಾರೆ ಎಂದು ಆರೋಪಿಸಿದರು. ಮಾಜಿ ಸಂಸದ ಸಣ್ಣ ಫಕೀರಪ್ಪ, ಮಾಜಿ ಶಾಸಕ ಸೋಮಶೇಖರ್ ರೆಡ್ಡಿ ಹಾಗೂ ಮಾಜಿ ಶಾಸಕ ಸುರೇಶ್ ಬಾಬು ಅವರು ಮಾತನಾಡುತ್ತಿರುವುದು. ನಾಗೇಂದ್ರ ಅವರ ಮಾತುಗಳಲ್ಲಿ ಯಾವುದೇ ಅರ್ಥವಿಲ್ಲ. ಎರಡು ಬಾರಿ ಬಳ್ಳಾರಿ ಗ್ರಾಮಾಂತರ ಕ್ಷೇತ್ರದ ಶಾಸಕರಾಗಿ ಆಯ್ಕೆಯಾಗಿರುವ ಅವರು ಕ್ಷೇತ್ರದ ಅಭಿವೃದ್ಧಿಗೆ ಏನು ಮಾಡಿದ್ದಾರೆ ಎಂಬುದನ್ನು ಜನರಿಗೆ ತಿಳಿಸಲಿ. ಶಾಸಕರಾಗಿ ಆಯ್ಕೆಯಾಗಿದ್ದಾರೆಯೇ ಹೊರತು, ಸಚಿವರಾಗಿ ಅಲ್ಲ ಎಂದು ಟೀಕಿಸಿದರು.


ಉದಯವಾಹಿನಿ ಚಿತ್ರ

ಶಾಸಕ ಭರತ್ ರೆಡ್ಡಿ ವಿರುದ್ಧ ವಾಗ್ದಾಳಿ ನಡೆಸಿದ ಮಾಜಿ ಶಾಸಕ ಸೋಮಶೇಖರ್ ರೆಡ್ಡಿ, ತಮ್ಮ ಅವಧಿಯಲ್ಲಿ ಕೈಗೊಂಡಿದ್ದ ಹಲವು ಅಭಿವೃದ್ಧಿ ಕಾಮಗಾರಿಗಳಿಗೆ ಈಗಿನ ಶಾಸಕರು ತಮ್ಮ ತಾಯಿಯ ಹೆಸರನ್ನು ಬಳಸುತ್ತಿದ್ದಾರೆ ಎಂದು ಆರೋಪಿಸಿದರು.
-ಮಾಜಿ ಶಾಸಕ ಸೋಮಶೇಖರ್ ರೆಡ್ಡಿ

ಸಂಸದ ಇ.ತುಕಾರಾಂ ವಿರುದ್ಧ ಮಾಜಿ ಶಾಸಕ ಸುರೇಶ್ ಬಾಬು ವಾಗ್ದಾಳಿ ನಡೆಸಿದರು. ವಾಲ್ಮೀಕಿ ಹಗರಣದ ಹಣದಿಂದಲೇ ಲೋಕಸಭಾ ಚುನಾವಣೆಯಲ್ಲಿ ಗೆದ್ದಿದ್ದಾರೆ ಎಂಬ ಜನಾರ್ದನ ರೆಡ್ಡಿ ಅವರ ಆರೋಪವನ್ನು ಉಲ್ಲೇಖಿಸಿದ ಅವರು, ಈ ಕುರಿತು ಮಾತನಾಡುವ ನೈತಿಕತೆ ತುಕಾರಾಂ ಅವರಿಗೆ ಇಲ್ಲ ಎಂದು ಟೀಕಿಸಿದರು.
-ಮಾಜಿ ಶಾಸಕ ಸುರೇಶ್ ಬಾಬು

ವಾಲ್ಮೀಕಿ ಸಮುದಾಯದ ಹಣದ ದುರ್ಬಳಕೆಯ ಆರೋಪಗಳ ಕುರಿತು ನಾಗೇಂದ್ರ ಅವರು ಸ್ಪಷ್ಟನೆ ನೀಡಬೇಕು. ತಪ್ಪು ಮಾಡಿದ್ದರೆ ಒಪ್ಪಿಕೊಂಡು ಜನರ ಮುಂದೆ ಕ್ಷಮೆ ಕೇಳುವುದು ಸೂಕ್ತ ಎಂದು ಸಣ್ಣ ಫಕೀರಪ್ಪ ಹೇಳಿದರು. ಸರ್ಕಾರದ ಕೆಲಸಗಳಿಗೆ ಸುವರ್ಣ ಬಳ್ಳಾರಿ ಸೇರಿದಂತೆ ಕುಟುಂಬದ ಹೆಸರುಗಳನ್ನು ಇಡುವ ಮೂಲಕ ಹಿಂದಿನ ಅಭಿವೃದ್ಧಿ ಕಾರ್ಯಗಳ ಶ್ರೇಯ ಪಡೆಯಲು ಪ್ರಯತ್ನಿಸುತ್ತಿದ್ದಾರೆ ಎಂದು ಟೀಕಿಸಿದರು. ಜನಾರ್ದನ ರೆಡ್ಡಿ ವಿರುದ್ಧದ ಪ್ರಕರಣಗಳನ್ನು ಪ್ರಸ್ತಾಪಿಸಿದ ಸೋಮಶೇಖರ್ ರೆಡ್ಡಿ, ಭರತ್ ರೆಡ್ಡಿ ಅವರ ಕುಟುಂಬದ ಸದಸ್ಯರ ವಿರುದ್ಧವೂ ವಿವಿಧ ತನಿಖಾ ಸಂಸ್ಥೆಗಳ ಪ್ರಕರಣಗಳಿವೆ ಎಂದು ಆರೋಪಿಸಿದರು. ಅಕ್ರಮ ಗಣಿಗಾರಿಕೆ ಪ್ರಕರಣ ಸೇರಿದಂತೆ ಹಲವು ವಿಚಾರಗಳನ್ನು ಅವರು ಪ್ರಸ್ತಾಪಿಸಿದರು.

ಬಳ್ಳಾರಿಯಲ್ಲಿ ಗಾಂಜಾ, ಓಸಿ, ಮರಳು ಸೇರಿದಂತೆ ಅಕ್ರಮ ಚಟುವಟಿಕೆಗಳು ನಡೆಯುತ್ತಿವೆ ಎಂದು ಆರೋಪಿಸಿದರು. ಗುತ್ತಿಗೆ

ಬಳ್ಳಾರಿ ಗ್ರಾಮಾಂತರ ಪ್ರದೇಶದಲ್ಲಿ ನೀರಿನ ಸಮಸ್ಯೆ ಎದುರಾಗಿದ್ದು, ಜನರು ಪರದಾಡುತ್ತಿದ್ದಾರೆ. ಈ ಬಗ್ಗೆ ಗಮನಹರಿಸುವ ಬದಲು ರಾಜಕೀಯ ಆರೋಪ ? ಪ್ರತ್ಯಾರೋಪಗಳಲ್ಲಿ ತೊಡಗಿದ್ದಾರೆ ಎಂದು ದೂರಿದರು. 2028ರ ಚುನಾವಣೆಯಲ್ಲಿ ಬಂದು ಗೆದ್ದು ತೋರಿಸಿ ಎಂದು ನಾಗೇಂದ್ರ ಅವರಿಗೆ ಸವಾಲು ಹಾಕಿದರು.

ಕಾಮಗಾರಿಗಳಲ್ಲೂ ರಾಜಕೀಯ ಹಸ್ತಕ್ಷೇಪ ನಡೆಯುತ್ತಿದೆ ಎಂದು ದೂರಿದರು. ಈ ಬಗ್ಗೆ ಸಂಬಂಧಿಸಿದವರು ಗಮನಹರಿಸಿ ಅಭಿವೃದ್ಧಿ ಕಾರ್ಯಗಳಿಗೆ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು. ನಾಗೇಂದ್ರ ಅವರಿಗೆ ರಾಜಕೀಯವಾಗಿ ಜನಾರ್ದನ ರೆಡ್ಡಿ ಅವರೇ ಅವಕಾಶ ನೀಡಿದ್ದರು. ಆದರೆ ಈಗ ಅವರ ವಿರುದ್ಧವೇ ಮಾತನಾಡುತ್ತಿರುವುದು ಸರಿಯಲ್ಲ ಎಂದು ಸೋಮಶೇಖರ್ ರೆಡ್ಡಿ ಹೇಳಿದರು. ತುಕಾರಾಂ ಅವರು ಲೋಕಸಭಾ ಸ್ಥಾನಕ್ಕೆ ರಾಜೀನಾಮೆ ನೀಡಲಿ. ಅದೇ ವೇಳೆ ಜನಾರ್ದನ ರೆಡ್ಡಿ ಅವರೂ ರಾಜೀನಾಮೆ ನೀಡಲು ಸಿದ್ಧ. ನಂತರ ಚುನಾವಣೆ ನಡೆದರೆ ಯಾರು ಗೆಲ್ಲುತ್ತಾರೆ ಎಂಬುದು ಗೊತ್ತಾಗಲಿದೆ ಎಂದು ಸವಾಲು ಹಾಕಿದರು.

ತಮ್ಮ ಕುಟುಂಬದಲ್ಲಿದ್ದ ಭಿನ್ನಾಭಿಪ್ರಾಯದಿಂದ ಹಿಂದಿನ ಚುನಾವಣೆಯಲ್ಲಿ ಸೋಲು ಕಂಡಿದ್ದೇವೆ. ಜನಾರ್ದನ ರೆಡ್ಡಿ ಹೊಸ ಪಕ್ಷ ಕಟ್ಟಿದ ಸಂದರ್ಭದಲ್ಲಿ ತಾವು ಸೇರಿದಂತೆ ಹಲವರು ಹೊರಗಿದ್ದೆವು. ಇದೀಗ ಎಲ್ಲರೂ ಒಗ್ಗಟ್ಟಾಗಿದ್ದೇವೆ. ಈ ಬಾರಿ ನಮ್ಮನ್ನು ಸೋಲಿಸಿ ನೋಡಲಿ ಎಂದು ಅವರು ಸವಾಲು ಹಾಕಿದರು.

# ಬಿಜೆಪಿ ಸರ್ಕಾರದ ದ್ವೇಷ ರಾಜಕೀಯ ವಿರುದ್ಧ ದ.ಕ. ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರತಿಭಟನೆ

• **ಉದಯವಾಹಿನಿ, ಮಂಗಳೂರು:**

ಉತ್ತರಾಖಂಡದ ಹಲ್ದ್ವಾನಿಯಲ್ಲಿ ನಡೆದ ಶುದ್ಧೀಕರಣ ಪ್ರಕರಣದ ವಿವಾದ ಕುರಿತು ಮಾತನಾಡಿದ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ದುರುದ್ದೇಶಪೂರಿತ ಎಫ್.ಐ.ಆರ್ ದಾಖಲು ಖಂಡಿಸಿ ಹಾಗೂ ಕೇಂದ್ರ ಬಿಜೆಪಿ ಸರ್ಕಾರದ ದ್ವೇಷ ರಾಜಕೀಯ ವಿರುದ್ಧ ದ.ಕ. ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ನಗರದ ಲಾಲ್ ಭಾಗ್ ಮ.ನ.ಪಾ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು. ಪತ್ರಿಭಟನೆಯನ್ನುದ್ದೇಶಿಸಿ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಯು.ಟಿ.ಖಾದರ್, ಹಿರಿಯ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ಭಾಷಣ ನಡೆಸಿದ ಜಾಗವನ್ನು ಬಿಜೆಪಿ ನಾಯಕರು ಶುದ್ಧೀಕರಣಗೊಳಿಸಿ ದಲಿತ ಸಮುದಾಯವನ್ನು ಅವಮಾನ ಮಾಡಿರುವುದು ದೇಶ ಕ್ಷಮಿಸುವುದಿಲ್ಲ. ವಿಶ್ವದಲ್ಲಿ ಭಾರತ ತಲೆತಗ್ಗಿಸುವ ಕೆಲಸ ಆಗಿದೆ. ಸಂವಿಧಾನದ ಮೌಲ್ಯಗಳಿಗೆ ಅವಮಾನ ಎಸಗಿದವರ ವಿರುದ್ಧ ಕ್ರಮ ಕೈಗೊಳ್ಳುವ ಬದಲು, ದೇಶದ ಸಂವಿಧಾನ ಮತ್ತು ಸಂಸ್ಕೃತಿಯ ಪರವಾಗಿ ಧ್ವನಿ ಎತ್ತಿದ ರಾಹುಲ್ ಗಾಂಧಿ ಅವರ ವಿರುದ್ಧವೇ ಪ್ರಕರಣ ದಾಖಲಿಸಿರುವುದು ಖಂಡನೀಯ ಎಂದು ಹೇಳಿದರು. ಗಾಂಧಿ ಕುಟುಂಬವನ್ನು ದೇಶದ ಜನರಿಂದ ಬೇರ್ಪಡಿಸಲು


ಉದಯವಾಹಿನಿ ಚಿತ್ರ

ಬಿಜೆಪಿಗರ ಟೀಕೆ, ಬೆದರಿಕೆಗಳಿಗೆ ಹೆದರುವ ವ್ಯಕ್ತಿತ್ವ ರಾಹುಲ್ ಗಾಂಧಿ ಅವರದ್ದಲ್ಲ. ದೇಶದ ಜನರ ಪರವಾಗಿ, ಸಂವಿಧಾನದ ರಕ್ಷಣೆಗೆ ಅವರು ನಿರಂತರವಾಗಿ ಧ್ವನಿ ಎತ್ತುತ್ತಿದ್ದಾರೆ. ಭವಿಷ್ಯದಲ್ಲಿ ರಾಹುಲ್ ಗಾಂಧಿ ಅವರು ಪ್ರಧಾನಿಯಾಗುವುದನ್ನು ತಪ್ಪಿಸಲು ಯಾರಿಂದಲೂ ಸಾಧ್ಯವಿಲ್ಲ ಎಂದರು.

ಯಾರಿಂದಲೂ ಸಾಧ್ಯವಿಲ್ಲ. ದೇಶದ ಏಕತೆಗಾಗಿ ಉತ್ತರ ,ದಕ್ಷಿಣ ಭಾರತದಲ್ಲಿ ಶಾಂತಿ ಸ್ಥಾಪನೆಗೆ ಗಟ್ಟಿ ನಿಲುವು ಕೈಗೊಂಡ ಇಂದಿರಾ ಗಾಂಧಿ ಹಾಗೂ ರಾಜೀವ್ ಗಾಂಧಿ ಅವರು ತಮ್ಮ ಪ್ರಾಣವನ್ನೇ ತ್ಯಾಗ ಮಾಡಿದ್ದಾರೆ. ಅವರ ತ್ಯಾಗ ಮತ್ತು ಕೊಡುಗೆಗಳನ್ನು ದೇಶ ಎಂದಿಗೂ ಮರೆಯಲು ಸಾಧ್ಯವಿಲ್ಲ ಎಂದರು.

# ರಾಹುಲ್ ಗಾಂಧಿ ವಿರುದ್ಧದ ಎಫ್‌ಐಆರ್ ಖಂಡಿಸಿ ಕಾಂಗ್ರೆಸ್ ಪ್ರತಿಭಟನೆ

• **ಉದಯವಾಹಿನಿ, ಬೀದರ್:**

ಲೋಕಸಭೆಯ ವಿರೋಧ ಪಕ್ಷದ ನಾಯಕ ಹಾಗೂ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ವಿರುದ್ಧ ದಾಖಲಿಸಿರುವ ಎಫ್‌ಐಆರ್ ಖಂಡಿಸಿ ಕಾಂಗ್ರೆಸ್ ಕಾರ್ಯಕರ್ತರು ನಗರದಲ್ಲಿ ಪ್ರತಿಭಟನೆ ನಡೆಸಿದರು. ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಮಾಜಿ ವಿಧಾನ ಪರಿಷತ್ ಸದಸ್ಯ ಅರವಿಂದಕುಮಾರ ಅರಳಿ, 'ಆರ್‌ಎಸ್‌ಎಸ್ ಮತ್ತು ಬಿಜೆಪಿಯ ಗೊಡ್ಡು ಬೆದರಿಕೆಗೆ ಹೆದರುವ ಜಾಯಮಾನ ಕಾಂಗ್ರೆಸ್ ಪಕ್ಷದವರದಲ್ಲ. ನಮ್ಮ ಪೂರ್ವಜರು ಅನೇಕ ಎಫ್‌ಐಆರ್‌ಗಳನ್ನು ಎದುರಿಸಿ, ತ್ಯಾಗ-ಬಲಿದಾನ ಮಾಡಿ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ವಂಶಸ್ಥರು ನಾವು. ಇಂತಹ ಎಫ್‌ಐಆರ್ ಗಳಿಗೆ ಹೆದರುವ, ಜಗ್ಗುವ ಅಥವಾ ಬಗ್ಗುವ ಪ್ರಶ್ನೆಯೇ ಇಲ್ಲ' ಎಂದರು.

'ರಾಹುಲ್ ಗಾಂಧಿ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ನೀಟ್ ಪ್ರಶ್ನೆಪತ್ರಿಕೆ ಸೋರಿಕೆ, ರಾಮಮಂದಿರದ ಚಂದಾ ಅವ್ಯವಹಾರ, ಮತದಾನ ಅಕ್ರಮ ಹಾಗೂ ನಿರುದ್ಯೋಗ ಸೇರಿದಂತೆ ಯುವಜನರ ಸಮಸ್ಯೆಗಳನ್ನು ಸಂಸತ್ತಿನ ಒಳಗೆ ಮತ್ತು ಹೊರಗೆ ನಿರಂತರವಾಗಿ ಪ್ರಶ್ನಿಸುತ್ತಿದ್ದಾರೆ. ಅವರನ್ನು ಕಟ್ಟಿಹಾಕುವ ಬಿಜೆಪಿ ಸರ್ಕಾರದ ಪ್ರಯತ್ನ ವಿಫಲವಾಗಲಿದೆ' ಎಂದು ಹೇಳಿದರು.


ಉದಯವಾಹಿನಿ ಚಿತ್ರ

ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರ ಹೇಳಿಕೆಗಳನ್ನು ಉಲ್ಲೇಖಿಸಿದ ಅರಳಿ, 'ದೇಶದಲ್ಲಿದ್ದಾಗ ಒಂದು ರೀತಿಯ ಹಾಗೂ ವಿದೇಶದಲ್ಲಿ ಮತ್ತೊಂದು ರೀತಿಯ ಹೇಳಿಕೆ ನೀಡುವುದು ದ್ವಂದ್ವ ನಿಲುವಾಗಿದೆ' ಎಂದು ಟೀಕಿಸಿದರು.

'ರಾಹುಲ್ ಗಾಂಧಿ ದೇಶದ ಯುವಕರೊಂದಿಗೆ ಬೆರೆತು ಅವರ ಸುಖ-ದುಃಖ ಆಲಿಸುತ್ತಿದ್ದಾರೆ. ಇದರಿಂದಾಗಿ ಕೇಂದ್ರ ಸರ್ಕಾರದ ಪ್ರಧಾನಿ ಹಾಗೂ ಗೃಹ ಸಚಿವರನ್ನು ಜನರು ಪ್ರಶ್ನಿಸುವಂತಾಗಿದೆ. ರಾಹುಲ್ ಗಾಂಧಿ ,ಮಲ್ಲಿಕಾರ್ಜುನ ಖರ್ಗೆ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷ ದಿನದಿಂದ ದಿನಕ್ಕೆ ಕೇಂದ್ರ ಸರ್ಕಾರದ ಮೇಲೆ ಪ್ರಭಾವ ಬೀರುತ್ತಿರುವುದನ್ನು ಕಂಡು ಬಿಜೆಪಿ ಇಂತಹ ಕೃತ್ಯಗಳಿಗೆ ಮುಂದಾಗಿದೆ. ಇದು ಖಂಡನೀಯ' ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಕೆ.ಇ.ಆರ್.ಸಿ ಕರಡು ನಿಯಮಕ್ಕೆ ತೀವ್ರ ವಿರೋಧ

• **ಉದಯವಾಹಿನಿ, ಬೀದರ್:**

ರಾಜ್ಯದಲ್ಲಿ 150 ಕೆ.ವಿ ಅಥವಾ 650 ವ್ಯಾಟ್‌ಗಿಂತ ಕಡಿಮೆ ಒತ್ತಡದ ವಿದ್ಯುತ್ ಸಂಪರ್ಕಗಳನ್ನು ಮಾಲೀಕರೇ ಪರಿಶೀಲಿಸಿ, ಪರೀಕ್ಷಿಸಿ, ಸ್ವಯಂ ಪ್ರಮಾಣೀಕರಿಸಲು ಅವಕಾಶ ನೀಡುವ ಕೆಇಆರ್‌ಸಿ ಕರಡು ನಿಯಮಕ್ಕೆ ಕಲ್ಯಾಣ ಕರ್ನಾಟಕ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರ ಸಂಘದ ಬೀದರ್ ಘಟಕ ತೀವ್ರ ವಿರೋಧ ವ್ಯಕ್ತಪಡಿಸಿದೆ.ಸಂಘದ ಬೀದರ್ ಘಟಕದ ಪದಾಧಿಕಾರಿಗಳು ಈ ಕುರಿತು ಕೆಇಆರ್‌ಸಿ ವ್ಯವಸ್ಥಾಪಕರಿಗೆ ಮನವಿ ಪತ್ರ ಸಲ್ಲಿಸಿದ್ದಾರೆ. ಕೆಇಆರ್‌ಸಿ ನಿಯಮ ಅವೈಜ್ಞಾನಿಕವಾಗಿದೆ. ಜನರ ಜೀವದೊಂದಿಗೆ ಚೆಲ್ಲಾಟ ಆಡುವ ನಿಯಮವನ್ನು ಕೂಡಲೇ ವಾಪಸ್ ಪಡೆಯಬೇಕು ಎಂದು ಆಗ್ರಹಿಸಿದ್ದಾರೆ. ರಾಜ್ಯದಲ್ಲಿ 50 ಸಾವಿರಕ್ಕೂ ಅಧಿಕ ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರಿದ್ದಾರೆ. ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ಹಾಗೂ ಗ್ರಾಹಕರ ಮಧ್ಯೆ ಸಂಪರ್ಕ ಕೊಂಡಿಯಾಗಿದ್ದಾರೆ. ಅವರ ಬಳಿ 5 ರಿಂದ 6 ಲಕ್ಷ ಮಂದಿ ವೈರ್‌ಮೆನ್, ಸೂಪರ್ ವೈಸರ್ ಹಾಗೂ ಇತರ ಸಿಬ್ಬಂದಿ ಇದ್ದಾರೆ. ಕೆಇಆರ್‌ಸಿ ನಿಯಮದಿಂದ ಅವರ ಕುಟುಂಬಗಳು ಬೀದಿ ಪಾಲಾಗಬೇಕಾಗುತ್ತದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ. ವಿದ್ಯುತ್ ಗ್ರಾಹಕರ ಸುರಕ್ಷತೆಗಾಗಿ ಸ್ವಯಂ ದೃಢೀಕರಣದ ಬದಲು ಅನುಮತಿ ಪಡೆದ ಗುತ್ತಿಗೆದಾರರ ಮೂಲಕ ಪರಿವೀಕ್ಷಣೆ ಹಾಗೂ ದೃಢೀಕರಣ ಮಾಡಿಸಬೇಕು ಎಂದು ಒತ್ತಾಯಿಸಿದ್ದಾರೆ.


# ಸಾರ್ವಜನಿಕ ರಸ್ತೆ ಅತಿಕ್ರಮಣ ;ಕ್ರಮ ಕೈಗೊಳ್ಳುವಂತೆ ಪಿಡಿಓ ಗೆ ಮನವಿ

• **ಉದಯವಾಹಿನಿ, ಸುರಪುರ**

ತಾಲ್ಲೂಕಿನ ಕುರುಬನ ತಳ್ಳಳ್ಳಿ ಗ್ರಾಮದಲ್ಲಿ ಸಾರ್ವಜನಿಕ ರಸ್ತೆ ಒತ್ತುವರಿ ಮಾಡಿರುವ ವ್ಯಕ್ತಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಸಾರ್ವಜನಿಕರು ಆಗ್ರಹಿಸಿದ್ದಾರೆ.

ಗ್ರಾಮದ ಸುಮಾರು 25 ಕ್ಕಿಂತ ಹೆಚ್ಚು ಜನ ಕಚಕನೂರ ಗ್ರಾಮ ಪಂಚಾಯಿತಿಗೆ ತೆರಳಿ ಮನವಿ ಪತ್ರ ಸಲ್ಲಿಸಿ ಮಾತನಾಡಿದರು. ಗ್ರಾಮದ ಮುಖ್ಯ ಅಗಸಿಯ ಆಂಜನೇಯ ದೇವಸ್ಥಾನದಿಂದ ಕನ್ನೆಳ್ಳಿ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಮುಖ್ಯ ಸಿಸಿ ರಸ್ತೆ ಅತಿಕ್ರಮಣ ಮಾಡಿಕೊಂಡು ಕಟ್ಟಡ ನಿರ್ಮಾಣ ಮಾಡಿರುವ ವ್ಯಕ್ತಿ ಗಳ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕೆಂದು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹಾಗೂ ಕಾರ್ಯದರ್ಶಿಗೆ ಒತ್ತಾಯಿಸಿದರು.

2024-25 ನೇ ಸಾಲಿನಲ್ಲಿ ಸಿಸಿ ರಸ್ತೆ ನಿರ್ಮಾಣ ಮಾಡಲಾಗಿದ್ದು ರಸ್ತೆಯ ಮೇಲೆ ಖಾಸಗಿ ವ್ಯಕ್ತಿಗಳಾದ ಬಸ್ಸಮ್ಮ ಗಂ/ ಚಂದಪ್ಪ ಕೋಳಿಹಾಳ ಮತ್ತು ಗೋಪರಡ್ಡಿ ಕಾಕರಗಲ್ಲ ಎಂಬುವ ವ್ಯಕ್ತಿಗಳು


ಉದಯವಾಹಿನಿ ಚಿತ್ರ

ರಸ್ತೆ ಅತಿಕ್ರಮಣ ಮಾಡಿ ಕಟ್ಟಡ ನಿರ್ಮಿಸಿದ್ದಾರೆ, ಇದರಿಂದಾಗಿ ಸಾರ್ವಜನಿಕರಿಗೆ ಹಾಗೂ ವಾಹನಗಳ ಸಂಚಾರಕ್ಕೆ ತೀವ್ರ ಅಡಚಣೆ ಉಂಟಾಗಿದೆ. ಕೂಡಲೇ ಅಧಿಕಾರಿಗಳು ಎಚ್ಚೆತ್ತುಕೊಂಡು ರಸ್ತೆ ಅತಿಕ್ರಮಣ ತೆರವುಗೊಳಿಸಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಗ್ರಾಮಸ್ಥರಾದ ದೇವಿಂದ್ರಪ್ಪ ದೊರಿ,ಚನ್ನಗೌಡ ಚನ್ನೂರ, ಚಂದಪ್ಪ ಛಲವಾದಿ, ದೇವಿಂದ್ರಪ್ಪ ಕಚಕನೂರ, ಬಾಲಯ್ಯ ಕಡಿಮನಿ, ಚನ್ನಪ್ಪ ಆಲಗೂರ, ಮಲ್ಲಿಕಾರ್ಜುನ ದೇವಿಕೇರಿ, ಭೀಮಶಂಕರ ದೇವಿಕೇರಿ, ಸಾಬಣ್ಣ ಜಾಲಹಳ್ಳಿ, ದೇವಿಂದ್ರಪ್ಪ ಕಡಿಮನಿ, ರವಿಕಾಂತ ಕಡಿಮನಿ, ಅಪ್ಪಾಸಾಬ ಕಡಿಮನಿ, ಕರಿಬಸಪ್ಪಗೌಡ ಚನ್ನೂರ, ಶಿವಪ್ಪ ಕಡಿಮನಿ, ಪ್ರಭು ಕಚಕನೂರ ಸೇರಿದಂತೆ ಇತರರು ಇದ್ದರು.

ರಸ್ತೆ ಅತಿಕ್ರಮಣ ಮಾಡಿದ ವ್ಯಕ್ತಿಗಳ ಮೇಲೆ ಕ್ರಮ ಕೈಗೊಂಡು ತೆರವುಗೊಳಿಸುವಂತೆ ಕೆ. ತಳ್ಳಳ್ಳಿ ಗ್ರಾಮಸ್ಥರು ಪಿಡಿಓ ಗೆ ಮನವಿ ಪತ್ರ ಸಲ್ಲಿಸಲಾಯಿತು

# ಕುಡಿಯುವ ನೀರಿಲ್ಲದೆ ಗ್ರಾಮಸ್ಥರ ಪರದಾಟ; ಇರುವುದೊಂದೇ ಕೊಳವೆಬಾವಿ!

## ಈ ಬಗ್ಗೆ ಗಮನ ಹರಿಸಿರುವ ಪಿಡಿಒ ಅವರು ಆದಷ್ಟು ಬೇಗ ಗ್ರಾಮಕ್ಕೆ ಶಾಶ್ವತವಾಗಿ ಕುಡಿಯುವ ನೀರಿನ ವ್ಯವಸ್ಥೆ ಮಾಡುವುದಾಗಿ ತಿಳಿಸಿದ್ದಾರೆ.

• **ಉದಯವಾಹಿನಿ, ಹಾವೇರಿ:**

ಸಮೀಪದ ಭೂವೀರಾಪುರ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸಿದೆ. ಸತತ ಮೂರು ವರ್ಷಗಳಿಂದ ಸಮರ್ಪಕ ನೀರಿಲ್ಲದೆ ಗ್ರಾಮಸ್ಥರು ಪರದಾಡುತ್ತಿದ್ದಾರೆ.

ಭೂವೀರಾಪೂರದಲ್ಲಿ 200 ಕುಟುಂಬಗಳಿದ್ದು ಸಾವಿರಕ್ಕೂ ಅಧಿಕ ಜನ ಗ್ರಾಮಸ್ಥರಿದ್ದಾರೆ. ಈ ಗ್ರಾಮಕ್ಕೆ ಇರುವುದೊಂದೇ ಒಂದು ಕೊಳವೆಬಾವಿ. ಅದರಿಂದ ಇಡೀ ಗ್ರಾಮಕ್ಕೆ ಕುಡಿಯುವ ನೀರು ಪೂರೈಕೆಯಾಗುತ್ತಿದೆ. ಈ ಕೊಳವೆಬಾವಿಯ ನೀರಿನಲ್ಲಿ ಕೆಟ್ಟ ವಾಸನೆ ಬರುತ್ತಿದೆ. ಅಲ್ಲದೆ

**1 : ಶುದ್ಧ ಕುಡಿಯುವ ನೀರಿನ ಘಟಕ ಇತ್ತು**
**2 : ಗ್ರಾಮದ ಮನೆ ಮನೆಗೆ ಜಲಜೀವನ್**
**3 : ಬರುವ ನೀರಿನಲ್ಲಿ ಪಾಚಿಗಟ್ಟಿರುತ್ತದೆ**

ಚರಂಡಿ ನೀರು ಸೇರಿ ಕಲುಷಿತ ನೀರು ಬರುತ್ತಿದೆ. ಇದೇ ನೀರನ್ನು ಗ್ರಾಮಸ್ಥರು ಕುಡಿಯಲು, ಅಡುಗೆ ಮಾಡಲು ಬಳಸುತ್ತಿದ್ದಾರೆ. ಪರಿಣಾಮ ಗ್ರಾಮದಲ್ಲಿ ಸಾಂಕ್ರಾಮಿಕ ರೋಗಗಳು ಕಾಣಿಸಿಕೊಳ್ಳಲಾರಂಭಿಸಿವೆ. ವಾಂತಿ ಬೇದಿ ಸೇರಿದಂತೆ ಉದರ ಸಂಬಂಧಿ ಕಾಯಿಲೆಗಳಿಂದ ಗ್ರಾಮಸ್ಥರು ಬಳಲುತ್ತಿದ್ದಾರೆ. ಕುಡಿಯುವ ನೀರಿನಲ್ಲಿ ಈಗ ಚರಂಡಿ ನೀರು ಸೇರಿ ಬರುತ್ತಿದೆ. ಈ ನೀರಿನಿಂದ ಮೈ ತೊಳೆಯುವುದರಿಂದ ಚರ್ಮದ ಕಾಯಿಲೆಗಳು ಕಾಣಿಸಿಕೊಳ್ಳುತ್ತಿವೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ. ಈ ಕುರಿತಂತೆ ಗ್ರಾಮ ಪಂಚಾಯತ್ ಅಧಿಕಾರಿಗಳಿಗೆ ತಿಳಿಸಿದ್ದೇವೆ, ಮನವಿಯನ್ನೂ ಸಲ್ಲಿಸಿದ್ದೇವೆ. ಆದರೂ ಯಾವುದೇ ಪ್ರಯೋಜನವಾಗಿಲ್ಲಾ. ಗ್ರಾಮ ಪಂಚಾಯತ್ ಸಿಬ್ಬಂದಿಗಳ


ಉದಯವಾಹಿನಿ ಚಿತ್ರ

ಕುಡಿಯುವ ನೀರಿನ ಟ್ಯಾಂಕಿನ ಮೇಲೆ ಕಸ ಹೆಪ್ಪುಗಟ್ಟಿರುತ್ತದೆ. ಪೈಪ್ ಲೈನ್‌ನಲ್ಲಿ ಬರುವ ನೀರಿನಲ್ಲಿ ಪಾಚಿಗಟ್ಟಿರುತ್ತದೆ. ಕೊಳಕು ದುರ್ವಾಸನೆ ಇರುತ್ತೆ. ಈ ಬಗ್ಗೆ ವಾಟರ್‌ಮ್ಯಾನ್‌ಗೆ ಹೇಳಿದರೆ ಅವನು ಪಿಡಿಒಗೆ, ಪಿಡಿಒ ಟಿಇಒಗೆ ಹೇಳುತ್ತಾರೆ. ಅವರು ವಾಟರ್‌ಮನ್‌ನಿಂದ ಸರಿಮಾಡಿಸಿಕೊಳ್ಳಿ ಅಂತಾರೆ-.ಗ್ರಾಮಸ್ಥ ವಿರೂಪಾಕ್ಷಪ್ಪ

ಗ್ರಾಮದಲ್ಲಿ ಮೂರು ವರ್ಷಗಳಿಂದ ಈ ಸಮಸ್ಯೆ ಇದೆ ಎಂದು ತಿಳಿಸಿದರು. ಗ್ರಾಮದಲ್ಲಿನ ಕುಡಿಯುವ ನೀರಿನ ಟ್ಯಾಂಕ್ ಹತ್ತಿ ನೋಡಿದೆವು. ಟಾಕಿ ಸ್ವಚ್ಛವಿಲ್ಲಾ. ಈ ಕುರಿತಂತೆ ಗ್ರಾಮ ಪಂಚಾಯತ್ ಪಿಡಿಒ ಹತ್ತಿರ ಹೋಗಿದ್ದೆವು. ಅವರು ಎರಡು ಮೂರು ದಿನ ಕುಡಿಯಿರಿ ಸಮಸ್ಯೆಯಾಗುವುದಿಲ್ಲಾ ಎಂದು ತಿಳಿಸಿದರು. ಈ ರೀತಿ ನೀರು ಕುಡಿದರೆ ಮನುಷ್ಯ ಏನಾಗುತ್ತಾನೆ ನೀವೇ ನೋಡಿ.ಗ್ರಾಮದ ಯುವಕ ಅಜ್ಜಪ್ಪ

ನಿರ್ಲಕ್ಷ್ಯದಿಂದ ಇಡೀ ಗ್ರಾಮದ ಜನರು ಕಲುಷಿತ ನೀರು ಕುಡಿಯುವಂತಾಗಿದೆ. ಕಳೆದ ಮೂರು ವರ್ಷಗಳಿಂದ ಗ್ರಾಮದಲ್ಲಿನ ಟ್ಯಾಂಕ್ ಸ್ವಚ್ಛಗೊಳಿಸಿಲ್ಲ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

**ಇದ್ದು ಇಲ್ಲದಂತಾದ ಶುದ್ಧ ಕುಡಿಯುವ ನೀರಿನ ಘಟಕ:** ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಇದ್ದರೂ ಅದು ಕಾರ್ಯನಿರ್ವಹಿಸುತ್ತಿಲ್ಲ. ಹೊಸದಾಗಿ ಆರಂಭವಾದಾಗಿನಿಂದ ಘಟಕ ಬಂದ್ ಆಗಿದ್ದೇ ಹೆಚ್ಚು ಎನ್ನುತ್ತಾರೆ ಗ್ರಾಮಸ್ಥರು. ಶುದ್ಧ ಕುಡಿಯುವ ನೀರಿನ ಘಟಕ ಬಂದ್ ಆಗಿದ್ದರಿಂದ ಗ್ರಾಮಸ್ಥರು ಐದು

ಮೊದಲು ಶುದ್ಧ ಕುಡಿಯುವ ನೀರಿನ ಘಟಕ ಇತ್ತು. ಆದರೆ ನೀರು ಫಿಲ್ಟರ್ ಆಗುತ್ತಿರಲಿಲ್ಲಾ. ಮೂರು ವರ್ಷದಿಂದ ರಿಪೇರಿಗೆ ಬರುವುದು, ದುರಸ್ತಿಯಾಗುವುದು ಬರೇ ಇದೆ ಆಗಿದೆ. ವಾಹನವಿದ್ದವರು ಬೇರೆ ಊರುಗಳಿಂದ ಶುದ್ಧ ನೀರು ತಂದು ಕುಡಿಯುತ್ತಾರೆ. ಉಳಿದವರು ಏನು ಮಾಡಬೇಕು ಎಂದು ಪ್ರಶ್ನಿಸುತ್ತಿದ್ದಾರೆ ಗ್ರಾಮಸ್ಥರು.

ಕಿಲೋಮೀಟರ್ ದೂರದ ಹಾವೇರಿಯಿಂದ ಕುಡಿಯಲು ನೀರು ತರುವ ಅನಿವಾರ್ಯತೆ ಇದೆ. ದ್ವಿಚಕ್ರ ವಾಹನವಿದ್ದವರು ಹಾವೇರಿಯಿಂದ ನೀರು ತರುತ್ತಾರೆ.

ವಾಹನ ಇಲ್ಲದವರು ಹೇಗೆ ನೀರು ತರಬೇಕು ಎಂದು ಪ್ರಶ್ನಿಸುತ್ತಿದ್ದಾರೆ ಗ್ರಾಮಸ್ಥರು. ಗ್ರಾಮದ ಮನೆ ಮನೆಗೆ ಜಲಜೀವನ್ ಮಿಷನ್ ಪೈಪ್ ಹಾಕಲಾಗಿದೆ. ಪೈಪ್ ಹಾಕಿ ವರ್ಷ ಕಳೆದರೂ ಪೈಪಲೈನನಲ್ಲಿ ಒಂದು ಹನಿ ನೀರು ಸಹ ಬಂದಿಲ್ಲ. ಭೂವೀರಾಪುರ ಗ್ರಾಮ ಕಳ್ಳಿಹಾಳ ಗ್ರಾಮ ಪಂಚಾಯತ್ ವ್ಯಾಪ್ತಿಗೆ ಬರುತ್ತದೆ. ಕೊಳವೆಬಾವಿ ಸರಿಪಡಿಸಿ ಇಲ್ಲವೇ ಜಲಜೀವನ್ ಮಿಷನ್ ಪೈಪ್‌ನಲ್ಲಿ ನೀರು ಹರಿಸಿ ಎಂದರೂ ಅಧಿಕಾರಿಗಳು ಕ್ಯಾರೇ ಎನ್ನುತ್ತಿಲ್ಲಾ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಇದಲ್ಲದೆ ಗ್ರಾಮದಲ್ಲಿನ ಪೈಪ್‌ಲೈನ್ ತೆಗೆದು ಹೊಸಪೈಪಲೈನ್ ಹಾಕಲು ನಿರ್ಧರಿಸಲಾಗಿದೆ. ಅಲ್ಲಿಯವರೆಗೆ ಗ್ರಾಮಕ್ಕೆ ಬೇರೆ ಕೊಳವೆಬಾವಿಯಿಂದ ನೀರು ಪೂರೈಸಲು ಕ್ರಮ ಕೈಗೊಳ್ಳಲಾಗಿದೆ. ಆದಷ್ಟು ಬೇಗ ಗ್ರಾಮಕ್ಕೆ ಶಾಶ್ವತವಾಗಿ ಕುಡಿಯುವ ನೀರಿನ ವ್ಯವಸ್ಥೆ ಮಾಡುವುದಾಗಿ ಭರವಸೆ ನೀಡಿದರು. ಈ ಹಿಂದೆ ಇದ್ದ ಕೊಳವೆಬಾವಿಯ ಕೇಸಿಂಗ್ ಪೈಪ್ ಒಡೆದು ಮಣ್ಣು ಕಲುಷಿತ ಸೇರುತ್ತಿದೆ. ಆ ಕೊಳವೆಬಾವಿಗೆ ಸಹ ಹೊಸ ಕೇಸಿಂಗ್ ಪೈಪ್ ಹಾಕಿಸುವುದಾಗಿ ತಿಳಿಸಿದ್ದಾರೆ.

## ಮಿನಿ ನ್ಯೂಸ್

### ಹಳ್ಳಿ ಹಳ್ಳಿಗೂ ಪರಿಷತ್ ಕಾರ್ಯ ಚಟುವಟಿಕೆಗೆ ಶ್ಲಾಘನೀಯ

• **ಉದಯವಾಹಿನಿ, ಬಳ್ಳಾರಿ,:**

ಹಳ್ಳಿಹಳ್ಳಿಗೂ ಪರಿಷತ್ತಿನ ಕಾರ್ಯಚಟುವಟಿಕೆಗಳು ತಲುಪುತ್ತಿರುವುದು ಶ್ಲಾಘನೀಯ ಎಂದು ಬಳ್ಳಾರಿಯ ಸೈಬರ್ ಕ್ರೈಂ ಇನ್ಸ್ಪೆಕ್ಟರ್ ಶ್ರೀಮತಿ ಗಾಯತ್ರಿ ಅಭಿಪ್ರಾಯಪಟ್ಟರು. ಕಸಾಪ ಜಿಲ್ಲಾ ಘಟಕವು ಹಂದಿಹಾಳು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿ ಆಯೋಜಿಸಿದ್ದ ದಿ. ಪಟೇಲ ಬಸವರಾಜ ಸ್ಮಾರಕ ದತ್ತಿ ಹಾಗೂ ದಿ. ವೈ. ಲಿಂಗಾರೆಡ್ಡಿ ಮತ್ತು ಪಾರ್ವತಮ್ಮ ದತ್ತಿ ಕಾರ್ಯಕ್ರಮ ಹಾಗೂ ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಹಿರಿಯ ರಂಗಕಲಾವಿದ ಪುರುಷೋತ್ತಮ ಹಂದ್ಯಾಳು ಅವರಿಗೆ ಪರಿಷತ್ತಿನ ಗೌರವ ಪುರಸ್ಕಾರ ಸಮಾರಂಭವನ್ನು ಉದ್ಘಾಟಿಸಿ ಮಾತನಾಡುತ್ತಾ ಹಂದಿಹಾಳು ಗ್ರಾಮದ ಪ್ರತಿಭೆಗಳು ಸಮಾಜದ ವಿವಿಧ ಕ್ಷೇತ್ರಗಳಿಗೆ ಅನುಪಮ ಕೊಡುಗೆ ನೀಡಿದ್ದಾರೆ. ಆ ಸಾಲಿನಲ್ಲಿ ರಂಗಭೂಮಿಯ ಚಟುವಟಿಕೆಗಳ ಮೂಲಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಪುರುಷೋತ್ತಮ ಹಂದ್ಯಾಳು ಗ್ರಾಮದ ಕೀರ್ತಿಯನ್ನು ಹೆಚ್ಚಿಸಿದ್ದಾರೆ ಎಂದು ಶ್ರೀಮತಿ ಗಾಯತ್ರಿ ನುಡಿದರು. ಕುವೆಂಪು ಮಕ್ಕಳ ಸಾಹಿತ್ಯ ಕುರಿತು ವೀರಶೈವ ಕಾಲೇಜಿನ ಕನ್ನಡ ಉಪನ್ಯಾಸಕರಾದ ಡಾ. ನೀಲಮ್ಮ ವಿಶೇಷ ಉಪನ್ಯಾಸ ನೀಡಿದರು.ದತ್ತಿ ದಾನಿಗಳಾದ ಖ್ಯಾತ ವೈದ್ಯರು ಡಾ. ಅರವಿಂದ ಪಟೇಲ ಮಾತನಾಡಿ ತಮ್ಮ ತಂದೆಯವರ ಹೆಸರಿನಲ್ಲಿ ನೀಡಿದ ದತ್ತಿ ದಾನವು ಜ್ಞಾನದಾಸೋಹದ ಮೂಲಕ ಸಾರ್ಥಕ ಗೊಳ್ಳುತ್ತಿರುವುದು ಪರಿಷತ್ತಿನ ಬಗ್ಗೆ ಅತೀವ ಹೆಮ್ಮೆಮೂಡಿಸದೆ ಎಂದರು. ವೇದಿಕೆಯಲ್ಲಿ ಕ.ಸಾ.ಪ ಜಿಲ್ಲಾ ಅಧ್ಯಕ್ಷ ಡಾ. ನಿಷ್ಠಿ ರುದ್ರಪ್ಪ, ನಿವೃತ್ತ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಮಲ್ಲಿಕಾರ್ಜುನಯ್ಯ ಹಿರೇಮಠ ವೇದಿಕೆ ಉದ್ದೇಶಿಸಿ ಮಾತನಾಡಿದರು. ಮುಖ್ಯಗುರುಗಳಾದ ಶ್ರೀಮತಿ ಶಶಿರೇಖಾ ಎಸ್, ಕಸಾಪ ಜಿಲ್ಲಾ ಸಂಚಾಲಕ ಕಪ್ಪಗಲ್ಲು ಬಿ ಚಂದ್ರಶೇಖರಚಾರ್, ಕಥೆಗಾರ ವೀರೇಂದ್ರ ರಾವಿಹಾಳ್ ವೇದಿಕೆಯಲ್ಲಿ ಉಪಸ್ಥಿತರಿದ್ದರು

### ಅಕ್ರಮ ಅಂಗಡಿಗಳ ತೆರವು

• **ಉದಯವಾಹಿನಿ, ಕಮಲನಗರ:**

ತಾಲ್ಲೂಕಿನ ವಾಗನಗೀರಾ ಗ್ರಾಮದ ಶ್ರೀ ಖಂಡೋಬಾ ದೇವಸ್ಥಾನದ ಮುಂಭಾಗದಲ್ಲಿ ಅಕ್ರಮ ಅಂಗಡಿ ಬಿ.ಪಿ.ಎಸ್ ಯಂತ್ರದ ಮೂಲಕ ತೆರವುಗೊಳಿಸಿ, ಸರ್ವೆ ಮಾಡಿ ಅತಿಕ್ರಮಣ ತೆರವುಗೋಳಿಸಬೇಕಾಗಿ ಕಾರ್ಯನಿರ್ವಾಹಕ ಹಣಮಂತ ರಾವ್ ಕೌಟಗೆ ಅವರಲ್ಲಿ ಮನವಿ ಸಲ್ಲಿಸಿದರು. ನಾವು ವಾಗನಗೀರ ಗ್ರಾಮದ ನಿವಾಸಿಗಳು ಹಾಗೂ ಶ್ರೀ ಖಂಡೋಬಾ ದೇವಸ್ಥಾನದ ಸದಸ್ಯರು ಶ್ರೀ ಖಂಡೋಬಾ ದೇವಸ್ಥಾನದ ಮುಂಭಾಗದಲ್ಲಿ ಅಕ್ರಮವಾಗಿ ಅಂಗಡಿ ನಿರ್ಮಿಸಿ ವ್ಯಾಪಾರ ನಡೆಸುತ್ತಿದ್ದಾರೆ. ಇದರಿಂದ ಗ್ರಾಮಸ್ಥರಿಗೆ ದೇವಸ್ಥಾನಕ್ಕೆ ತೊಂದರೆಯಾಗುತ್ತಿದೆ. ದೇವಸ್ಥಾನದ ಪಾವಿತ್ರ್ಯಕ್ಕೂ ಧಕ್ಕೆಯಾಗುತ್ತಿದೆ. ಈ ಬಗ್ಗೆ ತಾವುಗಳು ಸರ್ವೇ ಮಾಡಿ ಅತಿಕ್ರಮಣ ತೆರವುಗೊಳಿಸಿ ಸಂಬಂಧ ಪಟ್ಟವರಿಗೆ ಆದೇಶ ನೀಡಿ. ಇಲ್ಲವಾದರೆ ಮುಂದಿನ ದಿನಗಳಲ್ಲಿ ಉಪವಾಸ ಸತ್ಯಾಗ್ರಹ ಮಾಡಲಾಗುತ್ತದೆ ಎಂದು ಪತ್ರಿಕೆಯಲ್ಲಿ ಮನವಿ ಮಾಡಿಕೊಂಡಿದ್ದಾರೆ. ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ, ಅಂಗಡಿ ಜೆ.ಪಿ.ಎಸ್ ಯಂತ್ರದ ಮೂಲಕ ತೆರವುಗೊಳಿಸಿ, ಸರ್ವೆ ಮಾಡಿ ಅತಿಕ್ರಮಣ ಸ್ಥಳ ಪರಿಶೀಲನೆ ನಡೆಸಿ, ದೇವಸ್ಥಾನದ ಮುಂಭಾಗದಲ್ಲಿರುವ ಅಕ್ರಮ ಅಂಗಡಿಯನ್ನು ತಕ್ಷಣ ತೆರವುಗೊಳಿಸಿ, ಒಂದು ವೇಳೆ ಈ ಸ್ಥಳವು ಗಾಯರಾನ ಸ್ಥಳ, ಗಾವಕಾನ ಸ್ಥಳ ಅಥವಾ ಗ್ರಾಮ ಪಂಚಾಯತಿಯ ಸ್ಥಳ ಎಂಬುದನ್ನು ಗುರುತಿಸಿ ಸಂಭಂಧ ಇಲಾಖೆಗೆ ಸೂಚಿಸಿ ವ್ಯಾಪ್ತಿ ಇತ್ಯರ್ಥಗೊಳಿಸಿ ನ್ಯಾಯ ಮಾಡಿಕೊಡಬೇಕಾಗಿ ಎಂದು ಮನವಿಯಲ್ಲಿ ತಿಳಿಸಿದ್ದಾರೆ ಒಂದು ವೇಳೆ ಈ ಮನವಿಗೆ ಸೂಕ್ತ ಕ್ರಮ ಕೈಗೊಳ್ಳದಿದ್ದಲ್ಲಿ, ಶ್ರೀ ಖಂಡೋಬಾ ದೇವಸ್ಥಾನದ ಸದಸ್ಯರು ತಾಲುಕಾ ಪಂಚಾಯತ ಕಚೇರಿ, ಕಮಲನಗರದ ಮುಂಭಾಗದಲ್ಲಿ ಶಾಂತಿಯುತ ಧರಣಿ ಸತ್ಯಾಗ್ರಹ ನಡೆಸಲು ಅನಿವಾರ್ಯವಾಗುತದೆ. ಈ ದರಣಿಯಿಂದ ಉಂಟಾಗುವ ಯಾವುದೇ ಕಾನೂನು ಮತ್ತು ಸುವ್ಯವಸ್ಥೆಯ ಸಮಸ್ಯೆಗೆ ಸಂಬಂಧಪಟ್ಟ ಅಧಿಕಾರಿಗಳೇ ಸಂಪೂರ್ಣ ಹೊಣೆಯಾರರು ಎಂದರು.

### 'ಕುಡಾ' ಕಚೇರಿಯಲ್ಲಿ ರಾತ್ರಿ ಇಡೀ ಕೆಲಸವೇ?

• **ಉದಯವಾಹಿನಿ, ಕೊಪ್ಪಳ:**

ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಡೆ ಭ್ರಷ್ಟಾಚಾರದ ತನಿಖೆ ಒಂದೆಡೆ ಚುರುಕುಗೊಂಡಿದೆ. ಈ ನಡುವೆ ಕಳೆದ ಮೂರ್ನಾಲ್ಕು ದಿನದಿಂದ ಹಾಲಿ ಆಯುಕ್ತರು ರಾತ್ರಿ ಇಡೀ ಕಚೇರಿಯಲ್ಲಿ ಕೆಲಸ ಮಾಡುತ್ತಿರುವುದು ಅನುಮಾನಕ್ಕೆ ಎಡೆ ಮಾಡಿದೆ.

ನೈಟ್ ಡ್ಯೂಟಿ ಹಿಂದೆ ಹತ್ತಾರು ಊಹಾಪೋಹ ಹರಿದಾಡುತ್ತಿದ್ದು, ಆಗಿರುವ ಭ್ರಷ್ಟಾಚಾರದ ಸಾಕ್ಷ ನಾಶಕ್ಕೋ ಅಥವಾ ಬೇರೆ ಯಾವ ಕಾರಣಕ್ಕೆ ರಾತ್ರಿ 10 ಗಂಟೆ ವರೆಗೆ ಕಚೇರಿ ತೆರೆದುಕೊಂಡಿರುತ್ತದೆ ಎಂಬುದು ಅಧಿಕಾರಿಗಳು ತಿಳಿಸಬೇಕಿದೆ ಸಾರ್ವಜನಿಕರ ಪ್ರಶ್ನೆ. ಪ್ರಾಧಿಕಾರದ ಆಯುಕ್ತ ಶರಣಪ್ಪ ಚೌವ್ಹಾಣ ಸೋಮ ವಾರ ರಾತ್ರಿ 9.40ರ ವರೆಗೆ ಕುಡಾ ಕಚೇರಿಯಲ್ಲಿದ್ದರು.

ಕಂಪ್ಯೂಟರ್ ಆಪರೇಟರ್ ಜೊತೆಗೂಡಿ ತಮ್ಮ ಚೇಂಬರ್ ನಲ್ಲಿ ಇದ್ದಿದ್ದು ಕಂಡು ಬಂದಿದೆ. ಪ್ರಾಧಿಕಾರದ ಕಚೇರಿ ಯಲ್ಲಿ ಇಡೀ ದಿನ ಮಾಡಿದರೂ ಮುಗಿಯದ ಕೆಲಸವಾದರೂ ಏನಿದೆ ಎಂಬ ಕುತೂಹಲ ಸಾರ್ವಜನಿಕರಲ್ಲಿ ಮೂಡಿದೆ. ಪ್ರತ್ಯೇಕ ಬ್ಯಾಂಕ್ ಖಾತೆ ಸೃಷ್ಟಿಸಿ ಬರೋಬ್ಬರಿ 8 ಕೋಟಿ ರು. ಭ್ರಷ್ಟಾಚಾರ ಮಾಡಿರುವ ಪ್ರಕರಣ ತನಿಖೆ ನಡೆದಿರುವಾಗಲೇ ಅಧಿಕಾರಿಗಳು ರಾತ್ರಿ ಡ್ಯೂಟಿ ಮಾಡು ತ್ತಿರುವುದು ಸಾಕಷ್ಟು ಅನುಮಾನ ಹುಟ್ಟು ಹಾಕಿದೆ.

ರಾತ್ರಿ 9.40ಕ್ಕೆ ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಆಸಕ್ತರು ಕಚೇರಿಯಲ್ಲೇ ಇರುವುದು ಕಂಡು ಬಂದಿದೆ.ಕರ್ನಾಟಕ ನವ ನಿರ್ಮಾಣ ಸೇನೆ ಮುಖಂಡರು ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಕಚೇರಿಗೆ ಸೋಮವಾರ ರಾತ್ರಿ 9.40ರ ಸುಮಾರಿಗೆ ಭೇಟಿ ನೀಡಿದ್ದಾರೆ.

### ಮೇಲ್ಛಾವಣಿ ಕುಸಿತ; ಹಲವು ಮಕ್ಕಳಿಗೆ ಗಾಯ!

• **ಉದಯವಾಹಿನಿ, ಬಾಗಲಕೋಟೆ:**

ಸರ್ಕಾರಿ ಶಾಲೆಯ ಮೇಲ್ಛಾವಣಿ ಕಾಂಕ್ರೀಟ್ ಕುಸಿದು ಐವರು ಮಕ್ಕಳು ಗಾಯಗೊಂಡಿರುವುದು ಬಾಗಲಕೋಟೆಯ ಮುಗಳೊಳ್ಳಿ ತಾಂಡಾದಲ್ಲಿ ನಡೆದಿದೆ. ತರಗತಿ ನಡೆಯುವಾಗಲೇ ಘಟನೆ ನಡೆದಿದ್ದು, ಗಾಯಗೊಂಡ ಮಕ್ಕಳಿಗೆ ಚಿಕಿತ್ಸೆ ಕೊಡಿಸಲಾಗಿದೆ. ಕಬ್ಬಿಣದ ಸರಳು ಕಾಣುವಷ್ಟು ಶಾಲೆಯ ಕೊಠಡಿ ಹಾಳಾಗಿ ಹೋಗಿದ್ದು, ಅಧಿಕಾರಿಗಳ ನಿರ್ಲಕ್ಷ್ಯದ ವಿರುದ್ಧ ಪೋಷಕರ ಆಕ್ರೋಶ ಹೊರಹಾಕಿದ್ದಾರೆ. ತರಗತಿ ನಡೆಯುವಾಗಲೇ ಕೊಠಡಿ ಮೇಲ್ಛಾವಣಿ ಕುಸಿತಗೊಂಡಿದ್ದು, ಅದೃಷ್ಟವಶಾತ್ ವಿದ್ಯಾರ್ಥಿಗಳು ಪ್ರಾಣಾಪಾಯದಿಂದ ಪಾರಾಗಿದ್ದಾರೆ. 1 ರಿಂದ 6 ನೇ ತರಗತಿ ವರೆಗೆ ಇರುವ ಶಾಲೆಯಲ್ಲಿ ಒಟ್ಟು 53 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಶಾಲೆಯಲ್ಲಿ ಒಟ್ಟು ಮೂರು ಕೊಠಡಿಗಳಿದ್ದು, ಸಂಪೂರ್ಣವಾಗಿ ಶಿಥಿಲಾವಸ್ಥೆ ತಲುಪಿದೆ. ಇನ್ನು, ಮೇಲ್ಛಾವಣಿ ಕುಸಿದ ಕೊಠಡಿಯಲ್ಲಿ 5 ಮತ್ತು 6ನೇ ತರಗತಿ ವಿದ್ಯಾರ್ಥಿಗಳಿದ್ದರು. 5 ನೇ ತರಗತಿಯ 14 ವಿದ್ಯಾರ್ಥಿಗಳು, 6ನೇ ತರಗತಿಯ 12 ಸೇರಿ ಒಟ್ಟು 26 ವಿದ್ಯಾರ್ಥಿಗಳಿದ್ದರು. ಮೇಲ್ಛಾವಣಿ ಕುಸಿತದಿಂದ ಐದು ವಿದ್ಯಾರ್ಥಿಗಳು ಗಾಯಗೊಂಡಿದ್ದಾರೆ. ಪ್ರೇಮ್, ರಾಕೇಶ್, ಮಹೇಶ್, ಸುನಿತಾ, ಸತೀಶ್‌ಗೆ ಗಾಯವಾಗಿದ್ದು, ಬಿಇಓ ವಾಹನದಲ್ಲಿ ಆಸ್ಪತ್ರೆಗೆ ರವಾನಿಸಿ ಚಿಕಿತ್ಸೆ ಕೊಡಿಸಲಾಗಿದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ನಿಮ್ಮ ಮನಸ್ಸು ಒಳ್ಳೆಯ ವಿಷಯಗಳನ್ನು ಗ್ರಹಿಸುತ್ತದೆ. ನೀವು ನಿಮ್ಮ ಹೂಡಿಕೆಗಳನ್ನು ಸಂಪ್ರದಾಯಬದ್ಧವಾಗಿ ಉಳಿತಾಯ ಮಾಡಿದರೆ ಹಣ ಮಾಡುತ್ತೀರಿ. ನಿಮ್ಮ ಹತ್ತವರ ಆರೋಗ್ಯ ಚಿಂತೆ ಮತ್ತು ಆತಂಕಕ್ಕೆ ಕಾರಣವಾಗುತ್ತದೆ. ಪ್ರೀತಿಯ ಜೀವನ ಇಂದು ನಿಜವಾಗಿಯೂ ಸುಂದರವಾಗಿ ಅರಳುತ್ತದೆ.

**ವೃಷಭ** ದ್ವೇಷ ಪ್ರೀತಿಗಿಂತ ಹೆಚ್ಚು ಶಕ್ತಿಶಾಲಿಯಾಗಿದ್ದು ನಿಮ್ಮ ದೇಹದ ಮೇಲೆ ಪ್ರಾಣಾಂತಿಕ ಪರಿಣಾಮ ಬೀರುವದರಿಂದ ನಿಮ್ಮ ದ್ವೇಷವನ್ನು ಸಾಯಿಸಲು ಒಂದು ಸಮರಸದ ಸ್ವಭಾವವನ್ನು ರೂಪಿಸಿಕೊಳ್ಳಿ. ದುಷ್ಟತೆಯು ಒಳಿತಿಗಿಂತ ಬೇಗ ವಿಜಯ ಸಾಧಿಸುತ್ತದೆಂದು ನೆನಪಿಡಿ.

**ಮಿಥುನ** ನೀವು ಆರಾಮವಾಗಿರುವ ಭಾವನೆ ಹೊಂದಿರುತ್ತೀರಿ ಮತ್ತು ಆನಂದಿಸಲು ಸೂಕ್ತ ಮನೋಭಾವದಲ್ಲಿರುತ್ತೀರಿ. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಪರಿಹರಿಸಬಹುದು ಮತ್ತು ನೀವು ಹಣದಿಂದ ಲಾಭ ಪಡೆಯಬಹುದು. ನಿಮ್ಮ ಜೊತೆಗಿರುವ ಯಾರಾದರೂ ನಿಮ್ಮ ಇತ್ತೀಚಿನ ಕ್ರಮಗಳಿಂದ ಕಿರಿಕಿರಿಗಳ್ಳಬಹುದು.

**ಕಟಕ** ಕುಡಿಯುವ ಅಭ್ಯಾಸವನ್ನು ತೊಡೆದುಹಾಕಲು ಇದೊಂದು ಅತ್ಯಂತ ಪವಿತ್ರವಾದ ದಿನ. ನೀವು ವೈನ್ ಕುಡಿಯುವುದು ಆರೋಗ್ಯದ ಪ್ರಾಣಾಂತಿಕ ಶತ್ರು ಎಂದು ನೀವು ಅರ್ಥ ಮಾಡಿಕೊಳ್ಳಬೇಕು ಮತ್ತು ಇದು ನಿಮ್ಮ ಸಾಮರ್ಥ್ಯವನ್ನು ಕುಂಠಿತಗೊಳಿಸುತ್ತದೆ. ಇಂದು ನೀವು ಸುಲಭವಾಗಿ ಬಂಡವಾಳ ಪಡೆಯಬಹುದು.

**ಸಿಂಹ** ನಿಮ್ಮ ಪ್ರೀತಿಪಾತ್ರರು ಬದ್ಧತೆಯನ್ನು ಬಯಸುತ್ತಾರೆ ನೀವು ಕಾಯ್ದುಕೊಳ್ಳಲು ಕಷ್ಟವಾಗುವ ಭರವಸೆಯನ್ನು ನೀಡಬೇಡಿ. ನಿಮ್ಮ ಕೆಲಸಕ್ಕೆ ಅಂಟಿಕೊಳ್ಳಿ ನಿಮಗೆ ಸಹಾಯ ಮಾಡಲು ಇತರರನ್ನು ಅವಲಂಬಿಸಬೇಡಿ. ದಿನ ಉತ್ತಮವಾಗಿದೆ, ಇತರರೊಂದಿಗೆ ನೀವು ನಿಮಗಾಗಿ ಸಹ ಸಮಯವನ್ನು ತೆಗೆದುಕೊಳ್ಳುವಿರಿ .

**ಕನ್ಯಾ** ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದಾದರೂ ನಿಮ್ಮ ಬದುಕನ್ನು ಲಘುವಾಗಿ ತೆಗೆದುಕೊಳ್ಳಬೇಡಿ ಜೀವನದ ರಕ್ಷಣೆ ನಿಮ್ಮ ನಿಜವಾದ ಹೊಣೆಗಾರಿಕೆಯೆಂದು ಅರ್ಥ ಮಾಡಿಕೊಳ್ಳಿ. ಜೀವನ ಸಂಗಾತಿಯೊಂದಿಗೆ ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯದ ಬಗ್ಗೆ ಜಗಳವಾಗುವ ಸಾಧ್ಯತೆ ಇದೆ.

**ತುಲಾ** ನಿಮ್ಮ ಪ್ರಚಂಡ ಬೌದ್ಧಿಕ ಸಾಮರ್ಥ್ಯ ಅಂಗವೈಕಲ್ಯದ ವಿರುದ್ಧ ಹೋರಾಡಲು ಸಹಾಯ ಮಾಡುತ್ತದೆ. ಕೇವಲ ಸಕಾರಾತ್ಮಕ ಆಲೋಚನೆಗಳ ಜೊತೆ ಮಾತ್ರ ನೀವು ಈ ಸಮಸ್ಯೆಯ ವಿರುದ್ಧ ಹೋರಾಡಬೇಕು. ನಿಮ್ಮ ಜೀವನದ ಕಳಪೆ ಆರೋಗ್ಯದಿಂದಾಗಿ, ನಿಮ್ಮ ಹಣವನ್ನು ಇಂದು ಖರ್ಚು ಮಾಡಬಹುದು.

**ವೃಶ್ಚಿಕ** ಕುಟುಂಬದ ವೈದ್ಯಕೀಯ ವೆಚ್ಚದಲ್ಲಿ ಹೆಚ್ಚಳವನ್ನು ತಳ್ಳಿಹಾಕಲು ಸಾಧ್ಯವಿಲ್ಲ. ಊಹೆಗಳು ಲಾಭ ತರುತ್ತವೆ. ನೀವು ಪಾರ್ಟಿ ನೀಡಲು ಯೋಜಿಸುತ್ತಿದ್ದಲ್ಲಿ ನಿಮ್ಮ ಎಲ್ಲಾ ಒಳ್ಳೆಯ ಸ್ನೇಹಿತರನ್ನು ಆಮಂತ್ರಿಸಿ ನಿಮ್ಮನ್ನು ಅಸ್ತುಷ್ಟಗೊಳಿಸುವ ಬಹಳಷ್ಟು ಜನರಿರುತ್ತಾರೆ. ಸ್ನೇಹ ಆಳವಾದ ಹಾಗೆ ಪ್ರಣಯ ನಿಮ್ಮೆಡೆ ಬರುತ್ತದೆ.

**ಧನಸ್ಸು** ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ನಿಮ್ಮ ಹಣವನ್ನು ಸಂಗ್ರಹಿಸಿದಾಗ ಮಾತ್ರ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ. ಇದನ್ನು ನೀವು ಚೆನ್ನಾಗಿ ಅರ್ಥಮಾಡಿಕೊಳ್ಳಿ ಇಲ್ಲದಿದ್ದರೆ ನೀವು ಮುಂಬರುವ ಸಮಯದಲ್ಲಿ ವಿಷಾದಿಸಬೇಕಾಗುತ್ತದೆ.

**ಮಕರ** ಸ್ವಯಂ ಸುಧಾರಣೆಯ ಯೋಜನೆಗಳು ಒಂದಕ್ಕಿಂತ ಹೆಚ್ಚು ರೀತಿಯಲ್ಲಿ ಫಲ ನೀಡುತ್ತವೆ – ನಿಮ್ಮ ಬಗ್ಗೆ ನಿಮಗೇ ಒಳ್ಳೆಯದೆನಿಸುತ್ತದೆ ಮತ್ತು ವಿಶ್ವಾಸ ಮೂಡುತ್ತದೆ. ನೀವು ನಿಮ್ಮ ಮನೆಯ ಸದಸ್ಯರನ್ನು ಎಲ್ಲಿಗಾದರೂ ಸುತ್ತಾಡಲು ಕರೆದುಕೊಂಡು ಹೋಗಬಹುದು ಮತ್ತು ನಿಮ್ಮ ಸಾಕಷ್ಟು ಹಣವು ಖರ್ಚಾಗಬಹುದು .

**ಕುಂಭ** ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ ಹಾಗೂ ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ಧಿ ಜೀವನದ ಹೆಬ್ಬಾಗಿಲಾಗಿದೆ. ಇದು ಜೀವನದ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಸಹಾಯ ಮಾಡುತ್ತದೆ .

**ಮೀನ** ಸೃಜನಶೀಲ ಆಸಕ್ತಿಗಳು ನಿಮ್ಮನ್ನು ಶಾಂತವಾಗಿರಿಸುತ್ತವೆ. ಇಂದು ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಹೊಂದಿರುವ ಸಾಧ್ಯತೆ ಇದೆ ಆದರೆ ನಿಮ್ಮ ಬುದ್ಧಿವಂತಿಕೆಯಿಂದ ಈ ಹಾನಿಯನ್ನು ಲಾಭದಲ್ಲಿ ಪರಿವರ್ತಿಸಬಹುದು ಸ್ನೇಹಿತರು ಸಂತೋಷದ ಸಂಜೆಗಾಗಿ ನಿಮ್ಮನ್ನು ಅವರ ಸ್ಥಳಕ್ಕೆ ಆಮಂತ್ರಿಸುತ್ತಾರೆ.

## 8 ರಾಜ್ಯಗಳ ಪೊಲೀಸರ ನಿದ್ದೆಗೆಡಿಸಿದ್ದ ಆರೋಪಿ ಕೇರಳದಲ್ಲಿ ಕೊನೆಗೂ ಅರೆಸ್ಟ್..!

• ಉದಯವಾಹಿನಿ, ಮಂಗಳೂರು:


ಉದಯವಾಹಿನಿ ಚಿತ್ರ

ನ್ಯಾಷನಲ್ ಕ್ರೈಮ್ ಇನ್ವೆಸ್ಟಿಗೇಷನ್ ಬ್ಯೂರೋ ಸಂಸ್ಥೆಯ ಹಿರಿಯ ಅಧಿಕಾರಿ ಮತ್ತು ನಿರ್ದೇಶಕ ಎಂದು ಹೇಳಿಕೊಂಡು ಕೋಟ್ಯಂತರ ರೂಪಾಯಿ ವಂಚಿಸಿ, ಆಂತರಿಕ ಭದ್ರತೆಗೆ ಸವಾಲಾಗಿದ್ದ ನಕಲಿ ಅಧಿಕಾರಿಯನ್ನು ಮಂಗಳೂರು ಸಿಸಿಬಿ ಪೊಲೀಸರು ಕೇರಳದ ಕಣ್ಣೂರಿನಲ್ಲಿ ಯಶಸ್ವಿ ಕಾರ್ಯಾಚರಣೆ ನಡೆಸಿ ಬಂಧಿಸಿದ್ದಾರೆ.

ಬಂಧಿತ ಆರೋಪಿಯನ್ನು ಸ್ಯಾಮ್ ಪೀಟರ್ (64) ಎಂದು ಗುರ್ತಿಸಲಾಗಿದೆ. ಈತ ಕಳೆದ 25 ವರ್ಷಗಳಿಂದ ತಲೆಮರೆಸಿಕೊಂಡಿದ್ದು, ಸುಮಾರು 8 ರಾಜ್ಯಗಳಲ್ಲಿ 17 ಕ್ಕೂ ಹೆಚ್ಚು ವಂಚನೆ ಮತ್ತು ಸುಲಿಗೆ ಪ್ರಕರಣಗಳಲ್ಲಿ ಪೊಲೀಸರಿಗೆ ಬೇಕಾಗಿದ್ದ ಮೋಸ್ಟ್ ವಾಂಟೆಡ್ ಆರೋಪಿಯಾಗಿದ್ದಾನೆ. ಮಂಗಳೂರು ನಗರ ಪೊಲೀಸ್ ಆಯುಕ್ತ ಸುಧೀರ್ ಕುಮಾರ್ ರೆಡ್ಡಿ ಅವರು ಈ ಕುರಿತು ಮಾಹಿತಿ ನೀಡಿದ್ದು, ಆರೋಪಿ ಸ್ಯಾಮ್ ಪೀಟರ್ ಅಲಿಯಾಸ್ ಡ್ಯಾನಿ ತರಕ್ಕನ್ ಅಲಿಯಾಸ್ ಆಂಥೋನಿನನ್ನು ಸೋಮವಾರ ರಾತ್ರಿ ಕೇರಳದ ಕಣ್ಣೂರಿನಲ್ಲಿ ಬಂಧಿಸಲಾಗಿದೆ ಎಂದು ಹೇಳಿದ್ದಾರೆ.ಜಾಮೀನು ಪಡೆದುಕೊಂಡ ಬಳಿಕ ವಿಚಾರಣೆಗೆ ಹಾಜರಾಗದೆ ತಲೆಮರೆಸಿಕೊಂಡಿದ್ದ ಈತ, ಕರ್ನಾಟಕ ಸೇರಿದಂತೆ ಹಲವು ರಾಜ್ಯಗಳಲ್ಲಿ ದಾಖಲಾಗಿರುವ ಪ್ರಕರಣಗಳಲ್ಲಿ ಪೊಲೀಸರಿಗೆ ಬೇಕಾಗಿದ್ದ ಎಂದು ತಿಳಿಸಿದ್ದಾರೆ.

ಸ್ಯಾಮ್ ಪೀಟರ್‌ನನ್ನು 2019ರಲ್ಲಿ ಮಂಗಳೂರು ಪೂರ್ವ ಠಾಣೆ ಪೊಲೀಸರು ಮೊದಲ ಬಾರಿಗೆ ಬಂಧಿಸಿದ್ದರು. ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ)ಯ ಹಿರಿಯ ಅಧಿಕಾರಿಯಂತೆ ನಟಿಸಿ, ಹಣಕಾಸು ವಿವಾದಗಳು, ಬ್ಯಾಂಕ್ ವಂಚನೆ ಹಾಗೂ ತೆರಿಗೆಗೆ ಸಂಬಂಧಿಸಿದ ಪ್ರಕರಣಗಳನ್ನು ಇತ್ಯರ್ಥಪಡಿಸುವುದಾಗಿ ನಂಬಿಸಿ ಜನರಿಂದ ಹಣ ಪಡೆದು ಸುಲಿಗೆ ಮಾಡುತ್ತಿದ್ದ ಆರೋಪ ಆತನ ಮೇಲಿತ್ತು. ನಂತರ ಜಾಮೀನಿನ ಮೇಲೆ ಬಿಡುಗಡೆಯಾಗಿದ್ದ ಆತ 2023ರ ಸೆಪ್ಟೆಂಬರ್ ಬಳಿಕ ನ್ಯಾಯಾಲಯದ ವಿಚಾರಣೆಗೆ ಹಾಜರಾಗದೆ ತಲೆಮರೆಸಿಕೊಂಡಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

## ಮಲ-ಮೂತ್ರವನ್ನು ಕೈಯಿಂದ ಸ್ವಚ್ಛ ಮಾಡಿಸಿದ ಆರೋಪ: ಇಬ್ಬರು ಸಿಬ್ಬಂದಿ ಅಮಾನತು

• ಉದಯವಾಹಿನಿ, ಹಾವೇರಿ :

ಹಾವೇರಿ ಜಿಲ್ಲೆಯ ಸವಣೂರು ತಾಲ್ಲೂಕು ಆಸ್ಪತ್ರೆಯಲ್ಲಿ ಮಲ-ಮೂತ್ರವನ್ನು ಕೈಯಿಂದ ತೆರವುಗೊಳಿಸಲು ಹೇಳಿದ ಆರೋಪದ ಮೇಲೆ ಇಬ್ಬರು ಸಿಬ್ಬಂದಿಯನ್ನು ಅಮಾನತುಗೊಳಿಸಲಾಗಿದೆ. ಆಗಸ್ಟ್ 28ರಂದು ವರದಿಯಾದ ಘಟನೆಗೆ ಸಂಬಂಧಿಸಿದಂತೆ ವೈದ್ಯಾಧಿಕಾರಿ ಡಾ. ಶಂಕರ್ ಹಿರೇಗೌಡ್ರು ಹಾಗೂ ಸಿಬ್ಬಂದಿ ನರ್ಸ್ ವನಿತಾ ಅವರನ್ನು ಅಮಾನತುಗೊಳಿಸಲಾಗಿದೆ. ಆಸ್ಪತ್ರೆಯಲ್ಲಿ ಇಬ್ಬರು ವ್ಯಕ್ತಿಗಳನ್ನು ಮಲ ಮತ್ತು ಮೂತ್ರವನ್ನು ಕೈಯಿಂದಲೇ ತೆರವುಗೊಳಿಸುವಂತೆ ಸೂಚಿಸಿದ್ದರು ಎಂದು ಸುದ್ದಿಯಾಗಿತ್ತು.


ಹಾವೇರಿ ಜಿಲ್ಲೆಯಲ್ಲಿ ಉಕ್ಕಿ ಹರಿಯುತ್ತಿದ್ದ ಮಲದ ಗುಂಡಿಯನ್ನು ಇಬ್ಬರು ರೋಗಿಗಳಿಂದ ಕೈಯಿಂದಲೇ ಸ್ವಚ್ಛಗೊಳಿಸುವಂತೆ ಒತ್ತಾಯಿಸಿದ ಆರೋಪದ ಹಿನ್ನೆಲೆಯಲ್ಲಿ ವೈದ್ಯರೊಬ್ಬರು ಹಾಗೂ ಹಿರಿಯ ನರ್ಸ್‌ರನ್ನು ಅಮಾನತುಗೊಳಿಸಲಾಗಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಅಧಿಕಾರಿಗಳು 2013ರ ಮ್ಯಾನುಯಲ್ ಸ್ಕ್ಯಾವೆಂಜಿಂಗ್ ಉದ್ಯೋಗ ನಿಷೇಧ ಮತ್ತು ಅವರ ಪುನರ್ವಸತಿ ಕಾಯ್ದೆಯ ವಿವಿಧ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಸವಣೂರು ತಾಲ್ಲೂಕು ಆಸ್ಪತ್ರೆಗೆ ಸಂಬಂಧಿಸಿದ ವೈದ್ಯಾಧಿಕಾರಿ ಡಾ. ಶಂಕರ್ ವೈ. ಹಿರೇಗೌಡರ್ ಹಾಗೂ ಹಿರಿಯ ನರ್ಸ್ ವನಿತಾ ಅವರನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇಲಾಖಾ ತನಿಖೆ ಪೂರ್ಣಗೊಳ್ಳುವವರೆಗೆ ಅಮಾನತುಗೊಳಿಸಿದೆ. ಮಲದ ಗುಂಡಿ ಒಂದೆರಡು ದಿನಗಳಿಂದ ಉಕ್ಕಿ ಹರಿಯುತ್ತಿತ್ತು. ಈ ಬಗ್ಗೆ ಡಾ. ಹಿರೇಗೌಡರ್ ಅವರು ಆಗಸ್ಟ್ 27ರಂದು ನಗರಸಭೆ ಅಧಿಕಾರಿಗಳಿಗೆ ಪತ್ರ ಬರೆದಿದ್ದರು. ಆದರೆ ಯಾವುದೇ ಪ್ರತಿಕ್ರಿಯೆ ಬಾರದ ಹಿನ್ನೆಲೆಯಲ್ಲಿ, ಅವರು ರೋಗಿಗಳನ್ನೇ ಕೈಯಿಂದ ಮಲ ತೆರವುಗೊಳಿಸುವ ಕೆಲಸಕ್ಕೆ ಬಳಸಿಕೊಂಡಿದ್ದಾರೆ'' ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಮಲದ ಗುಂಡಿಯನ್ನು ಸ್ವಚ್ಛಗೊಳಿಸಿದರೆ ಉತ್ತಮ ಚಿಕಿತ್ಸೆ ಹಾಗೂ ಔಷಧಗಳನ್ನು ನೀಡುವುದಾಗಿ ರೋಗಿಗಳಿಗೆ ಭರವಸೆ ನೀಡಲಾಗಿತ್ತು ಎಂದು ಪೊಲೀಸರು ತಿಳಿಸಿದ್ದಾರೆ.

## 2028 ಕ್ಕೂ ಡಿಕೆ ಶಿವಕುಮಾರ್ ಮುಖ್ಯಮಂತ್ರಿಯಾಗಿ ಮುಂದುವರಿಯುತ್ತಾರಾ? ನೊಣವಿನಕೆರೆ ಅಜ್ಜಯ್ಯ ಭವಿಷ್ಯ!

• ಉದಯವಾಹಿನಿ, ಗದಗ:

ಸಿಎಂ ಡಿಕೆ ಶಿವಕುಮಾರ್ ಅವರು ಗದಗ ಜಿಲ್ಲೆ ಲಕ್ಷ್ಮೇಶ್ವರ ತಾಲ್ಲೂಕಿನ ಮುಕ್ತಿ ಮಂದಿರದ ಲಿಂಗೈಕ್ಯ ವೀರಗಂಗಾಧರ ಸ್ವಾಮಿಗಳ ಗದ್ದುಗೆ ದರ್ಶನ ಪಡೆದು ಪೂಜೆ ಪ್ರಾರ್ಥನೆ ಸಲ್ಲಿಸಿದರು. ಮುಖ್ಯಮಂತ್ರಿ ಆಗಬೇಕೆಂಬ ತಮ್ಮ ಪ್ರಾರ್ಥನೆ ಈಡೇರಿದ ಹಿನ್ನಲೆ ಮುಕ್ತಿ ಮಂದಿರದಲ್ಲಿ ಅರ್ಧ ಗಂಟೆ ವಿಶೇಷ ಪೂಜೆ ಪ್ರಾರ್ಥನೆ ಸಲ್ಲಿಸಿದ್ದಾರೆ. ಪೂಜೆ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಸಿಎಂ, ಗದಗ ಜಿಲ್ಲೆಗೆ ಬರಗಾಲದ ಪ್ರವಾಸಕ್ಕೆ ಬಂದಿದ್ದೆ. ರಾಜ್ಯಾದ್ಯಂತ ಮಳೆ ಬೆಳೆ ಆಗಬೇಕು. ಗದಗ ಜಿಲ್ಲೆಯಲ್ಲಿ ಅತಿ ಹೆಚ್ಚು ಬರ ಇದೆ, ಹೀಗಾಗಿ ಇಲ್ಲೇ ಬರಬೇಕು ಅಂತ ಬಂದಿದ್ದೀನಿ ಎಂದರು.

ಹತ್ತಿ, ಮೆಣಸಿನಕಾಯಿ ,ಕಡಲೆ ಕಾಯಿ, ಯಾವ ಬೆಳೆಗಳೂ ರೈತರ ಕೈಗೆ ಸಿಗ್ತಾ ಇಲ್ಲ. ಬರುವಾಗ ಹೆಲಿಕಾಪ್ಟರ್ ನಲ್ಲಿ ನೋಡ್ತಾ ಬಂದೆ, ಎಲ್ಲಾ ಹೊಲ ಖಾಲಿ ಇದೆ. ಭೀಕರ ಬರಗಾಲ ಇದೆ. ಆಲಮಟ್ಟಿ ಬಿಟ್ಟರೆ ಎಲ್ಲೂ ನೀರಿಲ್ಲ. ನನಗೆ ಮುಕ್ತಿ ಮಂದಿರ


ಉದಯವಾಹಿನಿ ಚಿತ್ರ

ಹೃದಯಕ್ಕೆ ಹತ್ತಿರದವಾದ ಸ್ಥಳ, ವೀರ ಗಂಗಾದರ ಅಜ್ಜನವರ ಐಕ್ಯ ಸ್ಥಳ.

ಪೂಜೆ ಬಳಿಕ ಮಾಧ್ಯಮಗಳ ಜೊತೆ ಮಾತನಾಡಿದ ಅಜ್ಜಯ್ಯ, ಡಿಕೆಶಿ ಮುಖ್ಯಮಂತ್ರಿ

> ಇದೆಲ್ಲಾ ನಮ್ಮ ಧರ್ಮ. ಎಲ್ಲಾ ಧರ್ಮನೂ ಕಾಪಾಡಬೇಕು, ಅವರವರ ಧರ್ಮ ಅವರನ್ನ ಕಾಪಾಡಬೇಕು. ಬಹಳ ವಿಶೇಷವಾಗಿ ಕಾಡಸಿದ್ದೇಶ್ವರ ಮಠದ ಶ್ರೀಗಳು, ಶಾಸಕರು, ಸ್ಥಳೀಯ ಶಾಸಕರು ಎಲ್ಲಾ ಬಂದಿದ್ದರು. ಬಿಲ್ವಪತ್ರೆ ಹಾಕಿ ಪ್ರಾರ್ಥನೆ ಮಾಡಿದೆವು. ರಾಜ್ಯಕ್ಕೆ ಒಳ್ಳೆಯ ಮಳೆ ಬೆಳೆ ಆಗಬೇಕು ಅಂತ ಪ್ರಾರ್ಥನೆ ಮಾಡಿದ್ದೀನಿ ಎಂದು ತಿಳಿಸಿದರು. -ನೊಣವಿನಕೆರೆ ಅಜ್ಜಯ್ಯ

ಸ್ಥಾನದ ಬಗ್ಗೆ ಸ್ಫೋಟಕ ಭವಿಷ್ಯ ನುಡಿದಿದ್ದಾರೆ. ಡಿಕೆಶಿ ಮುಖ್ಯಮಂತ್ರಿ ಸ್ಥಾನದ ಕುರಿತಂತೆ ನೊಣವಿನಕೆರೆ ಅಜ್ಜಯ್ಯ ಸ್ಫೋಟಕ ಭವಿಷ್ಯ ನುಡಿದಿದ್ದಾರೆ.

2028 ರಿಂದ ಮುಂದಿನ 8-10 ವರ್ಷಗಳ ಕಾಲ ಡಿಕೆಶಿ ಮುಖ್ಯಮಂತ್ರಿಯಾಗಿ ಮುಂದುವರೆಯುತ್ತಾರೆ ಅಂತ ನೊಣವಿನಕೆರೆ ಅಜ್ಜಯ್ಯ ಹೇಳಿದ್ದಾರೆ. ಡಿಕೆಶಿ ಪೂಜೆ ಬಳಿಕ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಶ್ರೀಗಳು, ಈ ಭವಿಷ್ಯ ನುಡಿದರು.

## ಆಹಾರ ಸುರಕ್ಷತೆ ನಿಯಮ ಉಲ್ಲಂಘಿಸಿದರೆ ನನ್ನ ಪರಿಚಯಸ್ಥರಿದ್ದರೂ ಬಿಡಲ್ಲ

### ಆಹಾರ ಸುರಕ್ಷತಾ ಕಾಯ್ದೆಯ ನಿಯಮಗಳನ್ನು ಉಲ್ಲಂಘಿಸುವ ಹೋಟೆಲ್, ಕ್ಯಾಟರಿಂಗ್ ಹಾಗೂ ಪಿ.ಜಿ.ಗಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ

• ಉದಯವಾಹಿನಿ, ದಕ್ಷಿಣ ಕನ್ನಡ:

ರಾಜ್ಯದ ಜನರಿಗೆ ಗುಣಮಟ್ಟದ, ಶುದ್ಧ ಹಾಗೂ ಆರೋಗ್ಯಪೂರ್ಣ ಆಹಾರ ಒದಗಿಸುವುದು ಸರ್ಕಾರದ ಕರ್ತವ್ಯವಾಗಿದ್ದು, ಆಹಾರ ಸುರಕ್ಷತಾ ಕಾಯ್ದೆಯ ನಿಯಮಗಳನ್ನು ಉಲ್ಲಂಘಿಸುವ ಹೋಟೆಲ್, ಕ್ಯಾಟರಿಂಗ್ ಹಾಗೂ ಪಿ.ಜಿ.ಗಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ ಕೈಗೊಳ್ಳಲಾಗುವುದು. ಈ ವಿಚಾರದಲ್ಲಿ ನನ್ನ

**1 : ನನ್ನವರಿದ್ದರೂ ರಿಯಾಯಿತಿ ಇಲ್ಲ**
**2 : ಕ್ಯೂ ಆರ್ ಕೋಡ್ ಮೂಲಕ ದೂರು**
**3 : ಪಿ.ಜಿ. ಮಾಲೀಕರಿಗೆ ಕಿವಿಮಾತು**

ಆಪ್ತರು ಅಥವಾ ಪರಿಚಯಸ್ಥರೇ ಸಿಕ್ಕಿಬಿದ್ದರೂ ಯಾವುದೇ ಮುಲಾಜಿಲ್ಲದೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು. ಟಿ. ಖಾದರ್ ಸ್ಪಷ್ಟ ಎಚ್ಚರಿಕೆ ನೀಡಿದ್ದಾರೆ.

ಬುಧವಾರ ನಗರದ ಸರ್ಕ್ಯೂಟ್ ಹೌಸ್‌ನಲ್ಲಿ ನಡೆದ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಂಗಳೂರಿನಲ್ಲಿ ಈಗಾಗಲೇ ಸ್ವೀಟ್ ಮಳಿಗೆಗಳು ಸೇರಿದಂತೆ ವಿವಿಧ ಆಹಾರ ಘಟಕಗಳ ಮೇಲೆ ದಾಳಿ ನಡೆಸಿ ಎರಡು ಘಟಕಗಳನ್ನು ಬಂದ್ ಮಾಡಲಾಗಿದೆ. ಇದು ಕೇವಲ ಬೆಂಗಳೂರಿಗೆ ಮಾತ್ರ ಸೀಮಿತವಾಗಿರದೆ ಮಂಗಳೂರು, ಉಡುಪಿ,

**ಕ್ಯೂ ಆರ್ ಕೋಡ್ ಸ್ಕ್ಯಾನ್ ಮಾಡಿ ದೂರು ದಾಖಲು**


ಉದಯವಾಹಿನಿ ಚಿತ್ರ

ಹುಬ್ಬಳ್ಳಿ, ಬೆಳಗಾವಿ, ಮೈಸೂರಿನಂತಹ ನಗರಗಳಲ್ಲೂ ತೀವ್ರಗೊಳ್ಳಲಿದೆ. ಮಂಗಳೂರಿನಲ್ಲೂ ಕೆಲವೆಡೆ ಪರಿಶೀಲನೆ ನಡೆಸಲಾಗಿದೆ ಎಂದರು

**ನನ್ನವರಿದ್ದರೂ ರಿಯಾಯಿತಿ ಇಲ್ಲ:** ವ್ಯಾಪಾರಿಗಳನ್ನು ಮುಚ್ಚಿಸುವುದು ಅಥವಾ ಬೆದರಿಸುವುದು ನಮ್ಮ ಉದ್ದೇಶವಲ್ಲ. ಆದರೆ ಗ್ರಾಹಕರಿಗೆ ಮೋಸವಾಗಬಾರದು. ಹೋಟೆಲ್ ಮಾಲೀಕರು ನನ್ನ ಪರಿಚಯಸ್ಥರೇ ಇರಬಹುದು. ಆದರೆ ಅಲ್ಲಿ ಬಂದು ಊಟ ಮಾಡುವ ಗ್ರಾಹಕರು ಕೂಡ ನನ್ನ ಪರಿಚಯದವರೇ. ಹೀಗಾಗಿ ಯಾರೇ ಸಿಕ್ಕಿಬಿದ್ದರೂ ನನ್ನ ಪರಿಚಯಸ್ಥರೆಂದು ರಿಯಾಯಿತಿ ಕೊಡುವ ಪ್ರಶ್ನೆಯೇ ಇಲ್ಲ.

ಸಾರ್ವಜನಿಕರ ಆರೋಗ್ಯದ ವಿಚಾರದಲ್ಲಿ ರಾಜಿ ಇಲ್ಲ ಎಂದು ಸ್ಪಷ್ಟಪಡಿಸಿದರು.

**ಕ್ಯೂ ಆರ್ ಕೋಡ್ ಮೂಲಕ ದೂರು:** ಗ್ರಾಹಕರ ಅನುಕೂಲಕ್ಕಾಗಿ ಹೋಟೆಲ್‌ಗಳು, ರೆಸ್ಟೋರೆಂಟ್‌ಗಳು,

> ನೂತನ ಕಟ್ಟಡದ ಸಿವಿಲ್ ಕಾಮಗಾರಿ ಮುಗಿದಿದೆ. ಅರೆಬರೆ ಉದ್ಘಾಟನೆ ಮಾಡದೆ, ಅತ್ಯಾಧುನಿಕ ವೈದ್ಯಕೀಯ ಉಪಕರಣಗಳು ಮತ್ತು ಪೀಠೋಪಕರಣಗಳನ್ನು ಪೂರ್ಣ ಪ್ರಮಾಣದಲ್ಲಿ ಅಳವಡಿಸಿದ ಬಳಿಕವೇ ಸುಸಜ್ಜಿತವಾಗಿ ಶೀಘ್ರದಲ್ಲಿ ಸಾರ್ವಜನಿಕ ಸೇವೆಗೆ ಲೋಕಾರ್ಪಣೆ ಮಾಡಲಾಗುವುದು ಎಂದು ತಿಳಿಸಿದರು.

> ಹೆಚ್ಚುವರಿ ಎಂಬಿಬಿಎಸ್ ವೈದ್ಯರು, ತಜ್ಞರು, ನರ್ಸ್‌ಗಳನ್ನು ನಿಯೋಜಿಸಲಾಗಿದೆ. 24 ಗಂಟೆಯೂ ಔಷಧಾಲಯ ಮತ್ತು ತುರ್ತು ಚಿಕಿತ್ಸೆ ಲಭ್ಯವಾಗುವಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು. ಯಾವುದೇ ಕಾರಣಕ್ಕೂ ಸಾರ್ವಜನಿಕರಿಗೆ ತೊಂದರೆಯಾಗದಂತೆ ನೋಡಿಕೊಳ್ಳಲಾಗುವುದು ಎಂದರು.

ಕ್ಯಾಟರಿಂಗ್ ಕೇಂದ್ರಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಕ್ಯೂ ಆರ್ ಕೋಡ್ ಮತ್ತು ಬಾರ್‌ಕೋಡ್ ಸ್ಟಿಕ್ಕರ್ ಹಾಕಲಾಗುವುದು. ಆಹಾರದಲ್ಲಿ ಲೋಪವಿದ್ದರೆ ಗ್ರಾಹಕರು ಕ್ಯೂ ಆರ್ ಕೋಡ್ ಸ್ಕ್ಯಾನ್ ಮಾಡಿ ತಕ್ಷಣ ದೂರು ದಾಖಲಿಸಬಹುದು. ದೂರು ಬಂದ ತಕ್ಷಣ ಅಧಿಕಾರಿಗಳು ಸ್ಥಳಕ್ಕೆ ತೆರಳಿ ತಪಾಸಣೆ ನಡೆಸಿ ಕ್ರಮ ಕೈಗೊಳ್ಳಲಿದ್ದಾರೆ ಎಂದು ಹೇಳಿದರು.

**ಹಾಸ್ಟೆಲ್, ಪಿ.ಜಿ. ಮಾಲೀಕರಿಗೆ ಕಿವಿಮಾತು:** ಪಿ.ಜಿ. ಹಾಗೂ ಹಾಸ್ಟೆಲ್‌ಗಳನ್ನು ನಡೆಸುವವರು ಅಲ್ಲಿಗೆ ಬರುವ ವಿದ್ಯಾರ್ಥಿಗಳನ್ನು ತಮ್ಮದೇ ಸ್ವಂತ ಮಕ್ಕಳಂತೆ ಭಾವಿಸಿ ಅವರಿಗೆ ಶುಚಿ-ರುಚಿಯಾದ

> ಇನ್ನು, ಸಚಿವ ಬಸವರಾಜ ರಾಯರೆಡ್ಡಿ ಅವರು ಬಹಳ ಹಿರಿಯ ಮತ್ತು ಜ್ಞಾನವುಳ್ಳ ರಾಜಕಾರಣಿ. ಆರ್ಥಿಕ ಸಲಹೆಗಾರರಾಗಿ ಅತ್ಯುತ್ತಮ ಸೇವೆ ಸಲ್ಲಿಸಿದವರು. ಕಾರ್ಯಕ್ರಮವೊಂದರಲ್ಲಿ ಸೌಹಾರ್ದತೆಯಿಂದ ಮಾತನಾಡಿದ ಅವರ ಹೇಳಿಕೆಯನ್ನು ಕೆಲವರು ಸಾಮಾಜಿಕ ಜಾಲತಾಣಗಳಲ್ಲಿ ತಿರುಚಿ, ಅರ್ಧ ತುಣುಕುಗಳನ್ನು ಹಂಚಿಕೊಂಡು ರಾಜಕೀಯ ವಿವಾದ ಮಾಡುತ್ತಿದ್ದಾರೆ.

ಪೌಷ್ಟಿಕ ಆಹಾರ ನೀಡಬೇಕು.

**ಅತ್ಯಾಧುನಿಕ ಎನ್‌ಎಬಿಎಲ್ ಲ್ಯಾಬ್:** ಆಹಾರ ಕಲಬೆರಕೆ ಹಾಗೂ ಗುಣಮಟ್ಟ ಪರೀಕ್ಷಾ ವರದಿಗಳು ನ್ಯಾಯಾಲಯದಲ್ಲೂ ಬಲವಾಗಿ ಸಾಬೀತಾಗುವಂತೆ ಮಾಡಲು ಅಂತಾರಾಷ್ಟ್ರೀಯ ಮಟ್ಟದ ಸುಸಜ್ಜಿತ ಎನ್‌ಎಬಿಎಲ್ ಲ್ಯಾಬ್‌ಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗಿದೆ. ಕೋಲ್ಡ್ ಸ್ಟೋರೇಜ್‌ನಲ್ಲಿ ದೀರ್ಘಕಾಲ ಮೀನು, ಮಾಂಸ ಇಡುವ ಬಗ್ಗೆ ಎಫ್‌ಎಸ್‌ಎಸ್‌ಎಐ ನಿಯಮಾವಳಿಗಳ ಅನ್ವಯ ಕ್ರಮ ವಹಿಸಲಾಗುವುದು ಎಂದು ಸಚಿವರು ಹೇಳಿದರು.

ನನ್ನ ಕ್ಷೇತ್ರದಲ್ಲಿ ನಾನು ಯಾವುದೇ ಕೆಲಸವನ್ನು ಕೆಆರ್‌ಐಡಿಎಲ್‌ಗೆ ನೀಡುವುದಿಲ್ಲ. ಲೋಕೋಪಯೋಗಿ ಹಾಗೂ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಮೂಲಕವೇ ನಿಯಮಾವಳಿಯಂತೆ ಪಾರದರ್ಶಕವಾಗಿ ಟೆಂಡರ್ ಕರೆದು ಕೆಲಸ ಮಾಡಿಸುತ್ತೇನೆ. ಕೆಆರ್‌ಐಡಿಎಲ್‌ನಲ್ಲಿ ಸ್ವಂತ ಸಿಬ್ಬಂದಿ ಇಲ್ಲದೆ ಗುತ್ತಿಗೆದಾರರನ್ನೇ ಅವಲಂಬಿಸಿರುವುದರಿಂದ ಕೆಲಸಗಳು ಅರ್ಧಂಬರ್ಧವಾಗುತ್ತವೆ. ಹೀಗಾಗಿ ಶಾಸಕರು ತಮ್ಮ ಕ್ಷೇತ್ರದ ಕಾಮಗಾರಿಗಳನ್ನು ಪಿ ಡಬ್ಲ್ಯೂಡಿಗೆ ನೀಡುವುದೇ ಸೂಕ್ತ ಎಂದು ಅಭಿಪ್ರಾಯಪಟ್ಟರು.

## ಶೇ.7ರಷ್ಟು ಕಮಿಷನ್: ಡಿ ಕೆ ಶಿವಕುಮಾರ್ ಗೆ ಪತ್ರ ಬರೆದ ಸ್ವಪಕ್ಷ ಶಾಸಕ ಅಶೋಕ್ ಕುಮಾರ್ ರೈ

• ಉದಯವಾಹಿನಿ, ಮಂಗಳೂರು:

ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಯಮಿತ ನಲ್ಲಿ ಭ್ರಷ್ಟಾಚಾರ ನಡೆದಿದೆ ಎಂಬ ಆರೋಪಗಳು ಕೇಳಿಬಂದ ಹಿನ್ನೆಲೆಯಲ್ಲಿ ಸರ್ಕಾರ ತನಿಖೆಗೆ ಆದೇಶಿಸಿದೆ. ಪುತ್ತೂರು ಕಾಂಗ್ರೆಸ್ ಶಾಸಕ ಕೆ. ಅಶೋಕ್ ಕುಮಾರ್ ರೈ, ಸಚಿವರ ಹೆಸರಿನಲ್ಲಿ ಗುತ್ತಿಗೆದಾರರಿಂದ ಲಂಚಕ್ಕೆ ಬೇಡಿಕೆ ಇಟ್ಟಿದ್ದಾರೆ ಎಂದು ಇಬ್ಬರು ಇಂಜಿನಿಯರ್‌ಗಳ ವಿರುದ್ಧ ಆರೋಪಿಸಿದ್ದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವ ಈಶ್ವರ ಬಿ. ಖಂಡ್ರೆ ಅವರು ಉನ್ನತ ಮಟ್ಟದ ತನಿಖೆಗೆ ಆದೇಶಿಸಿದ್ದು, ಕೆಆರ್‌ಐಡಿಎಲ್ ಮಾತ್ರ ಯಾವುದೇ ಅಕ್ರಮ ನಡೆದಿಲ್ಲ ಎಂದು ಸ್ಪಷ್ಟಪಡಿಸಿದೆ. ವಿವಾದಕ್ಕೆ ಕಾರಣವಾಗಿರುವ ಶೇ.7ರಷ್ಟು ಕಡಿತವು ಅಕ್ರಮ ಶುಲ್ಕವಲ್ಲ, ಬದಲಿಗೆ ಅಧಿಕೃತ ಆಡಳಿತಾತ್ಮಕ ಶುಲ್ಕವಾಗಿದೆ ಎಂದು ಸಂಸ್ಥೆ ಹೇಳಿದೆ.


ಉದಯವಾಹಿನಿ ಚಿತ್ರ

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಬರೆದ ಪತ್ರದಲ್ಲಿ ಅಶೋಕ್ ಕುಮಾರ್ ರೈ, ಕೆಆರ್‌ಐಡಿಎಲ್‌ನ ಮಂಗಳೂರು ವಿಭಾಗದ ಕಾರ್ಯಪಾಲಕ ಇಂಜಿನಿಯರ್ ವಿಜಯ್ ಹಾಗೂ ಕಿರಿಯ ಇಂಜಿನಿಯರ್ ಪ್ರಜ್ವಲ್ ಅವರ ಕಾರ್ಯವೈಖರಿ ಕುರಿತು ಇಲಾಖಾ ತನಿಖೆ ನಡೆಸುವಂತೆ ಕೋರಿದ್ದಾರೆ. ಸರ್ಕಾರಿ ಕಾಮಗಾರಿಗಳನ್ನು ಕೈಗೆತ್ತಿಕೊಂಡಿರುವ ಗುತ್ತಿಗೆದಾರರು ಈ ಇಬ್ಬರು ಅಧಿಕಾರಿಗಳಿಂದ ಕಿರುಕುಳ, ಬೆದರಿಕೆ ಹಾಗೂ ಅಕ್ರಮ ಹಣದ ಬೇಡಿಕೆ ಎದುರಿಸುತ್ತಿರುವ ಬಗ್ಗೆ ದೂರು ನೀಡಿದ್ದಾರೆ ಎಂದು ಆರೋಪಿಸಿದ್ದಾರೆ.

> ಈ ಆರೋಪಗಳು ಗಂಭೀರವಾಗಿದ್ದು, ಸಾರ್ವಜನಿಕ ಹಣದಿಂದ ಕೈಗೊಳ್ಳುವ ಅಭಿವೃದ್ಧಿ ಕಾಮಗಾರಿಗಳಲ್ಲಿ ಭ್ರಷ್ಟಾಚಾರ ನಡೆದರೆ ಪಾರದರ್ಶಕತೆಗೆ ಧಕ್ಕೆಯಾಗುತ್ತದೆ, ಮೂಲಸೌಕರ್ಯದ ಗುಣಮಟ್ಟ ಕುಸಿಯುತ್ತದೆ ಹಾಗೂ ಸರ್ಕಾರಿ ಸಂಸ್ಥೆಗಳ ಮೇಲಿನ ಜನರ ವಿಶ್ವಾಸಕ್ಕೆ ಧಕ್ಕೆ ಉಂಟಾಗುತ್ತದೆ ಎಂದು ಪತ್ರದಲ್ಲಿ ಹೇಳಿದ್ದಾರೆ. -ಅಶೋಕ್ ಕುಮಾರ್ ರೈ

ಅಧಿಕಾರಿಗಳು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಆರ್‌ಡಿಪಿಆರ್ ಸಚಿವರ ಹೆಸರಿನಲ್ಲಿ ಪ್ರತಿ ತಿಂಗಳು ಹಣ ಪಾವತಿಸಬೇಕು ಹೇಳುತ್ತಿದ್ದರು ಎಂದು ಗುತ್ತಿಗೆದಾರರು ಆರೋಪಿಸಿರುವುದಾಗಿ ಅಶೋಕ್ ಕುಮಾರ್ ರೈ ತಿಳಿಸಿದ್ದಾರೆ. ಹೆಚ್ಚುವರಿಯಾಗಿ ಶೇ.7ರಷ್ಟು ''ಕೆಆರ್‌ಐಡಿಎಲ್ ಚಾರ್ಜ್'' ಪಾವತಿಸುವಂತೆ ಗುತ್ತಿಗೆದಾರರನ್ನು ಒತ್ತಾಯಿಸಲಾಗುತ್ತಿತ್ತು. ಪ್ರಶ್ನಿಸಿದವರಿಗೆ ಬೆದರಿಕೆ ಹಾಕಲಾಗುತ್ತಿತ್ತು ಎಂದು

## ಧರ್ಮದ ಬಗ್ಗೆ ಅವರಿಗಿಂತ ಚೆನ್ನಾಗಿ ನನಗೆ ಗೊತ್ತು: ಬಸವರಾಜ ರಾಯರೆಡ್ಡಿ

• ಉದಯವಾಹಿನಿ, ಕೊಪ್ಪಳ:

ನನ್ನ ಜೊತೆ ಹಿಂದೂ ಧರ್ಮದ ಬಗ್ಗೆ ಯಾರು ಚರ್ಚೆ ಮಾಡೋಕೆ ತಯಾರಿದ್ದೀರಿ ಬನ್ನಿ ಎಂದು ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ವಿಪಕ್ಷಗಳು ಹಾಗೂ ಟೀಕಾಕಾರರಿಗೆ ಸವಾಲು ಹಾಕಿದ್ದಾರೆ.ಕೊಪ್ಪಳ ಜಿಲ್ಲಾಧಿಕಾರಿಗಳ ಜೊತೆಗೆ ಸಭೆ ನಡೆದ ಬಳಿಕ ಮಾಧ್ಯಮಗಳೊಂದಿಗೆ ಅವರು ಮಾತನಾಡಿದರು. ಜಗತ್ತಿನಲ್ಲಿ ಇಸ್ಲಾಂ ಅತ್ಯಂತ ಶ್ರೇಷ್ಠ ಹಾಗೂ ವೈಜ್ಞಾನಿಕವಾದ ಧರ್ಮವಾಗಿದ್ದು, ನನಗೆ ಮಕ್ಕಾ-ಮದೀನಾದ ಹಜ್ ಯಾತ್ರೆಗೆ ಹೋಗುವ ತೀವ್ರ ಆಸೆಯಿದೆ ಎನ್ನುವ ತಮ್ಮದೇ ಹೇಳಿಕೆಗೆ ವ್ಯಕ್ತವಾದ ಬಿಜೆಪಿ ನಾಯಕರ ಟೀಕೆಗೆ ಪ್ರತಿಕ್ರಿಯಿಸಿದರು.

ನಾನು ಯಾವ ಧರ್ಮವನ್ನೂ ಬೈಯಲೇ ಇಲ್ಲವಲ್ಲಾ ನಾನು ಅಲ್ಲಿಗೆ ಹೋದಾಗ ಅವರನ್ನ ಬೈಯ್ಯೋಕೆ ಆಗುತ್ತಾ? ಅದು ಸ್ಟುಪಿಡ್ ಎಂದು ಪರೋಕ್ಷವಾಗಿ ಟೀಕಾಕಾರರಿಗೆ ತಿರುಗೇಟು ಕೊಟ್ಟ ರಾಯರೆಡ್ಡಿ ಅವರು, ನನ್ನ ಜೊತೆ ಹಿಂದೂ ಧರ್ಮದ ಬಗ್ಗೆ ಯಾರು ಚರ್ಚೆ ಮಾಡೋಕೆ ತಯಾರಿದ್ದೀರಿ ಬನ್ನಿ ಎಂದು ಸವಾಲೆಸೆದರು. ನಾನು ಉಪನಿಷತ್ ಮಾತಾಡ್ತೀನಿ, ಯಾರಾದ್ರೂ ಇದ್ರೆ ಬರಲಿ ಎಂದ ರಾಯರೆಡ್ಡಿ, ಪ್ರತಾಪ್ ಸಿಂಹ ಅಂದ ತಕ್ಷಣ ಯಾರಿದ್ದಾರೆ ಬರಲಿ ಎಂದು ಸಿಡಿಮಿಡಿಗೊಂಡರು.

## ಬರಪೀಡಿತ ಪ್ರದೇಶ ಘೋಷಿಸಲು ಲಂಚ ಬಯಸುವ ಸರ್ಕಾರ: ಬಿ.ವೈ. ವಿಜಯೇಂದ್ರ ವಾಗ್ದಾಳಿ

• ಉದಯವಾಹಿನಿ, ಮಸ್ಕಿ, :

ಸುಳ್ಳುಗಳನ್ನು ಹೇಳಿ ಅಧಿಕಾರಕ್ಕೆ ಬಂದ ಈ ಕಾಂಗ್ರೆಸ್ ಪಕ್ಷವು ಅಧಿಕಾರಕ್ಕೆ ಬಂದ ಮೇಲೆ ರೈತರನ್ನು ಮರೆತಿದೆ. ದಲಿತರನ್ನೂ ಅದು ಮರೆತಿದೆ. ಯುವಜನತೆ, ಬಡವರನ್ನೂ ಮರೆತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ವಾಗ್ದಾಳಿ ನಡೆಸಿದ್ದಾರೆ. ಪಾದಯಾತ್ರೆಯ ಎರಡನೇ ದಿನವಾದ ಬುಧವಾರ ಮಾತನಾಡಿದ ಅವರು, ಮಸ್ಕಿಯಲ್ಲಿ ಭೀಕರ ಬರ ಇದೆ. ಆದರೂ ಇದನ್ನು ಬರಪೀಡಿತ ಎಂದು ಘೋಷಿಸಿಲ್ಲ. ಈ ಕಾಂಗ್ರೆಸ್ ಸರ್ಕಾರದಲ್ಲಿ ಲಂಚ ಕೊಡದಿದ್ದರೆ ಏನೂ ಆಗುವುದಿಲ್ಲ. ಮಸ್ಕಿಯ ರೈತರು 10 ಲಕ್ಷವೋ 50 ಲಕ್ಷವೋ ಲಂಚ ಕೊಟ್ಟರೆ ಮುಖ್ಯಮಂತ್ರಿಗಳು ಈ ಪ್ರದೇಶವನ್ನು ಬರಪೀಡಿತ ಪ್ರದೇಶವಾಗಿ ಘೋಷಿಸಬಹುದು ಎಂದು ವಾಗ್ದಾಳಿ ನಡೆಸಿದ್ದಾರೆ.

52 ಸಾವಿರ ಕೋಟಿ ರೂ. ಎಸ್‌ಇಪಿ, ಟಿಎಸ್‌ಪಿ ಹಣವನ್ನು ಬೇರೆ ಬೇರೆ ಇಲಾಖೆಗೆ ವರ್ಗಾಯಿಸಿದ್ದರ ಪರಿಣಾಮವಾಗಿ ದಲಿತರ ಅಭಿವೃದ್ಧಿ ಕುಂಠಿತವಾಗಿದೆ. ಯುವಕರಿಗೆ ಉದ್ಯೋಗ ಕೊಡುವ ಅವಕಾಶ ತಪ್ಪಿಹೋಗಿದೆ. ದಲಿತರಿಗೆ ಮನೆ ಕಟ್ಟುವ ಅವಕಾಶ ಇತ್ತು. ಆ ಹಣದಲ್ಲಿ ಶಿಕ್ಷಣಕ್ಕೆ ಒತ್ತು ಕೊಡಬಹುದಾಗಿತ್ತು. ಬಡವರ ಮನೆ ಬಾಗಿಲಿಗೆ ನೀರು ಕೊಡಬಹುದಾಗಿತ್ತು. ಇದ್ಯಾವುದನ್ನೂ


ಉದಯವಾಹಿನಿ ಚಿತ್ರ

ಮಾಡದೇ ಆ ಹಣವನ್ನು ಬೇರೆ ಇಲಾಖೆಗೆ ವರ್ಗಾಯಿಸಿದ್ದಾರೆ. ಆ ಭಗವಂತನೂ ನಿಮ್ಮನ್ನು ಕ್ಷಮಿಸಲು ಸಾಧ್ಯವಿಲ್ಲ ಎಂದು ಕಿಡಿಕಾರಿದರು. ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ 187 ಕೋಟಿ ರೂ. ಲೂಟಿ ಹೊಡೆದಿದ್ದಾರೆ. ಈ ಹಣದಲ್ಲಿ ಕಾಂಗ್ರೆಸ್ ಹೈಕಮಾಂಡಿಗೆ ಕಪ್ಪ ಕಾಣಿಕೆ ಕೊಟ್ಟು ಅಧಿಕಾರ ನಡೆಸುತ್ತಿದ್ದ ಭ್ರಷ್ಟ ಸಚಿವರನ್ನು ಕೈಬಿಡಲು ಒತ್ತಾಯಿಸಿ ನಾವು ಪಾದಯಾತ್ರೆ ಘೋಷಿಸಿದ್ದೆವು. ಇದರಿಂದ ಮುಖ್ಯಮಂತ್ರಿಗಳಿಗೆ ಎದೆಯಲ್ಲಿ ಡವಡವ ಶುರುವಾಯಿತು ಎಂದು ಟೀಕಿಸಿದರು.

## ಮನೆ-ಮನೆ ಸಮೀಕ್ಷೆಗೆ ಸರ್ಕಾರ ಮುಂದು, ಸಮೀಕ್ಷೆ ತಪ್ಪಿಸಿದ್ರೆ ನಿಲ್ಲಲಿದೆ 2,000 ರೂ. ಹಣ..!


• ಉದಯವಾಹಿನಿ, ಮಂಗಳೂರು:

ಗೃಹಲಕ್ಷ್ಮಿ ಯೋಜನೆಯಲ್ಲಿ ನಡೆಯುತ್ತಿರುವ ಅಕ್ರಮ ಹಾಗೂ ಸೋರಿಕೆಯನ್ನು ತಡೆಗಟ್ಟುವ ಉದ್ದೇಶದಿಂದ ರಾಜ್ಯ ಸರ್ಕಾರ ರಾಜ್ಯಾದ್ಯಂತ ಫಲಾನುಭವಿಗಳ ಮನೆ ಮನೆಗೆ ತೆರಳಿ ಮರುಪರಿಶೀಲನೆ ನಡೆಸಲು ಮುಂದಾಗಿದೆ.

ಮೃತಪಟ್ಟ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ಒಟ್ಟು ರೂ.177 ಕೋಟಿ ಹಣ ಜಮೆಯಾಗಿರುವುದು ಪತ್ತೆಯಾದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗುತ್ತಿದೆ.

ಈಗಾಗಲೇ ಅನರ್ಹ ಫಲಾನುಭವಿಗಳನ್ನು ಯೋಜನೆಯಿಂದ ಕೈಬಿಡುವ ಉದ್ದೇಶದಿಂದ ಗೃಹಜ್ಯೋತಿ ಯೋಜನೆಯಲ್ಲೂ ಪರಿಶೀಲನಾ ಕಾರ್ಯ ಆರಂಭಿಸಲಾಗಿದೆ.ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ಎಂ. ರೇವಣ್ಣ ಮಾತನಾಡಿ, ಫಲಾನುಭವಿಗಳ ಪರಿಶೀಲನಾ ಪ್ರಕ್ರಿಯೆಯಲ್ಲಿ ಸರ್ಕಾರಿ ಅಧಿಕಾರಿಗಳಿಗೆ ನೆರವಾಗಲು ಗ್ರಾಮ ಪಂಚಾಯಿತಿ ಹಾಗೂ ವಾರ್ಡ್ ಮಟ್ಟದಲ್ಲಿ ಆರು ಸದಸ್ಯರ ಸಮಿತಿಗಳನ್ನು ರಚಿಸಲಾಗುವುದು ಎಂದು ಹೇಳಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಚರ್ಚಿಸಿದ



ಉದಯವಾಹಿನಿ ಚಿತ್ರ

ಬಳಿಕ ಆಗಸ್ಟ್ 31ರಂದು ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳ ಮರುಪರಿಶೀಲನೆಗೆ ಸಂಬಂಧಿಸಿದಂತೆ ಸರ್ಕಾರ ಆದೇಶ ಹೊರಡಿಸಿದೆ. ಈ ಸಮಿತಿಗಳ ರಚನೆಯಿಂದ ಸರ್ಕಾರಕ್ಕೆ ಯಾವುದೇ ಹೆಚ್ಚುವರಿ ಆರ್ಥಿಕ ಹೊರೆಯಾಗುವುದಿಲ್ಲ. ಸಮಿತಿಗಳು ಕೇವಲ ಪರಿಶೀಲನಾ ಪ್ರಕ್ರಿಯೆಗೆ ಅಗತ್ಯ ಸಹಕಾರ ನೀಡಲಿವೆ ಎಂದು ಸ್ಪಷ್ಟಪಡಿಸಿದರು.

ಗೃಹಲಕ್ಷ್ಮಿ ಯೋಜನೆಯ ಮರುಪರಿಶೀಲನೆಗಾಗಿ ರಚಿಸಲಾಗುವ ಆರು ಸದಸ್ಯರ ಸಮಿತಿಯಲ್ಲಿ ಇಬ್ಬರು ಮಹಿಳೆಯರು ಸೇರಿದಂತೆ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಪರಿಶಿಷ್ಟ ಜಾತಿ, ಅಲ್ಪಸಂಖ್ಯಾತರು, ಹಿಂದುಳಿದ ವರ್ಗ ಮತ್ತು ಸಾಮಾನ್ಯ ವರ್ಗದ ಪ್ರತಿನಿಧಿಗಳು ಇರಲಿದ್ದಾರೆ.

## ಬೀದಿ ಬದಿ ವಲಯದಿಂದಲೇ ದೂರ ಉಳಿದಿರುವ ಬೀದಿ ಬದಿ ವ್ಯಾಪಾರಿಗಳು

### ಕಳೆದ ನಾಲ್ಕು ವರ್ಷಗಳಿಂದ ಕಟ್ಟಡ ನಿರ್ಮಾಣ ಕಾಮಗಾರಿ ನಡೆದು, ಮುಗಿಸಲಾಗಿದೆ. ಆದರೆ ಇದುವರೆಗೂ ಕಟ್ಟಡದ ಉದ್ಘಾಟನೆ ಆಗಿಲ್ಲ.

• ಉದಯವಾಹಿನಿ, ಶಿವಮೊಗ್ಗ:

ನಗರದಲ್ಲಿ ಸ್ಮಾರ್ಟ್ ಸಿಟಿ ಯೋಜನೆಯಡಿ ಖಾಸಗಿ ಬಸ್ ನಿಲ್ದಾಣದ ಪಕ್ಕದಲ್ಲಿ ಬೀದಿ ಬದಿ ವ್ಯಾಪಾರಿಗಳಿಗಾಗಿಯೇ ಸುಮಾರು ನಾಲ್ಕೈದು ಕೋಟಿ ರೂ. ವೆಚ್ಚದಲ್ಲಿ ಕಟ್ಟಡ ನಿರ್ಮಾಣ ಮಾಡಲಾಗಿದೆ. ಆದರೆ ಇದುವರೆಗೂ ಕಟ್ಟಡ ಉದ್ಘಾಟನೆ ಆಗದೇ ಇದ್ದು, ಬೀದಿ ಬದಿ ವ್ಯಾಪಾರಿಗಳು ಇನ್ನೂ ಬೀದಿಯಲ್ಲಿಯೇ ಇರುವಂತಾಗಿದೆ.

**1 : ದಿವ್ಯ ನಿರ್ಲಕ್ಷ್ಯಕ್ಕೆ ಒಳಪಡಿಸುತ್ತಿದೆ**
**2 : 255 ಬೀದಿ ಬದಿ ವ್ಯಾಪಾರಿಗಳಿದ್ದಾರೆ**
**3 : ಮಾದರಿ ವ್ಯಾಪಾರ ಸ್ಥಳ ಆಗುತ್ತಿತ್ತು**

ಕಟ್ಟಡಕ್ಕೆ ಪ್ರವೇಶ ಭಾಗ್ಯವಿಲ್ಲದಾಗಿದ್ದು, ಬೀದಿ ಬದಿ ವ್ಯಾಪಾರಿಗಳು ಬಿಸಿಲಿನಲ್ಲಿ ಬೆಂದು, ಮಳೆಯಲ್ಲಿ ನೆಂದು ಬೇಸತ್ತಿದ್ದು ತಮಗೆ ಒಂದು ನೆಲೆ ಸಿಗುವ ಆಸೆಯ ಕಣ್ಣುಗಳಲ್ಲಿಯೇ ಇನ್ನೂ ಇದ್ದಾರೆ. ಇನ್ನಾದರೂ ಮಹಾನಗರ ಪಾಲಿಕೆಯು ಈ ಬಗ್ಗೆ ಆದಷ್ಟು ಬೇಗ ಸಭೆ ನಡೆಸಿ, ತಮಗೆ ಒಂದು ನೆಲೆ ಕಲ್ಪಿಸಿ ಕೊಡಲಿ ಎಂಬುದು ಬೀದಿ ಬದಿ ವ್ಯಾಪಾರಿಗಳ ಒತ್ತಾಯವಾಗಿದೆ.

ಕಟ್ಟಡ ಯಾಕೆ ಉದ್ಘಾಟನೆ ಆಗಿಲ್ಲ ಹಾಗೂ ಬೀದಿ ಬದಿ ವ್ಯಾಪಾರಿಗಳಿಗೆ ಯಾಕೆ ಜಾಗ ನೀಡಿಲ್ಲ ಎಂಬುದರ ಕುರಿತು ಮಹಾನಗರ ಪಾಲಿಕೆ ಆಯುಕ್ತರಾದ ಮಾಯಣ್ಣ ಗೌಡ ಜೊತೆ ಮಾತನಾಡಿ ಮಾಹಿತಿ ನೀಡಿದ್ದಾರೆ. ಶಿವಮೊಗ್ಗ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಖಾಸಗಿ ಬಸ್



ಉದಯವಾಹಿನಿ ಚಿತ್ರ

> ಖಾಸಗಿ ಬಸ್ ನಿಲ್ದಾಣದ ಪಕ್ಕದಲ್ಲಿ ಬೀದಿ ಬದಿ ವ್ಯಾಪಾರಿಗಳಿಗಾಗಿಯೇ ಕೋಟ್ಯಂತರ ರೂ. ವೆಚ್ಚದಲ್ಲಿ ದೊಡ್ಡ ಕಟ್ಟಡ ಕಟ್ಟಲಾಗಿದೆ. ಆದರೆ ಕಟ್ಟಡ ನಿರ್ಮಾಣವಾಗಿ 4 ವರ್ಷಗಳಾದರೂ ಸಹ ಇನ್ನೂ ಕಟ್ಟಡ ಉದ್ಘಾಟನೆ ಆಗಿಲ್ಲ. ಬೀದಿ ಬದಿ ವ್ಯಾಪಾರಿಗಳಿಗೆ ನೀಡಲಿಲ್ಲ. ಈ ಮೂಲಕ ಪಾಲಿಕೆಯು ಬೀದಿ ಬದಿ ವ್ಯಾಪಾರಿಗಳನ್ನು ದಿವ್ಯ ನಿರ್ಲಕ್ಷ್ಯಕ್ಕೆ ಒಳಪಡಿಸುತ್ತಿದೆ. -ಅಶೋಕ್ ಕುಮಾರ್

ಸ್ಟ್ಯಾಂಡ್ ಪಕ್ಕದಲ್ಲಿ ಸ್ಮಾರ್ಟ್ ಸಿಟಿ ಪ್ರೈವೇಟ್ ಲಿಮಿಟೆಡ್ ವತಿಯಿಂದ ಒಂದು ಸುಸಜ್ಜಿತ ಸಂಕೀರ್ಣವನ್ನು ನಿರ್ಮಾಣ ಮಾಡಲಾಗುತ್ತಿದೆ.

ನೆಲ ಭಾಗದಲ್ಲಿ ಆಟೋ ಸ್ಟ್ಯಾಂಡ್‌ಗೆ ಅವಕಾಶ ಮಾಡಿಕೊಟ್ಟಿದ್ದು,

> ಯಾರು ಬೀದಿ ಬದಿ ವ್ಯಾಪಾರಿಗಳಿದ್ದಾರೆ. ಅವರಿಗೆ ಗುರುತಿನ ಚೀಟಿ ನೀಡಿದ್ದಾರೆ. ಅಲ್ಲದೆ ಅವರು ಮಾಡುವ ವ್ಯಾಪಾರಕ್ಕೆ ಸಂಬಂಧಪಟ್ಟಂತೆ ಅವರಿಗೆ ಅಷ್ಟು ಅಳತೆಯ ಜಾಗವನ್ನು ನೀಡಲಾಗಿದೆ. ಆದರೆ ಅವುಗಳನ್ನು ಇನ್ನೂ ಅನುಷ್ಠಾನ ಮಾಡಿಲ್ಲ. ಬೀದಿ ಬದಿ ವ್ಯಾಪಾರಿಗಳಿಗೆ ಜಾಗ ಹಂಚಿಕೆ ಮಾಡಲು ಸಭೆ ನಡೆಸಲು ಅನೇಕ ಕಾರಣಗಳನ್ನು ನೀಡಲಾಗುತ್ತಿದೆ. -ಚನ್ನವೀರಪ್ಪ ಗಾಮನಗಟ್ಟಿ

ಉಳಿದಿದ್ದನ್ನು ಪೇಡ್ ಪಾರ್ಕಿಂಗ್ ಮಾಡಲು ಯೋಚಿಸಲಾಗಿದೆ. ಇದರ ಮೊದಲ ಮಹಡಿಯಲ್ಲಿ 85 ಬೀದಿ ಬದಿ ವ್ಯಾಪಾರಿಗಳ ವಲಯ ಅಂತ ಮಾಡಲಾಗಿದೆ. ಫುಟ್‌ಪಾತ್‌ನಲ್ಲಿ ವ್ಯಾಪಾರಿಗಳಿಗೆ ಜಾಗ ಗುರುತು ಮಾಡಲಾಗಿದೆ. ಈಗ ಬೀದಿ ಬದಿ ವ್ಯಾಪಾರಿಗಳನ್ನು

> ಇದರಿಂದ ಶಿವಮೊಗ್ಗ ಮಾದರಿ ವ್ಯಾಪಾರ ಸ್ಥಳ ಆಗುತ್ತಿತ್ತು. ಆದರೆ ಜಿಲ್ಲಾಡಳಿತ ದಿವ್ಯ ನಿರ್ಲಕ್ಷ್ಯವನ್ನು ತೋರುತ್ತಿದೆ. ಈ ನಿಟ್ಟಿನಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು ಹಾಗೂ ಪಾಲಿಕೆ ಆಯುಕ್ತರು ಇದರ ಬಗ್ಗೆ ಸೂಕ್ತ ಸಭೆ ನಡೆಸಿ, ಕಾನೂನು ರೀತಿ ಖಾಸಗಿ ಬಸ್ ನಿಲ್ದಾಣ ಸುತ್ತಮುತ್ತ ಇರುವ ವ್ಯಾಪಾರಿಗಳಿಗ ನೀಡಬೇಕು ಎಂದರು.

ಅಲ್ಲಿಗೆ ಸ್ಥಳಾಂತರ ಮಾಡಲು ನಿರ್ಧಾರ ಮಾಡಲಾಗಿದೆ.

ಅಲ್ಲದೆ ಎರಡನೇ ಮಹಡಿಯಲ್ಲಿ ಸುಮಾರು 6 ಸಾವಿರ ಅಡಿಗಳಷ್ಟು ದೊಡ್ಡದಾದ ವಾಣಿಜ್ಯ ಸಂಕೀರ್ಣಕ್ಕೆ ಜಾಗ ಇದೆ. ಇ-ಹರಾಜು ಮಾಡಲು ನಿರ್ಧಾರಿಸಲಾಗಿದೆ. ಇ-ಹರಾಜು ಮಾಡಲು ರಾಜ್ಯ ಸರ್ಕಾರದಿಂದ ಡ್ರಾಫ್ಟ್ ಎಸ್ಟೇಟ್ ಮ್ಯಾನೇಜ್ಮೆಂಟ್ ಟೂಲ್ಸ್ ಅಂತ ಪಬ್ಲಿಷ್ ಮಾಡಲಾಗಿದೆ.

ಇದರಲ್ಲಿ ಯಾವ ಸ್ಥಳಕ್ಕೆ ಎಷ್ಟು ದರ ನಿಗದಿ ಮಾಡಬೇಕೆಂಬ ಮಾರ್ಗಸೂಚಿ ಇದೆ. ಇದರಂತೆ ಹರಾಜು ಮಾಡಲಾಗುತ್ತದೆ. ಹಂಚಿಕೆಯ ನಿಧಾನಗತಿಗೆ ಕಾರಣವಾಗಿದ್ದು, ಕಟ್ಟಡದ ಅಗ್ನಿಶಾಮಕದಳದ ಎನ್‌ಒಸಿ, ಪರಿಸರ ವಿಭಾಗದ ಎನ್‌ಒಸಿ ಹಾಗೂ ಎಲೆಕ್ಟ್ರಿಕ್ ಲಿಫ್ಟ್ ಇತ್ಯಾದಿ ಕಾರ್ಯಗಳನ್ನು ಮುಗಿಸಿ ಪಾಲಿಕೆಗೆ ಹಸ್ತಾಂತರ ಮಾಡಿದ್ದು 2025 ರ ಡಿಸೆಂಬರ್‌ನಲ್ಲಿ. ಎಸ್ಟೇಟ್ ಮ್ಯಾನೇಜ್ಮೆಂಟ್ ಟೂಲ್ ಈಗ ಬಂದಿರುವುದರಿಂದ ಅದಷ್ಟು ಬೇಗ ಹರಾಜು ಮಾಡಲಾಗುವುದು. ಬೀದಿ ಬದಿ ವ್ಯಾಪಾರಿಗಳು ಸಹ ಇದಕ್ಕೆ ನಿಗದಿತ ದರದ ಹಣ ಪಾವತಿ ಮಾಡಬೇಕಾಗುತ್ತದೆ ಎಂದರು.